ಸಂಪುಟ: 14 Volume | ಸಂಚಿಕೆ: 71 Issue | ಪುಟಗಳು 08 Pages | ಶನಿವಾರ 20 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಮರದ ಮೇಲೆ ಕುಳಿತ ಹಕ್ಕಿಗೆ ಕೊಂಬೆ ಮುರಿದು ಬೀಳುವ ಭಯವಿರದು. ಅದು ನಂಬಿರುವುದು ತನ್ನ ರೆಕ್ಕೆಗಳನ್ನೇ ಹೊರತು ಕೊಂಬೆಯನ್ನಲ್ಲ.

–ಕುವೆಂಪು



ಸಿಎಂ ಡಿಕೆ ಶಿವಕುಮಾರ್ ಅವರು ಪತ್ನಿ ಉಷಾ ಅವರ ಜತೆ ತಿರುಪತಿ ತಿರುಮಲ ದೇಗುಲದಲ್ಲಿ ಶುಕ್ರವಾರ ಮುಂಜಾನೆ ವೆಂಕಟೇಶ್ವರ ಸ್ವಾಮಿ ದರ್ಶನ ಪಡೆದರು.



ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ ಅವರ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಶೀಘ್ರ ಗುಣಮುಖರಾಗುವಂತೆ ಹಾರೈಸಿದರು.



ಅಖಿಲ ಭಾರತ ಮಹಿಳಾ ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಶೋಭಾ ಓಜಾ ಅವರು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ವಿಧಾನ ಸೌಧದಲ್ಲಿ ಶುಕ್ರವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು.



ರಾಜ್ಯ ವಿಧಾನಸಭೆಯಿಂದ ವಿಧಾನ ಪರಿಷತ್ತಿಗೆ ನಡೆದ ಚುನಾವಣೆಯಲ್ಲಿ ಜಯಗಳಿಸಿದ ಬಿಜೆಪಿಯ ಲಿಂಗರಾಜ ಪಾಟೀಲ ಹಾಗೂ ರಘು ಕೌಟಿಲ್ಯ ಅವರು ಇಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ಬೆಂಗಳೂರಿನ ಆರ್. ಟಿ. ನಗರದಲ್ಲಿ ಭೇಟಿ ಮಾಡಿದರು.

## ಆರೋಗ್ಯ ಆರೈಕೆಗೆ ಕಪಿವ ಆಯುರ್ವೇದ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಭಾರತದ ಮೊದಲ ಆಧುನಿಕ ಸಮಗ್ರ ಆಯುರ್ವೇದ ಬ್ರ್ಯಾಂಡ್, ದೈನಂದಿನ ನೈಸರ್ಗಿಕ ಮತ್ತು ವೈದ್ಯಕೀಯವಾಗಿ ಪರೀಕ್ಷಿಸಿದ ಸ್ವಾಸ್ಥ್ಯ ಉತ್ಪನ್ನಗಳನ್ನು ಒದಗಿಸುವ ಕಪಿವಾ, ಕ್ಲಿನಿಕಲ್ ಆರೈಕೆಗೆ ಲಭ್ಯತೆಯನ್ನು ಗುರುತಿಸುವ ಮತ್ತು ನಗರಕ್ಕೆ ಹೆಚ್ಚು ರಚನಾತ್ಮಕವಾದ ಆಯುರ್ವೇದ ಆಧಾರಿತ ಚಿಕಿತ್ಸಾ ವಿಧಾನವನ್ನು ತರುವ ಆಯುರ್ವೇದ ಚಿಕಿತ್ಸಾಲಯಗಳನ್ನು ಪ್ರಾರಂಭಿಸಿದೆ. ಕಪಿವಾ ಪ್ರಸ್ತುತ ಸರ್ಜಾಪುರ ರಸ್ತೆಯ ವೈಟ್ ಫೀಲ್ಡ್‌ನಲ್ಲಿ, ಆರ್ & ಡಿ ಕೇಂದ್ರದ ನೆಲಮಹಡಿಯಲ್ಲಿ ಮತ್ತು 27 ನೇ ಮುಖ್ಯರಸ್ತೆಯಲ್ಲಿ ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಮೂರು ಕ್ಲಿನಿಕ್ಗಳನ್ನು ಹೊಂದಿದೆ.

ಈ ಮಾದರಿಗೆ ಬೆಂಗಳೂರು ಸೂಕ್ತವಾದ ಆರಂಭಿಕ ಹಂತವಾಗಿದೆ. ದೀರ್ಘಕಾಲದ ಪರಿಸ್ಥಿತಿಗಳು, ಮಧುಮೇಹ, ಅಧಿಕ ರಕ್ತದೊತ್ತಡ, ಪಿಸಿಒಎಸ್ ಮತ್ತು ದೀರ್ಘಕಾಲದ





ನೋವನ್ನು ನಿರ್ವಹಿಸುವ ಇಪ್ಪತ್ತು ಮತ್ತು ಮೂವತ್ತರ ವಯಸ್ಸಿನ ವೃತ್ತಿಪರರ ದೊಡ್ಡ ಮತ್ತು ಬೆಳೆಯುತ್ತಿರುವ ಜನಸಂಖ್ಯೆಯನ್ನು ನಗರವು ಹೊಂದಿದೆ, ಅವರು ರೋಗಲಕ್ಷಣಗಳಿಗಿಂತ ಹೆಚ್ಚಾಗಿ ತಮ್ಮ ಸ್ಥಿತಿಯ ಮೂಲ ಕಾರಣವನ್ನು ಪರಿಹರಿಸುವ ಆಯುರ್ವೇದ ಚಿಕಿತ್ಸೆಯನ್ನು ಸಕ್ರಿಯವಾಗಿ ಪಡೆಯುತ್ತಿದ್ದಾರೆ. ಬೆಂಗಳೂರಿನ ರೋಗಿಗಳು kapivaclinics.com ಗಂಟೆಗೆ ಅಪಾಯಿಂಟ್ಮೆಂಟ್ ಕಾಯ್ದಿರಿಸಬಹುದು.

## ಪತ್ರಿಕೆಗಳು ಸಮಾಜದ ನಾಡಿಮಿಡಿತ: ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸಮಾಜದಲ್ಲಿ ನಡೆಯುವ ಪ್ರತಿಯೊಂದು ಬೆಳವಣಿಗೆಯನ್ನು ಜನರಿಗೆ ತಲುಪಿಸುವಲ್ಲಿ ಪತ್ರಕರ್ತರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಸತ್ಯ ಮತ್ತು ನಿಖರತೆಗೆ ಆದ್ಯತೆ ನೀಡಿ ಕಾರ್ಯನಿರ್ವಹಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ನಗರದ ತಮ್ಮ ನಿವಾಸ ಕಚೇರಿಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಭಾಲ್ಕಿ ತಾಲೂಕು ಘಟಕದವತಿಯಿಂದ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪತ್ರಕರ್ತರು ಸಮಾಜದ ಕಣ್ಣುಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಜನಸಾಮಾನ್ಯರ ಧ್ವನಿಯನ್ನು ಆಡಳಿತದ ಗಮನಕ್ಕೆ ತರುವ ಮಹತ್ತರ ಜವಾಬ್ದಾರಿ ಹೊಂದಿದ್ದಾರೆ ಎಂದರು.

ಸುದ್ದಿ ಪ್ರಕಟಿಸುವಾಗ ತ್ವರಿತತೆಗಿಂತ ವಿಶ್ವಾಸಾರ್ಹತೆ ಮುಖ್ಯವಾಗಬೇಕು. ಪರಿಶೀಲಿಸದ ಮಾಹಿತಿಯಿಂದ



ಗೊಂದಲ ಸೃಷ್ಟಿಯಾಗುವ ಸಾಧ್ಯತೆ ಇರುವುದರಿಂದ ವಾಸ್ತವಾಂಶಗಳಿಗೆ ಆದ್ಯತೆ ನೀಡಿ ಜನರಿಗೆ ನಿಖರ ಮಾಹಿತಿ ನೀಡುವ ಕಾರ್ಯಕ್ಕೆ ಪತ್ರಕರ್ತರು ಬದ್ಧರಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜೈರಾಜ ಪಾತ್ರೆ, ಸಂತೋಷ್ ಬಿಜಿ ಪಾಟೀಲ್, ಜಯರಾಜ ದಾಬಶೆಟ್ಟಿ, ವಿಜಯಕುಮಾರ ಪರ್ಮ, ದಿಲೀಪ್ ಎಸ್, ಅಶೋಕ ರಾಜೋಳೆ, ವೀರೇಶ್ ಕುಮಾರ್ ಸ್ವಾಮಿ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕಮಲ ಅಡ್ಡ ತಳಮಳ

## ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿದವರ ವಿರುದ್ಧ ಕಠಿಣ ಕ್ರಮ: ಬಿಜೆಪಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಬಿಜೆಪಿ ಮುಂದಾಗಿದೆ. ಪಕ್ಷ ದ್ರೋಹಿಗಳ ಪತ್ತೆಗೆ ಕರ್ನಾಟಕ ಬಿಜೆಪಿ ಸಮಿತಿ ರಚನೆ ಮಾಡಿದ್ದು, ಈ ಬಗ್ಗೆ ಆದೇಶ ಹೊರಡಿಸಿದೆ. ಈ ಸಮಿತಿಯಲ್ಲಿ ಸಿಟಿ ರವಿ ಸೇರಿ 3 ಮಂದಿ ಹಿರಿಯರ ನೇಮಕ ಮಾಡಲಾಗಿದೆ.

**ವಾಸ್ತವಾಂಶ ಪತ್ತೆಗೆ ಬಿಎಸ್‌ವೈ ಆದೇಶ:** ಈ ವಿಚಾರ ಕುರಿತು ಕರ್ನಾಟಕ ಬಿಜೆಪಿ ಟ್ವೀಟ್ ಮಾಡಿದೆ. 'ಶಾಸಕರಿಂದ ಅಡ್ಡಮತದಾನವಾಗಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ, ಇದರ ಸತ್ಯಾಸತ್ಯತೆ ಮತ್ತು ವಾಸ್ತವಿಕತೆ ತಿಳಿಯಲು 3 ಪ್ರಮುಖರನ್ನೊಳಗೊಂಡ ತಂಡವನ್ನು ರಚಿಸಿ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಯಡಿಯೂರಪ್ಪ ಅವರು ಆದೇಶ ಹೊರಡಿಸಿದ್ದಾರೆ'ಎಂದು ತಿಳಿಸಿದೆ.

**ಪೂರ್ಣ ವರದಿಗೆ ಡೆಡ್ಲೈನ್:** ಸಮಿತಿಯು ಜೂನ್ 25 ರೊಳಗೆ ಸಮಗ್ರ ವರದಿಯನ್ನು ನೀಡಲು ಬಿಜೆಪಿ ರಾಜ್ಯಾಧ್ಯಕ್ಷರು ಸೂಚನೆ ನೀಡಿದ್ದಾರೆ. ಈ ಮೂಲಕ ಅಡ್ಡ ಮತದಾನ ಮಾಡಿರವರಿಗೆ ಸಂಕಷ್ಟ ಎದುರಾಗಲಿದೆ. ಸಮಿತಿಯಲ್ಲಿ ಸಿ ಟಿ ರವಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್ ಮಹೇಶ್ ಹಾಗೂ ಶಾಸಕ ಮಹೇಶ್ ಟೆಂಗಿನಕಾಯಿ ಇದ್ದಾರೆ.

### ಕಮಲಕ್ಕೆ ತೀವ್ರ ಮುಜುಗರ

ಬಿಜೆಪಿಯ 4 ಶಾಸಕರು ಅಡ್ಡ ಮತದಾನ ಮಾಡಿದ್ದು ಕಂಡುಬಂದಿದೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ಹೈಕಮಾಂಡ್ ರಾಜ್ಯ ನಾಯಕರಿಂದ ಮಾಹಿತಿ ಪಡೆದಿದೆ. ಚುನಾವಣೆಯಲ್ಲಿ ಶಾಸಕರು ವಿಪ್ ಉಲ್ಲಂಘಿಸಿ ಅಡ್ಡ ಮತದಾನ ಮಾಡಿರುವುದು ಬಿಜೆಪಿಗೆ ತೀವ್ರ ಮುಜುಗರ ತಂದಿದೆ. ಮೂವರು ಶಾಸಕರು ನೇರವಾಗಿ ಅಡ್ಡಮತದಾನ ಮಾಡಿದ್ದು, ಒಬ್ಬರ ಮತ ಅಸಿಂಧುವಾಗಿದೆ.



### ರಾಜಕಾರಣಕ್ಕೆ ಬಿದ್ದ ಮತ

ಕಾಂಗ್ರೆಸ್ ಪಕ್ಷವು ತನ್ನ 135 ಶಾಸಕರ ಜತೆಗೆ, 3 ಪಕ್ಷೇತರ ಶಾಸಕರ ಬೆಂಬಲ ಸೇರಿ ಒಟ್ಟು 138 ಶಾಸಕರ ಬಲ ಹೊಂದಿದೆ. ಹೀಗಿದ್ದರೂ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ 151 ಪ್ರಥಮ ಪ್ರಾಶಸ್ತ್ಯದ ಮತಗಳು ಲಭಿಸಿವೆ. ಇದು ಸಕಾರಾತ್ಮಕತೆ ಹಾಗೂ ಒಳಗೊಳ್ಳುವಿಕೆ ರಾಜಕಾರಣಕ್ಕೆ ಬಿದ್ದ ಮತ ಎಂದು ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಬಣ್ಣಿಸಿದ್ದಾರೆ.



ಪಕ್ಷದಿಂದ ಲಿಂಗರಾಜ ಪಾಟೀಲ್ ಅವರಿಗೆ ಹಂಚಿಕೆಯಾಗಿದ್ದ ಮತಗಳ ಪೈಕಿ ಮೂರು ಅಡ್ಡ ಮತದಾನವಾಗಿದೆ. ರಘು ಅವರಿಗೆ ಹಂಚಿಕೆಯಾಗಿದ್ದ 30 ಮತಗಳಲ್ಲಿ 1 ಮತ ಅಸಿಂಧುವಾಗಿದೆ. ಇದನ್ನು ಯಾರು ಮಾಡಿದ್ದಾರೆ, ಯಾಕೆ ಮಾಡಿದ್ದಾರೆ ಎಂಬುದನ್ನು ಮುಂದೆ ಪರಿಶೀಲಿಸಿ ಪಕ್ಷ ಸೂಕ್ತ ತೀರ್ಮಾನ ತೆಗೆದುಕೊಳ್ಳಲಿದೆ.

–ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ



### 3 ಜನಕ್ಕೆ ಹೈ ಬುಲಾವ್

ಬಿಜೆಪಿ ತನ್ನ ಇಬ್ಬರು ಅಭ್ಯರ್ಥಿಗಳನ್ನು ಗೆಲ್ಲಿಸಿಕೊಂಡಿದ್ದಕ್ಕೆ ಸಮಾಧಾನ ಪಟ್ಟಿದೆ. ಆದರೂ ತನ್ನದೇ ಶಾಸಕರು ಅಡ್ಡ ಮತದಾನ ಮಾಡಿದ್ದು ತೀವ್ರ ಮುಖಭಂಗಕ್ಕೆ ಒಳಗಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಪ್ರತಿಪಕ್ಷದ ನಾಯಕ ಅಶೋಕ ಮತ್ತು ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅವರನ್ನು 23 ರಂದು ದೆಹಲಿಗೆ ಕರೆಸಲಾಗುತ್ತಿದೆ ಎಂದು ಮೂಲಗಳು ಖಚಿತ ಪಡಿಸಿವೆ.

### ಅವರು ಯಾರೆಂದು ಗೊತ್ತು..!

ವಿಧಾನಪರಿಷತ್ ಚುನಾವಣೆಯಲ್ಲಿ ಜೆಡಿಎಸ್ ನಾಲ್ಕು ಮಂದಿ ಶಾಸಕರು ಅಡ್ಡ ಮತದಾನ ಮಾಡಿದ್ದಾರೆ. ಅವರು ಯಾರು ಎಂಬುವುದು ಗೊತ್ತಿದೆ. ಯಾವ ಕಾರಣಕ್ಕಾಗಿ ಕ್ರಾಸ್ ಓಟಿಂಗ್ ಅಗಿದೆ ಎಂಬುವುದು ಗೊತ್ತಿಲ್ಲ. ಯುವಕರಿಗೆ ಆದ್ಯತೆ ನೀಡಬೇಕು ಎಂದು ನಿರ್ಧಾರ ಮಾಡಿದ್ದೇನೆ ಎಂದು ಎಚ್ಡಿ ಕುಮಾರಸ್ವಾಮಿ ತಿಳಿಸಿದ್ದಾರೆ.



## ಲಂಚ: ಶಾಂತಮೂರ್ತಿ ಲೋಕಾಯುಕ್ತ ಬಲೆಗೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಿವೇಶನ ವಿನ್ಯಾಸದ ಕಡತಗಳಿಗೆ ಅನುಮೋದನೆ ನೀಡಿಕೊಡುವ ಸಂಬಂಧ ₹3.50 ಲಕ್ಷ ಲಂಚ ಸ್ವೀಕರಿಸುತ್ತಿದ್ದ ವೇಳೆ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ (ಬುಡಾ) ಸರ್ವೇಯರ್ ಶಾಂತಮೂರ್ತಿ ಹಾಗೂ ಅವರ ಸಹಾಯಕ ಮೊಹಮ್ಮದ್ ಸಾಜೀದ್ ಅವರನ್ನು ಲೋಕಾಯುಕ್ತ ಪೊಲೀಸರು ಶುಕ್ರವಾರ ಬಲೆಗೆ ಬೀಳಿಸಿ ಬಂಧಿಸಿದ್ದಾರೆ.



ವಾಲ್ಮೀಕಿ ಜನಾಂಗದ ಈರೇಶಿ (43) ನೀಡಿದ ದೂರಿನ ಮೇರೆಗೆ ಲೋಕಾಯುಕ್ತ ಪೊಲೀಸರು ಕಾರ್ಯಾಚರಣೆ ನಡೆಸಿದ್ದಾರೆ. ಪ್ರವೀಣ್ ಕುಮಾರ್, ಕುಮಾರಸ್ವಾಮಿ, ರಘುನಾಥ ಹಾಗೂ ಬೃಂದಾ ಅವರಿಗೆ ಸೇರಿದ ಜಮೀನುಗಳ ಏಕ ಮತ್ತು ಬಹುನಿವೇಶನ ವಿನ್ಯಾಸದ ಕಡತಗಳಿಗೆ ಅನುಮೋದನೆ ದೊರಕಿಸಲು ಸಂಬಂಧಿತ ಕಚೇರಿಗಳಲ್ಲಿ ಕೆಲಸ ಮಾಡಿಕೊಡಲು ಈರೇಶಿ ಜಿಪಿಎ ಪಡೆದಿದ್ದರು ಎನ್ನಲಾಗಿದೆ.

## ನೊಂದವರ ನೆರವಿಗೆ ಮಠಾಧೀಶರು ಬರಲಿ: ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಮಾಜದಲ್ಲಿ ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಂಕಷ್ಟದಲ್ಲಿರುವ ಬಡವರು, ನಿರ್ಗತಿಕರು ಮತ್ತು ನೊಂದವರ ನೆರವಿಗೆ ಮಠಾಧೀಶರು ಹೆಚ್ಚಿನ ಕಾಳಜಿ ವಹಿಸಿ ಮಾನವೀಯ ಸೇವೆ ಸಲ್ಲಿಸಬೇಕು ಎಂದು ಸಾರ್ವಜನಿಕರು ಮನವಿ ಮಾಡಿದ್ದಾರೆ.

ನಮ್ಮ ನಾಡಿನ ಮಠಗಳು ಕೇವಲ ಧಾರ್ಮಿಕ ಕೇಂದ್ರಗಳಾಗಿರದೇ ಶಿಕ್ಷಣ, ಅನ್ನದಾಸೋಹ, ಆರೋಗ್ಯ ಹಾಗೂ ಸಾಮಾಜಿಕ ಸೇವೆಗಳ ಮೂಲಕ ಜನರ ಜೀವನಕ್ಕೆ ಬೆಳಕಾಗಿವೆ. ಈ ಪರಂಪರೆಯನ್ನು ಮುಂದುವರಿಸಿಕೊಂಡು ಇಂದಿನ ಕಷ್ಟದ ಪರಿಸ್ಥಿತಿಯಲ್ಲಿರುವ ಕುಟುಂಬಗಳಿಗೆ ನೆರವು ನೀಡುವ ಅಗತ್ಯ ಹೆಚ್ಚಾಗಿದೆ.

ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ಸಹಾಯ, ಬಡ ಕುಟುಂಬಗಳಿಗೆ ಆಹಾರ ಮತ್ತು ಅಗತ್ಯ ವಸ್ತುಗಳ ನೆರವು, ಅನಾರೋಗ್ಯದಿಂದ ಬಳಲುತ್ತಿರುವವರಿಗೆ ವೈದ್ಯಕೀಯ ಸಹಾಯ ಸೇರಿದಂತೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಮಠಗಳು ಕೈಗೊಳ್ಳಬೇಕು ಎಂದು ಜನರು ಅಭಿಪ್ರಾಯಪಟ್ಟಿದ್ದಾರೆ.

# 7,506 ಕೋಟಿ ರೂ. ಹೂಡಿಕೆಯ 55 ಯೋಜನೆಗಳಿಗೆ ಅಸ್ತು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಒಟ್ಟು 7,506 ಕೋಟಿ ರೂ. ಬಂಡವಾಳ ಹೂಡಿಕೆ ಮತ್ತು 28 ಸಾವಿರಕ್ಕೂ ಹೆಚ್ಚು ಉದ್ಯೋಗಸೃಷ್ಟಿ ಮಾಡಲಿರುವ 55 ಕೈಗಾರಿಕಾ ಯೋಜನೆಗಳಿಗೆ ಶುಕ್ರವಾರ ಇಲ್ಲಿ ನಡೆದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ. ಇವುಗಳಲ್ಲಿ 41 ಹೂಡಿಕೆಗಳು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳನ್ನು ಹೊರತುಪಡಿಸಿ (ಬಿಯಾಂಡ್ ಬೆಂಗಳೂರು) ಉಳಿದ ಕಡೆಗಳಲ್ಲಿ ಆಗಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಸಭೆಯ ಮಾಹಿತಿ ನೀಡಿರುವ ಅವರು, ಇವುಗಳ ಪೈಕಿ 4 ಯೋಜನೆಗಳು ವಿದೇಶಿ ನೇರ ಹೂಡಿಕೆಯ (ಎಫ್.ಡಿ.ಐ.) ಯೋಜನೆಗಳಾಗಿವೆ. ತೈವಾನಿನ ಟೀಮಿಂಗ್ ಆಟೋಮೇಷನ್, ದಕ್ಷಿಣ ಕೊರಿಯಾದ ವೈ.ಜೆ.ಲಿಂಕ್, ಜರ್ಮನಿಯ ರೇವುಂ ಮತ್ತು ಜಪಾನ್ ಮೂಲದ ಶಿಂಕೋ ಕಂಪನಿಗಳು ಕ್ರಮವಾಗಿ 20 ಕೋಟಿ ರೂ, 177.96 ಕೋಟಿ ರೂ, 16.50 ಕೋಟಿ ರೂ ಮತ್ತು 100 ಕೋಟಿ ರೂ. (ಒಟ್ಟು 314.46 ಕೋಟಿ ರೂಪಾಯಿ)



ಹೂಡಿಕೆ ಮಾಡುತ್ತಿವೆ. ಇವುಗಳಿಂದ ಒಟ್ಟು 503 ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದಿದ್ದಾರೆ.

ಒಪ್ಪಿಗೆ ನೀಡಲಾಗಿರುವ ಹೂಡಿಕೆ ಪ್ರಸ್ತಾವನೆಗಳಲ್ಲಿ 50 ಕೋಟಿ ರೂ.ಗಳಿಗೂ ಹೆಚ್ಚು ಬಂಡವಾಳ ತೊಡಗಿಸಲಿರುವ ಯೋಜನೆಗಳ ಸಂಖ್ಯೆ 35ರಷ್ಟಿದೆ. ಹಾಗೆಯೇ 15 ಯೋಜನೆಗಳಿಂದ ತಲಾ 15ರಿಂದ 50 ಕೋಟಿ ರೂ. ಹೂಡಿಕೆ ಆಗಲಿದೆ. 5 ಕಂಪನಿಗಳು ಹೆಚ್ಚುವರಿ ಬಂಡವಾಳ ಹೂಡಿಕೆ ಮಾಡಲಿದ್ದು, ಇವುಗಳಿಂದ 223.61 ಕೋಟಿ ರೂ. ಹರಿದು ಬರಲಿದೆ. ಒಟ್ಟು 55 ಯೋಜನೆಗಳಲ್ಲಿ ಹೆಚ್ಚಿನವು ಏರೋಸ್ಪೇಸ್, ಇ.ಎಸ್.ಡಿ.ಎಂ, ಜನರಲ್ ಎಂಜಿನಿಯರಿಂಗ್ ಕ್ಷೇತ್ರಕ್ಕೆ ಸಂಬಂಧಪಟ್ಟಿವೆ ಎಂದು ಅವರು ವಿವರಿಸಿದ್ದಾರೆ.

ಅನುಮೋದನೆ ನೀಡಲಾಗಿರುವ ಯೋಜನೆಗಳ ಮೂಲಕ ಕೇನ್ಸ್ ಎಲೆಕ್ಟ್ರಾನಿಕ್ಸ್ ಚಾಮರಾಜನಗರ ಜಿಲ್ಲೆಯಲ್ಲಿ 495 ಕೋಟಿ, ಟೆಕ್ನಾಲಜೀಸ್ ದೊಡ್ಡಬಳ್ಳಾಪುರದಲ್ಲಿ 490 ಕೋಟಿ, ಆರ್ಬಿಟ್ ಇಂಡಸ್ಟ್ರಿಯಲ್ ಪಾರ್ಕ್ ಕೋಲಾರದಲ್ಲಿ 454 ಕೋಟಿ, ಟೆರ್ರಾ ಸರ್ಕ್ಯೂಟ್ಸ್ ವಿಜಯಪುರದಲ್ಲಿ 441 ಕೋಟಿ, ಬೆಲಾಟ್ರಿಕ್ಸ್ ಏರೋಸ್ಪೇಸ್ ಬೆಂ.ಗ್ರಾಮಾಂತರದಲ್ಲಿ 404 ಕೋಟಿ, ಜಿಂದಾಲ್ ಪೋರ್ಟ್ ಬಳ್ಳಾರಿಯಲ್ಲಿ 380 ಕೋಟಿ, ಶಾಹಿ ಎಕ್ಸ್‌ಪೋರ್ಟ್ಸ್ ಕಲಬುರಗಿಯಲ್ಲಿ 337 ಕೋಟಿ, ಇನ್ಸ್ಟಾಗೆಲಾಕ್ಸಿ ದಕ್ಷಿಣ ಕನ್ನಡದಲ್ಲಿ 300 ಕೋಟಿ, ಹೈಟೆಕ್ ಮೆಟಾಲಿಕ್ಸ್ ವಿಜಯಪುರದಲ್ಲಿ 250 ಕೋಟಿ, ಪ್ರಾಕ್ಸೈರ್ ಇಂಡಿಯಾ ಬೆಂ.ಗ್ರಾಮಾಂತರದ ಹೊಸಕೋಟೆಯಲ್ಲಿ 210 ಕೋಟಿ, ಶೋಭಾ ರಿಯಾಲ್ಟಿ ಬೆಂಗಳೂರು ನಗರ ಜಿಲ್ಲೆಯಲ್ಲಿ 201.15 ಕೋಟಿ, ಆರ್.ಎಂ.ಝೆಡ್ ಹೊಸಕೋಟೆಯ ಎಂ.ಹೊಸಹಳ್ಳಿಯಲ್ಲಿ 198.62 ಕೋಟಿ ರೂ. ಹೂಡಿಕೆ ಮಾಡಲಿವೆ ಎಂದು ಪಾಟೀಲ ವಿವರಿಸಿದ್ದಾರೆ.

ಇದಲ್ಲದೆ ಗದಗಿನಲ್ಲಿ ರೋನ್ ಪವರ್ 177.20 ಕೋಟಿ ರೂ, ವಾಹಿನಿ ಪಾಲಿಟೆಕ್ ತುಮಕೂರಿನಲ್ಲಿ 170 ಕೋಟಿ, ಕೋಲಾರದಲ್ಲಿ ಏರಿಸ್ ರಿಫೈನರಿ 157.45 ಕೋಟಿ, ಜುರೋಜಿನ್ ಡೆವಲಪರ್ಸ್ 137 ಕೋಟಿ ಮತ್ತು ಅರ್ಬೆನೋ ರಿಯಾಲ್ಟಿ 125 ಕೋಟಿ, ಕೊಡಗಿನಲ್ಲಿ ಆಯತನ ಹಾಸ್ಪಿಟಾಲಿಟೀಸ್ 110.27 ಕೋಟಿ ಮತ್ತು ಬೆಂ.ಗ್ರಾಮಾಂತರ ಜಿಲ್ಲೆಯಲ್ಲಿ ಬಲ್ಕ್ ಲಿಕ್ವಿಡ್ ಸೊಲ್ಯೂಷನ್ಸ್ 110 ಕೋಟಿ ರೂ. ಬಂಡವಾಳ ತೊಡಗಿಸಲಿವೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಸಭೆಯಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತೆ ಖುಷ್ಬೂ ಗೋಯಲ್, ಕೆಐಎಡಿಬಿ ಸಿಇಒ ಗೋವಿಂದ ರೆಡ್ಡಿ, ಉದ್ಯೋಗ ಮಿತ್ರ ವ್ಯವಸ್ಥಾಪಕ ನಿರ್ದೇಶಕ ದೊಡ್ಡ ಬಸವರಾಜು ಮುಂತಾದವರು ಉಪಸ್ಥಿತರಿದ್ದರು.

## ಪರಿಷತ್ ಚುನಾವಣೆಯಲ್ಲಿ ಜೆಡಿಎಸ್ ಸೋಲು: ಮೈತ್ರಿ ಪಕ್ಷಗಳ ನಡುವಿನ ಅಸಮಾಧಾನ ಬಹಿರಂಗ; ಪ್ರಿಯಾಂಕ್ ಖರ್ಗೆ

## ಕೈಕೊಟ್ಟ ಮಳೆರಾಯ: ರೈತರ ನೆರವಿಗೆ ಸರಕಾರ ಮುಂದಾಗಲಿ

ಮಳೆ ಆಧಾರಿತ ಕೃಷಿಯನ್ನು ಹೆಚ್ಚಾಗಿ ಅವಲಂಬಿಸಿರುವ ನಮ್ಮ ರಾಜ್ಯದ ರೈತರು ಈ ಬಾರಿ ಮಳೆ ಕೊರತೆಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಮಯಕ್ಕೆ ಸರಿಯಾಗಿ ಮಳೆಯಾಗದ ಕಾರಣ ಬಿತ್ತನೆ ಕಾರ್ಯಗಳು ಕುಂಠಿತವಾಗಿದ್ದು, ಈಗಾಗಲೇ ಬಿತ್ತನೆ ಮಾಡಿದ ಬೆಳೆಗಳು ಒಣಗುವ ಭೀತಿಯನ್ನು ಎದುರಿಸುತ್ತಿವೆ. ರೈತರಲ್ಲಿ ಆತಂಕ ಮತ್ತು ಅನಿಶ್ಚಿತತೆ ಮನೆ ಮಾಡಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ರೈತನು ದೇಶದ ಬೆನ್ನೆಲುಬು. ಆತ ಬೆಳೆದ ಬೆಳೆಯಿಂದಲೇ ಸಮಾಜದ ಹೊಟ್ಟೆ ತುಂಬುತ್ತದೆ. ಆದರೆ ಪ್ರಕೃತಿಯ ವೈಪರೀತ್ಯಗಳು ಬಂದಾಗ ಮೊದಲ ಹೊಡೆತವನ್ನು ಅನುಭವಿಸುವವರು ರೈತರು. ನಿರಂತರ ಬರ ಪರಿಸ್ಥಿತಿ ಮುಂದುವರಿದರೆ ಕೃಷಿ ಉತ್ಪಾದನೆ ಕಡಿಮೆಯಾಗುವುದರ ಜೊತೆಗೆ ರೈತರ ಆರ್ಥಿಕ ಸ್ಥಿತಿಯೂ ಹದಗೆಡುವ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರಕಾರ ರೈತರ ನೆರವಿಗೆ ತಕ್ಷಣ ಧಾವಿಸಬೇಕು. ಬೆಳೆ ಹಾನಿಯ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ನೀಡಬೇಕು. ರೈತರಿಗೆ ಅಗತ್ಯ ಬೀಜ, ಗೊಬ್ಬರ ಹಾಗೂ ಕೃಷಿಗೆ ಬೇಕಾದ ಸೌಲಭ್ಯಗಳನ್ನು ಒದಗಿಸಬೇಕು. ಬ್ಯಾಂಕ್ ಸಾಲದ ಮರುಪಾವತಿಗೆ ಅವಧಿ ವಿಸ್ತರಣೆ ಮತ್ತು ಬಡ್ಡಿ ವಿನಾಯಿತಿ ಸೇರಿದಂತೆ ಪರಿಹಾರ ಕ್ರಮಗಳ ಕುರಿತು ಗಂಭೀರವಾಗಿ ಚಿಂತನೆ ನಡೆಸಬೇಕು. ಜಿಲ್ಲಾಡಳಿತ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಗ್ರಾಮ ಮಟ್ಟದಲ್ಲಿ ರೈತರ ಸಮಸ್ಯೆಗಳನ್ನು ಆಲಿಸಿ, ತ್ವರಿತವಾಗಿ ಸ್ಪಂದಿಸುವ ಕೆಲಸ ಮಾಡಬೇಕು. ರೈತರು ಸಂಕಷ್ಟದಲ್ಲಿರುವ ಸಮಯದಲ್ಲಿ ಆಡಳಿತದ ಬೆಂಬಲ ಅತ್ಯಂತ ಅಗತ್ಯವಾಗಿದೆ.

ಮಳೆರಾಯ ಕೈ ಕೊಟ್ಟ ಈ ಸಂದರ್ಭದಲ್ಲಿ ರೈತರನ್ನು ಸಂಕಷ್ಟದಲ್ಲಿ ಒಂಟಿಯಾಗಿ ಬಿಡದೆ ಸರಕಾರ ಹಾಗೂ ಸಮಾಜ ಅವರ ಬೆನ್ನಿಗೆ ನಿಲ್ಲಬೇಕಿದೆ. ರೈತ ಉಳಿದರೆ ಮಾತ್ರ ದೇಶದ ಆಹಾರ ಭದ್ರತೆ ಉಳಿಯುತ್ತದೆ ಎಂಬುದನ್ನು ಎಲ್ಲರೂ ಅರಿತು ಕಾರ್ಯನಿರ್ವಹಿಸಬೇಕು.

## ಆರೋಗ್ಯಕರ ಜೀವನಕ್ಕೆ ಯೋಗವೇ ಶ್ರೇಷ್ಠ ಮಾರ್ಗ



**ಭಾಲ್ಕಿ:** ದೇಹ, ಮನಸ್ಸು ಮತ್ತು ಆತ್ಮದ ಸಮತೋಲನವನ್ನು ಸಾಧಿಸುವ ಯೋಗವು ಆರೋಗ್ಯಕರ ಹಾಗೂ ಸಂತೋಷಮಯ ಜೀವನದ ಮೂಲಾಧಾರವಾಗಿದೆ ಎಂದು ಯೋಗ ಶಿಕ್ಷಕ ಹರಿದೇವ ರುದ್ರಮುನಿ ಅಭಿಪ್ರಾಯಪಟ್ಟರು. ಜೂನ್ 21ರಂದು ಆಚರಿಸಲಾಗುವ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಪಟ್ಟಣದ ಬಾಲಾಜಿ ನಗರದಲ್ಲಿರುವ ಚನ್ನಬಸವಣ್ಣ ಬಳತೆ ಅವರ ನಿವಾಸದ ಆವರಣದಲ್ಲಿನ ಸತ್ಸಂಗ ಭವನದಲ್ಲಿ ವಿಶೇಷ ಯೋಗ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪತಂಜಲಿ ಯೋಗ ಸಮಿತಿ ಹಾಗೂ ಜೈ ಗುರುದೇವ ಯೋಗ ಟ್ರಸ್ಟ್‌ನ ಪದಾಧಿಕಾರಿಗಳು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಕಾರ್ಯಕ್ರಮವನ್ನು ಪುರಸಭೆಯ ಮಾಜಿ ಅಧ್ಯಕ್ಷ ಬಸವರಾಜ ವಂಕೆ ಉದ್ಘಾಟಿಸಲಿದ್ದು, ಯುವ ಮುಖಂಡ ಪ್ರಕಾಶ ಮಾಶೆಟ್ಟಿ, ಸಮಾಜ ಸೇವಕ ಚನ್ನಬಸವಣ್ಣ ಬಳತೆ, ಜೈಕಿಶನ್ ಬಿಯಾನಿ, ಅಶೋಕ ರಾಜೋಳೆ, ಜೈರಾಜ ದಾಬಶೆಟ್ಟಿ ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳಲಿದ್ದಾರೆ. ಇದೇ ಸಂದರ್ಭದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷ ಜೈರಾಜ ಪಾತ್ರೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರನ್ನು ಸನ್ಮಾನಿಸಲಾಗುವುದು. ಯೋಗ ಶಿಕ್ಷಕರಾದ ಹನುಮಂತರಾವ ಚಿಂಚೋಳಿ ಹಾಗೂ ಹರಿದೇವ ರುದ್ರಮುನಿ ಅವರು ಯೋಗಾಸನ, ಪ್ರಾಣಾಯಾಮ ಮತ್ತು ಆರೋಗ್ಯವರ್ಧಕ ಯೋಗಾಭ್ಯಾಸಗಳ ಕುರಿತು ಒಂದು ಗಂಟೆಯ ವಿಶೇಷ ತರಬೇತಿ ನೀಡಲಿದ್ದಾರೆ. ಬೆಳಿಗ್ಗೆ 5.30ಕ್ಕೆ ವೇದಿಕೆ ಕಾರ್ಯಕ್ರಮ ಆರಂಭವಾಗಲಿದ್ದು, ಬೆಳಿಗ್ಗೆ 6ರಿಂದ 7 ಗಂಟೆಯವರೆಗೆ ಸಾಮೂಹಿಕ ಯೋಗಾಭ್ಯಾಸ ನಡೆಯಲಿದೆ.

# ಸರ್ಕಾರ ಪರಿಹಾರ ಹಣ ನೀಡಲಿ: ಲಕ್ಷ್ಮಣ ದಸ್ತಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ನೂತನವಾಗಿ ಮುಖ್ಯಮಂತ್ರಿಗಳಾಗಿ ಅಧಿಕಾರ ಸ್ವೀಕರಿಸಿದ ಡಿ.ಕೆ.ಶಿವಕುಮಾರ ಅವರಿಗೆ ಬೀದರ ಕಾರಂಜಾ ಮುಳುಗಡೆ ಸಂತ್ರಸ್ತರ ಬಗ್ಗೆ ಸಮಗ್ರವಾಗಿ ಗೊತ್ತಿದೆ. ಹೀಗಾಗಿ ಅವರು ಕಾಲಮಿತಿಯಲ್ಲಿ ಸಂತ್ರಸ್ತರಿಗೆ ಪರಿಹಾರ ಹಣ ಬಿಡುಗಡೆ ಮಾಡಬೇಕೆಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಲಕ್ಷ್ಮಣ ದಸ್ತಿ ತಿಳಿಸಿದರು.

ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ ಹಾಗೂ ಬೀದರ ಸಮಗ್ರ ಅಭಿವೃದ್ಧಿ ಜಂಟಿ ಕ್ರಿಯಾ ಸಮಿತಿ ವತಿಯಿಂದ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು 1981 ರಿಂದ 86ರ ಅವಧಿಯಲ್ಲಿ ನೀರಾವರಿ ಯೋಜನೆ ನಿರ್ಮಾಣಕ್ಕಾಗಿ ಸುಮಾರು 28 ಹಳ್ಳಿಗಳ ರೈತ ಸಂತ್ರಸ್ತರು ಯಾವುದೇ ಷರತ್ತಿಲ್ಲದೆ ಭೂಮಿ ನೀಡಿದ್ದಾರೆ. ಪರಿಹಾರಕ್ಕಾಗಿ 2018ರಲ್ಲಿ 70 ದಿವಸಗಳ ಕಾಲ ಹೋರಾಟ ಮಾಡಲಾಗಿತ್ತು. ಅಂದಿನ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿಯವರು ನಮಗೆ ಬೆಂಗಳೂರಿಗೆ ಕರೆಸಿ, ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಪರಿಹಾರ ಒದಗಿಸುವಂತೆ ನೀರಾವರಿ ಸಚಿವ ಡಿ.ಕೆ.ಶಿವಕುಮಾರ ಅವರಿಗೆ ಸೂಚಿಸಿದ್ದರು. ಬಂಡೆಪ್ಪ ಖಾಶೆಂಪುರ ಅವರು ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಇವರೆಲ್ಲರ ಮಾತಿಗೆ ಬೆಲೆಕೊಟ್ಟು ಹೋರಾಟ ಹಿಂಪಡೆಯಲಾಗಿತ್ತು.



ನಂತರ 2019ರ ಬಿ.ಎಸ್.ಯಡಿಯೂರಪ್ಪ ನೇತೃತ್ವದ ಸರ್ಕಾರವೂ ನಮಗೆ ನಿರ್ಲಕ್ಷ್ಯ ಧೋರಣೆ ತೋರಿತು. 2022ರ ಜುಲೈನಿಂದ ಸುಮಾರು 926 ದಿವಸಗಳ ಕಾಲ ಸಂತ್ರಸ್ತರಿಂದ ನಿರಂತರ ಧರಣಿ ಸತ್ಯಾಗ್ರಹ ಮಾಡಲಾಗಿತ್ತು. ಈ ಕಾರಣಕ್ಕಾಗಿ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರ ಮುತುವರ್ಜಿಯಿಂದ ಅಂದಿನ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹಾಗೂ ಸಚಿವ ರಹಿಂಖಾನ್ ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರು ಪಕ್ಷಾತೀತವಾಗಿ ಬೆಳಗಾವಿ ಅಧಿವೇಶನದಲ್ಲಿ ಕಾರಂಜಾ ಸಂತ್ರಸ್ತರಿಗೆ ಪರಿಹಾರ ಒದಗಿಸುವ ಕುರಿತು ಚರ್ಚಿಸಿ ಒಂದೆ–ರಡು ವಾರದಲ್ಲಿ ಬೇಡಿಕೆ ಈಡೇರಿಸಲಾಗುವುದು ಎಂದು ಭರವಸೆ ನೀಡಿದರು. ನಂತರ ಬೀದರನಲ್ಲಿ ಸಂತ್ರಸ್ತರು ವಿಷಪ್ರಾಶನ ಮಾಡಿದ್ದರು. ನಂತರ ಸಿಎಂ ಸಿದ್ಧರಾಮಯ್ಯನವರು ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಪರಿಹಾರ ನೀಡುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಇತ್ತಿಚೆಗೆ ಬೀದರನಲ್ಲಿ ಜರುಗಿದ ಪತ್ರಕರ್ತರ 40ನೇ ರಾಜ್ಯ ಸಮ್ಮೇಳನಕ್ಕೆ ಆಗಮಿಸಿದ್ದಾಗಲೂ ಸಿಎಂ ಸಿದ್ಧರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಗಿತ್ತು.

ನಂತರ ರಾಜಕೀಯ ಚಟುವಟಿಕೆಗಳ ಕಾರಣಕ್ಕಾಗಿ ಸಿಎಂ ಆಗಿ ಡಿ.ಕೆ.ಶಿವಕುಮಾರ ಅವರು ನೂತನ ಮುಖ್ಯಮಂತ್ರಿಗಳಾದರು.

ಹೀಗಾಗಿ ನಮ್ಮ ಮೂರು ಬೇಡಿಕೆಗಳಾದ ಕಾರಂಜಾ ಸಂತ್ರಸ್ತರಿಗೆ ವೈಜ್ಞಾನಿಕ ಆಧಾರದ ಮೇಲೆ ಪರಿಹಾರ ಒದಗಿಸಬೇಕು. ಜಿಲ್ಲಾಡಳಿತ ಕಚೇರಿಯಲ್ಲಿ ಭೂ ಸ್ವಾಧಿನಾಧಿಕಾರಿ ಹುದ್ದೆ ಖಾಲಿ ಇದೆ. ಈ ಮಹತ್ವದ ಹುದ್ದೆ ಭರ್ತಿ ಮಾಡಬೇಕು. ಜೊತೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಸಚಿವರಾದ ಈಶ್ವರ ಖಂಡ್ರೆಯವರು ಕಾರಂಜಾ ಸಂತ್ರಸ್ತರ ಬಗ್ಗೆ ವಿಶೇಷ ಮುತುವರ್ಜಿ ವಹಿಸಿ, ಗಂಭೀರವಾಗಿ ಮತ್ತು ಸವಾಲಾಗಿ ತೆಗೆದುಕೊಂಡು ಪರಿಹಾರ ಕೊಡಿಸುವ ನಿಟ್ಟಿನಲ್ಲಿ ಪ್ರಯತ್ನಿಸಬೇಕೆಂದು ತಿಳಿಸಿದ ಅವರು, ಸಚಿವ ಸಂಪುಟ ರಚನೆಯ ನಂತರ 15 ದಿನಗಳ ಒಳಗಾಗಿ ನಮ್ಮ ಬೇಡಿಕೆ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಗಾಂಧಿ ಮತ್ತು ಅಂಬೇಡ್ಕರ್ ತತ್ವದಂತೆ ನಿರಂತರ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ಲಕ್ಷ್ಮಣ ದಸ್ತಿ ಎಚ್ಚರಿಕೆ ನೀಡಿದರು.

ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ ಮತ್ತು ಬೀದರ ಸಮಗ್ರ ಅಭಿವೃದ್ಧಿ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ ಹೋಚಕನಳ್ಳಿ ಮಾತನಾಡಿ, ತಮ್ಮ ಜಮೀನು ಕಳೆದುಕೊಂಡ ನಂತರ ಕಾರಂಜಾ ಮುಳುಗಡೆ ಸಂತ್ರಸ್ತರು ಗ್ರಾಮಗಳನ್ನು ತೊರೆದು ಗುಳೆ ಹೋಗುತ್ತಿದ್ದಾರೆ. ಆದ್ದರಿಂದ ಸಚಿವ ಈಶ್ವರ ಖಂಡ್ರೆಯವರು ವಿಶೇಷ ಮುತುವರ್ಜಿ ವಹಿಸಿ ಪರಿಹಾರ ಕೊಡಿಸಬೇಕೆಂದು ಆಗ್ರಹಿಸಿದರು.

ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಚಾಲಕ ವಿನಯಕುಮಾರ ಮಾಳಗೆ ಮಾತನಾಡಿ, ಜನಪ್ರತಿನಿಧಿಗಳು ರಾಜಕೀಯ ಇಚ್ಛಾಶಕ್ತಿ ತೋರಿದರೆ ಕಾರಂಜಾ ಸಂತ್ರಸ್ತರಿಗೆ ಪರಿಹಾರ ಕೊಡಿಸುವುದು ದೊಡ್ಡ ವಿಷಯವೇನಲ್ಲ. ಗ್ಯಾರಂಟಿ ಕೊಡಬೇಕೆಂದು ಸಂವಿಧಾನದಲ್ಲಿ ಬರೆದಿಲ್ಲ. ಆದರೂ ಸರ್ಕಾರ ತಮ್ಮ ರಾಜಕೀಯ ಇಚ್ಛಾಶಕ್ತಿಯಂತೆ ನೀಡಿದೆ. ಅದೇ ಮಾದರಿಯಲ್ಲಿ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಪರಿಹಾರ ಒದಗಿಸಬೇಕೆಂದರು.

ಕಾರಂಜಾ ಮುಳುಗಡೆ ಸಂತ್ರಸ್ತರಾದ ಮಲ್ಲಿನಾಥ ಕಲಬುರಗಿ, ರಾಜಪ್ಪಾ ಕಮಲಪುರ, ಡಾ. ರಾಜಕುಮಾರ ಬುಸ್ಸಾ, ಸಂಗಾರೆಡ್ಡಿ ಔರಾದ, ವೀರೇಂದ್ರ ಮರಕಲ್, ಮಾದಪ್ಪ ಕೌದೆ, ಲಕ್ಷ್ಮೀಬಾಯಿ ಕೌದೆ, ಅಹ್ಮದ್ ಬಗದಲ್, ಯೂಸೂಫ್ ಮಿಯಾ, ಬಸವರಾಜ ಹಿಂದಾ, ಮಾಣಿಕಪ್ಪ ನೆಲವಾರ, ಪ್ರಭುರಾವ ತೂಗಾಂವ, ಶಂಕರೆಪ್ಪ ನಾರಾ ಸೇರಿದಂತೆ ಇನ್ನಿತರರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಜನ್ಮದಿನ: ವೀಡಿಯೊ ಸಾಂಗ್ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರ 62ನೇ ಜನ್ಮ ದಿನದ ಪ್ರಯುಕ್ತ ಅವರ ಅಭಿಮಾನಿಗಳು ವಿಶೇಷ ಆಡಿಯೋ, ವಿಡಿಯೋ ಸಾಂಗ್ ಅನ್ನು ಹೊರತಂದಿದ್ದಾರೆ.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ಬಂಡೆಪ್ಪ ಖಾಶೆಂಪುರ್ ರವರ ತೋಟದ ಮನೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಬಂಡೆಪ್ಪ ಖಾಶೆಂಪುರ್ ರವರ ಜನ್ಮದಿನದ ಕಾರ್ಯಕ್ರಮದಲ್ಲಿ ಅವರ ಯಶೋಗಾಥೆಯನ್ನೊಳಗೊಂಡ 08 ನಿಮಿಷಗಳ ವಿಶೇಷ ಆಡಿಯೋ, ವಿಡಿಯೋ ಗೀತೆಯನ್ನು ಅಭಿಮಾನಿಗಳು ಬಿಡುಗಡೆಗೊಳಿಸಿದರು.

ಈ ವಿಶೇಷ ಹಾಡನ್ನು ರಾಯಚೂರು ಜಿಲ್ಲೆಯ ಮಸ್ಕಿ ತಾಲೂಕಿನ ಪಾಮನಕಲ್ಲೂರು ಗ್ರಾಮದ ಅಯ್ಯಣ್ಣ ನಾಯಕ ಪಾಮನಕಲ್ಲೂರುರವರು, ಅದೇ ಗ್ರಾಮದ



ಭಜೇಂದ್ರ ಪಾಮನಕಲ್ಲೂರು ಹಾಗೂ ಬೀದರ್ ತಾಲೂಕಿನ ಕಮಠಾಣಾದ ರಮೇಶ್ ಚಾಂಬಾಳೆ (ಆರ್ ಕೆ ಸ್ಟೂಡಿಯೋ) ರವರ ಸಹಕಾರದೊಂದಿಗೆ ಹೊರ ತಂದಿದ್ದಾರೆ. ರಾಯಚೂರು ಜಿಲ್ಲೆಯ ಮಸ್ಕಿ ತಾಲೂಕಿನ ಯರದೊಡ್ಡಿ ಗ್ರಾಮದ ಸಾಹಿತಿ ಪರಶು ನಾಯಕ ಯರದೊಡ್ಡಿ ರಚಿಸಿದ ಗೀತೆಯನ್ನು ಅದೇ ಜಿಲ್ಲೆಯ ಲಿಂಗಸುಗೂರಿನ ಗಾಯಕ ಹುಸೇನ್ ಸಾಬ್ ಲಿಂಗಸುಗೂರುರವರು ಹಾಡಿದ್ದಾರೆ.

ದೃಶ್ಯ ಸಂಕಲನವನ್ನು ಚೇತನ್ ಕುಮಾರ್ ಹಾಗೂ ಬೀದರ್ ತಾಲೂಕಿನ ಘೋಡಂಪಳ್ಳಿಯ ಸಾಯಿಕುಮಾರ್ ಮಾಡಿದ್ದು, ಗ್ರಾಫಿಕ್ಸ್ ಡಿಸೈನಿಂಗ್ ಸಾಯಿಕುಮಾರ್ ಘೋಡಂಪಳ್ಳಿರವರು ಮಾಡಿದ್ದಾರೆ.

## ತಹಸಿಲ್ದಾರರ ಮೇಲೆ ಕ್ರಮಕ್ಕೆ ಡಿಸಿಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬಸವಕಲ್ಯಾಣದಲ್ಲಿ ಜೂನ್ 28 ರಂದು ಆಯೋಜಿಸಲು ಉದ್ದೇಶಿಸಿರುವ "ಬಸವಾದಿ ಶಿವಶರಣರ ಹಿಂದೂ ಮಹಾಸಮಾವೇಶ"ಕ್ಕೆ ತಾಲೂಕು ಆಡಳಿತ ಅನುಮತಿ ನಿರಾಕರಿಸಿರುವುದನ್ನು ಖಂಡಿಸಿ ಬಸವಾದಿ ಶಿವಶರಣರ ಹಿಂದೂ ಮಹಾಸಮಾವೇಶ ಪರ ಒಕ್ಕೂಟದ ಮುಖಂಡರು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದ್ದಾರೆ.

ಬಸವಕಲ್ಯಾಣ ತಾಲೂಕು ಕಚೇರಿ ಕೆಲ ಮಠಾಧೀಶರ ಬಸವಪರ ಸಂಘಟನೆಗಳ ಸ್ವತ್ತೆ. ಹಾಗಿದ್ದಲ್ಲಿ ಕೆಲವು ವರ್ಷಗಳ ಹಿಂದೆ ಬಸವಣ್ಣನವರ ವಚನಾಂಕಿತ ತಿದ್ದುಪಡಿ ಮಾಡಿರುವ ಪೂಜ್ಯ ಮಾತೆ ಮಹಾದೇವಿಯವರ ಕಲ್ಯಾಣ ಪರ್ವಕ್ಕೆ ಇಂದಿನಂತೆ ಅಂದು ಸಹ ಎಲ್ಲಾ ಮಠಾಧೀಶರು, ಬಸವಪರ ಸಂಘಟನೆಗಳು ವಿರೋಧಿಸಿದರೂ ಸಹ ಕಲ್ಯಾಣಪರ್ವ ಸಮಾವೇಶಕ್ಕೆ ಅನುಮತಿ ಕೊಟ್ಟಿದ್ದೀರಿ. ಅವರಿಗೊಂದು ಕಾನೂನು, ಬಸವಾದಿ ಶಿವಶರಣರ ಹಿಂದೂ ಸಮಾವೇಶಕ್ಕೆ ಒಂದು ಕಾನೂನು ಇದೆಯೇ ಎಂಬುವುದನ್ನು ಸ್ಪಷ್ಟಪಡಿಸಬೇಕು.



ಕಳೆದ ಕೆಲವು ವರ್ಷಗಳಿಂದ ಎರಡು ಪರಸ್ಪರ ವಿರೋಧಿ ಗುಂಪುಗಳ ಕಲ್ಯಾಣ ಪರ್ವಗಳು ಆಯೋಜಿಸಲು ಅನುಮತಿ ಕೊಟ್ಟು, ಸಮಾಜದಲ್ಲಿ ಗೊಂದಲ, ಅಶಾಂತಿ ಉಂಟು ಮಾಡಿದ್ದು ಬಸವಕಲ್ಯಾಣ ತಾಲೂಕು ಕಾರ್ಯಾಲಯದಲ್ಲಿ ಸಮಾವೇಶವಂತೂ ಒಂದೇ ಕಾರ್ಯಕ್ರಮ, ಅದು ಬಸವಕಲ್ಯಾಣ ತಾಲೂಕಿನ ನಾಗರಿಕರೆ ಆಯೋಜಿಸಿದ್ದಾಗಲೂ ತಹಸೀಲ್ದಾರರು ನಿರಾಕರಿಸಿರುವುದು ಕಾನೂನು ಬಾಹಿರ. ಸಂವಿಧಾನ ವಿರೋಧಿ ಕೃತ್ಯವೆಸಗಿದ ತಹಸೀಲ್ದಾರರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಂಡು ಬಸವಾದಿ ಶಿವಶರಣರ ಸಮಾವೇಶಕ್ಕೆ ಅನುವು ಮಾಡಿಕೊಡಬೇಕೆಂದು ಆಗ್ರಹಿಸಿದ್ದಾರೆ.

## ದೀರ್ಘಾವಧಿಯ ಪ್ರಧಾನಿಯಾಗಿ ದಾಖಲೆ: ಸಂಭ್ರಮಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ದೀರ್ಘಾವಧಿಯ ಪ್ರಧಾನಿಯಾಗಿ ಹೊಸ ದಾಖಲೆ ನಿರ್ಮಿಸಿದ ಹಿನ್ನೆಲೆಯಲ್ಲಿ ಬಿಜೆಪಿ ಔರಾದ(ಬಿ) ಮಹಿಳಾ ಮೋರ್ಚಾ ವತಿಯಿಂದ ಶುಕ್ರವಾರ ತಾಲೂಕಿನ ಕರಕ್ಯಾಳ ಗ್ರಾಮದಲ್ಲಿ ವಿಶೇಷ ಸಂಭ್ರಮಾಚರಣೆ ಕಾರ್ಯಕ್ರಮ ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ಉಲ್ಲಾಸಿನಿ ಮುಧಾಳೆ ಅವರು, "ಪ್ರಧಾನಿ ನರೇಂದ್ರ ಮೋದಿಯವರ ಸಮರ್ಥ ನೇತೃತ್ವದಲ್ಲಿ ದೇಶದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಅಭೂತಪೂರ್ವ ಅಭಿವೃದ್ಧಿ ಕೆಲಸಗಳಾಗಿವೆ. ಅವರ ಜನಪರ ಯೋಜನೆಗಳು ಹಾಗೂ ದೇಶದ ಪ್ರಗತಿಯು ಜಾಗತಿಕ ಮಟ್ಟದಲ್ಲಿ ಭಾರತದ ಕೀರ್ತಿಯನ್ನು ಹೆಚ್ಚಿಸಿದೆ," ಎಂದು ಶ್ಲಾಘಿಸಿದರು.

ಬಳಿಕ ತಾಲ್ಲೂಕು ಅಧ್ಯಕ್ಷೆ ಶಕುಂತಲಾ ಮುತ್ತಂಗೆ ಮಾತನಾಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ



ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾರ್ಯಗಳು ಹಾಗೂ ಅವು ಜನಸಾಮಾನ್ಯರಿಗೆ ತಲುಪಿದ ವಿಧಾನದ ಕುರಿತು ವಿವರಣೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ 'ಸ್ವದೇಶಿ ಕಾರ್ಯಕ್ರಮ'ವನ್ನು ಆಯೋಜಿಸಲಾಗಿತ್ತು. ಇದರಲ್ಲಿ ದೇಶೀಯ ಉತ್ಪನ್ನಗಳ ಬಳಕೆ ಹಾಗೂ ಪ್ರಧಾನಿಯವರ 'ಆತ್ಮನಿರ್ಭರ ಭಾರತ'ದ ಪರಿಕಲ್ಪನೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ಇದೇ ವೇಳೆ ಪರಿಸರ ಸಂರಕ್ಷಣೆಯ ಸಂದೇಶ ಸಾರುವ ಉದ್ದೇಶದಿಂದ ಮಹಿಳಾ ಮೋರ್ಚಾ ಪದಾಧಿಕಾರಿಗಳು ಹಾಗೂ ಕಾರ್ಯಕರ್ತೆಯರು ಒಟ್ಟಾಗಿ ಸಸಿ ನೆಡುವ ಕಾರ್ಯಕ್ರಮವನ್ನು ನಡೆಸಿದರು.

ಕಾರ್ಯಕ್ರಮದಲ್ಲಿ ನೆರೆದಿದ್ದ ಮಹಿಳಾ ಮೋರ್ಚಾ ಕಾರ್ಯಕರ್ತೆಯರು ಮತ್ತು ಮುಖಂಡರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮೋರ್ಚಾ ಪ್ರಮುಖ ಪದಾಧಿಕಾರಿಗಳಾದ ಭಾರತಿ ಭೋಸ್ಲೆ, ಶಿಲ್ಪಾ ತೋರ್ಣೆಕರ್, ರೂಪಾ, ಶುಭಾಂಗಿ, ಮಂಗಲಾ ಕರಕ್ಯಾಳ ಸೇರಿದಂತೆ ಗ್ರಾಮದ ನೂರಾರು ಮಹಿಳೆಯರು ಹಾಗೂ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಭ್ರಷ್ಟ ಅಧಿಕಾರಿಗಳಿಗೆ ಸಿಂಹಸ್ವಪ್ನವಾದ ಲೋಕಾಯುಕ್ತ ಸಂಸ್ಥೆ: ಬಿ.ವೀರಪ್ಪ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಸಮಾಜದಲ್ಲಿ ವಿದ್ಯಾವಂತ ಮೋಸಗಾರರೇ ಹೆಚ್ಚುತ್ತಿದ್ದು ಭ್ರಷ್ಟ ಅಧಿಕಾರಿಗಳಿಗೆ ಲೋಕಾಯುಕ್ತ ಸಂಸ್ಥೆ ತಕ್ಕ ಶಿಕ್ಷೆ ನೀಡುತ್ತಿದೆಯೆಂದು ಉಪಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ವೀರಪ್ಪ ಅವರು ಅಭಿಪ್ರಾಯಪಟ್ಟರು.

ಬೀದರ ನಗರದ ಪೂಜ್ಯಶ್ರೀ ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಜೂ.19ರ ಶುಕ್ರವಾರ ರಂದು ಬೀದರ ಜಿಲ್ಲೆಯಲ್ಲಿ ದಾಖಲಾಗಿರುವ ದೂರುಗಳ ವಿಚಾರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಲೋಕಾಯುಕ್ತ ಸಂಸ್ಥೆ ಇಡೀ ರಾಷ್ಟ್ರದಲ್ಲಿ ಬಲಿಷ್ಠ ಹಾಗೂ ಸ್ವಾಯತ್ತ ಸಂಸ್ಥೆ. ಈ ಹಿಂದೆ ರಾಜ್ಯದ ಮುಖ್ಯಮಂತ್ರಿ ಹಾಗೂ ಸಚಿವರನ್ನು ಜೈಲಿಗೆ ಕಳುಹಿಸಿದ ಸಂಸ್ಥೆ. ಸಾರ್ವಜನಿಕರಿಗೆ ಯಾವುದೇ ತೊಂದರೆಯಾದಲ್ಲಿ ಲೋಕಾಯುಕ್ತ ಎದುರು ದೂರು ದಾಖಲಿಸಿದಲ್ಲಿ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಸಾರ್ವಜನಿಕ ಹಿತಾಸಕ್ತಿ ಇದ್ದಲ್ಲಿ ಸ್ವಯಂ ಪ್ರೇರಿತ ದೂರು ದಾಖಲಿಸಿ ನ್ಯಾಯ ಒದಗಿಸಿದ ಅನೇಕ ಉದಾಹರಣೆಗಳಿವೆ ಎಂದರು.

ಭ್ರಷ್ಟಚಾರದಲ್ಲಿ ತೊಡಗಿರುವ ಹಾಗೂ ಆದಾಯ ಮೀರಿ ಆಸ್ತಿಗಳಿಸಿರುವ ಅನೇಕ ಅಧಿಕಾರಿಗಳಿಗೆ ಲೋಕಾಯುಕ್ತ ಸಂಸ್ಥೆಯು ದಾಳಿ ನಡೆಸಿದೆ. ಅಧಿಕಾರಿಗಳು ತಮ್ಮ ಕಾರ್ಯಗಳನ್ನು ಜವಾಬ್ದಾರಿಯುತವಾಗಿ ಮಾಡದಿದ್ದಲ್ಲಿ ತಕ್ಕ ಪಾಠ ಕಲಿಸಿದೆಯೆಂದರು.

ತಾವು ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾಗಿದ್ದಾಗ ಈ ವರೆಗೆ ಊರೂರು ಸಂಚರಿಸಿ 1.8 ಕೋಟಿ ಪ್ರಕರಣಗಳನ್ನು ಬಗೆಹರಿಸಲಾಗಿದೆ, ಅಧಿಕಾರಿಗಳು



ಹಾಗೂ ಸಾರ್ವಜನಿಕರು ಸರಿಯಾಗಿ ಸ್ಪಂದಿಸಿದರೆ ಸಮಸ್ಯೆಗಳನ್ನು ಬಗೆಹರಿಸಬಹುದಾಗಿದೆ ಎಂದರು.

ಸಾರ್ವಜನಿಕರು ಹಾಗೂ ಅಧಿಕಾರಿಗಳು ತಮ್ಮ ಹಕ್ಕುಗಳು ಹಾಗೂ ಕರ್ತವ್ಯಗಳನ್ನು ನಿಭಾಯಿಸಬೇಕು. ಸಾರ್ವಜನಿಕರು ದೂರು ದಾಖಲಿಸಿದ ನಂತರ ಹೆದರದೆ ತಾರ್ಕಿಕ ಅಂತ್ಯದವರೆಗೆ ಸ್ಪಂದಿಸಬೇಕು. ಕೆಲ ದೂರುದಾರರು ಅರ್ಧಕ್ಕೆ ಹಿಂಜರಿಯುತ್ತಾರೆ. ಅನ್ಯಾಯದ ವಿರುದ್ಧ ಸಂಘ ಸಂಸ್ಥೆಗಳು ಹೋರಾಡಬೇಕೆಂದರು. ಅಧಿಕಾರಿಗಳು ಆತ್ಮವಂಚನೆ ಮಾಡಿಕೊಳ್ಳಬಾರದು. ದೇಶದ್ರೋಹಿಗಳು ಹಾಗೂ ವಿದ್ಯಾವಂತ ಮೋಸಗಾರರು ಹೆಚ್ಚುತ್ತಿದ್ದಾರೆ ಎಂದು ಕಳವಳ ವ್ಯಕ್ತ ಪಡಿಸಿದರು.

ಅಧಿಕಾರಿಗಳು ಅಧಿಕಾರ ಬಂದ ನಂತರ ಲಂಚತನಕ್ಕೆ ಪರವಾನಗಿ ಸಿಕ್ಕಂತೆ ವರ್ತಿಸಬಾರದು ಪ್ರಾಮಾಣಿಕ ಅಧಿಕಾರಿಗಳು ಸಹ ಇದ್ದಾರೆ. ಆದರೆ ಭ್ರಷ್ಟ ಅಧಿಕಾರಿಗಳು ಹೆಚ್ಚು ಇದ್ದಾರೆ. ಅವರು ಜೀವಂತವಾಗಿದ್ದರೂ ಸತ್ತಂತೆ ಎಂದರು.

ನಾವು ಮಾಡಿದ ಅನ್ನವನ್ನು ನಾವು ತಿನ್ನಬೇಕು. ಇತರರ ಅನ್ನ ಕಸಿದು ತಿಂದರೆ ಶ್ರಾಪ ಹತ್ತುತ್ತದೆ. ಪ್ರಮಾಣಿಕ ಅಧಿಕಾರಿಗಳು ಯಾವುದಕ್ಕೂ ಹೆದರುವ ಅಗತ್ಯವಿಲ್ಲ. ದುಷ್ಟರಿಗೆ ಶಿಕ್ಷೆ ಆಗಲೇಬೇಕು. ಕೋಟ್ಯಾಂತರ ಆಸ್ತಿಪಾಸ್ತಿ ಮಾಡಿದ ಸಾವಿರಾರು ಅಧಿಕಾರಿಗಳ ಜೀವನದ ನೋವನ್ನು ನಾನು ನೋಡಿರುವೆ. ತೀರ ಅಧೋಗತಿಯ ಜೀವನ ಸಾಗಿಸಿದ್ದಾರೆ. ಪಶ್ಚಾತ್ತಾಪ ಪಡುತ್ತಾರೆ. ಮಕ್ಕಳು ಮಾತು ಕೇಳುವುದಿಲ್ಲ. ಅನ್ಯಾಯದ ಹಣ ಗಳಿಸುವುದು ಪಾಪ ಎಂದರು.



ಮಕ್ಕಳಿಗೆ ಸಂಸ್ಕಾರ ಕಲಿಸಬೇಕು, ಸಮಾಜ ಸಂಸ್ಕಾರಯುತವಾದರೆ ಭ್ರಷ್ಟಚಾರವನ್ನು ನಿರ್ಮೂಲನೆ ಮಾಡಬಹುದು. ಈ ಸಮಾಜ ಮಹಾತ್ಮ ಗಾಂಧಿ, ಡಾ.ಅಂಬೇಡ್ಕರ್, ಬಸವೇಶ್ವರ, ಸುಭಾಸ್‌ಚಂದ್ರಭೋಸ್ ಅವರನ್ನು ಎಲ್ಲ ಕಾಲದಲ್ಲಿಯೂ ನೆನಪಿಸಿಕೊಳ್ಳುತ್ತದೆ. ಆದರೆ ಹಣ ಗಳಿಸುವ ವ್ಯಕ್ತಿಗಳನ್ನು ನೆನಪಿಸಿಕೊಳ್ಳುವುದಿಲ್ಲ ಎಂದರು.

ಇತ್ತೀಚಿಗೆ ಸುಳ್ಳು ಕೇಸ್ ದಾಖಲಿಸುವವರ ಸಂಖ್ಯೆ ಹೆಚ್ಚುತ್ತಿದೆ. 40 ಸಾವಿರ ಸುಳ್ಳು ಪ್ರಕರಣಗಳು ಬಾಕಿ ಇವೆ. ಸುಳ್ಳು ಕೇಸ್ ದಾಖಲಿಸುವವರಿಗೆ 3 ವರ್ಷ ಜೈಲುವಾಸ ಹಾಗೂ ದಂಡ ಇದೆಯೆಂದರು. ಕಾರ್ಯಕ್ರಮದಲ್ಲಿ ಒಟ್ಟು 123 ದೂರುಗಳನ್ನು ಬಗೆಹರಿಸಿದರು.

ದೂರು ವಿಚಾರಣೆ ವೇಳೆ ಉಪಲೋಕಾಯುಕ್ತರು ಅನೇಕ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿ ನಿಗದಿತ ಅವಧಿ ಒಳಗೆ ತಮ್ಮ ಕಾರ್ಯಗಳನ್ನು ಪೂರ್ಣಗೊಳಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಲೋಕಾಯುಕ್ತ ಉಪನಿಭಂದಕರಾದ ಅರವಿಂದ, ನ್ಯಾಯಾಧೀಶರಾದ ರಾಘವೇಂದ್ರ ಉಪಾಧ್ಯೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಗೀರಿಶ್ ದಿಲೀಪ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಡಿಎಫ್‌ಓ ಸುಮೀತ್ ಕುಮಾರ ಪಾಟೀಲ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಸಿ.ಸಿದ್ದರಾಜು, ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ತಗ್ಗು ಗುಂಡಿಗಳಿಂದ ಸಾರ್ವಜನಿಕರಿಗೆ ಭಾರೀ ತೊಂದರೆ - ತಕ್ಷಣ ದುರಸ್ತಿ ಮಾಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ನಗರದಲ್ಲಿ ರಸ್ತೆ ಸಮಸ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ ಸಂಬಂಧಪಟ್ಟ ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಾರ್ವಜನಿಕರು,ವ್ಯಾಪಾರಸ್ಥರು, ರೈತರು ಭಾರೀ ಸಂಕಷ್ಟ ಅನುಭವಿಸುತ್ತಿದ್ದಾರೆ.

ಇಲ್ಲಿನಬಸನಿಲ್ದಾಣದಿಂದಅಂಬೇಡ್ಕರ್ ಚೌಕದವರೆಗೆ ಹಾಗೂ ಅಂಬೇಡ್ಕರ್ ಚೌಕದಿಂದ ತ್ರಿಪುರಾಂತ ದವರೆಗೆ ರಸ್ತೆಯ ತುಂಬೆಲ್ಲಾ ದೊಡ್ಡ ದೊಡ್ಡ ಗುಂಡಿಗಳು ನಿರ್ಮಾಣವಾಗಿದ್ದು ವಾಹನ ಸವಾರರು ಮತ್ತು ಸಾರ್ವಜನಿಕರು ಜೀವಭಯದಲ್ಲೇ ಸಂಚಾರ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಯುವ ಕ್ರಾಂತಿ ಸಂಘಟನೆಯ ಜಿಲ್ಲಾಧ್ಯಕ್ಷರಾದ ಸಂಗಮೇಶ ಭೂರೆಯವರು ಆಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ ಮಳೆಗಾಲ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಈ ಗುಂಡಿಗಳಲ್ಲಿ ನೀರು ನಿಂತು ರಸ್ತೆ ಸಂಪೂರ್ಣ ಹದಗೆಡುವ ಸಾಧ್ಯತೆ ಇದೆ. ಶಾಲಾ ಮಕ್ಕಳು, ಮಹಿಳೆಯರು, ವೃದ್ಧರು ಹಾಗೂ ದ್ವಿಚಕ್ರ ವಾಹನ ಸವಾರರು ಪ್ರತಿದಿನ ಅಪಾಯದ ಮಧ್ಯೆ ಸಂಚಾರ ಮಾಡುತ್ತಿದ್ದಾರೆ. ರಾತ್ರಿ ಸಮಯದಲ್ಲಿ ಗುಂಡಿಗಳು ಕಾಣಿಸದೇ ಅಪಘಾತ ಸಂಭವಿಸುವ ಭೀತಿ ಹೆಚ್ಚಾಗಿದೆ ಎಂದರು. ಸರ್ಕಾರ ಕೋಟಿ ಕೋಟಿ ರೂಪಾಯಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಮಾಡುತ್ತಿದೆ ಎಂದು ಹೇಳಿಕೊಳ್ಳುತ್ತಿದ್ದರೂ ನೆಲಮಟ್ಟದಲ್ಲಿ ರಸ್ತೆಗಳ ದುಸ್ಥಿತಿ ಮಾತ್ರ ದಿನೇ ದಿನೇ ಹದಗೆಡುತ್ತಿದ್ದು ಸಾರ್ವಜನಿಕರ ತೆರಿಗೆ ಹಣ ವ್ಯರ್ಥವಾಗುತ್ತಿರುವ ಅನುಮಾನ ಮೂಡುತ್ತಿದೆ.ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ತಕ್ಷಣ ರಸ್ತೆ ಗುಂಡಿಗಳನ್ನು ಮುಚ್ಚಿ ಗುಣಮಟ್ಟದ ರಸ್ತೆ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಸಂಗಮೇಶ ಭೂರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬುತ್ತಿ ಬಸವೇಶ್ವರ ದೇವಸ್ಥಾನದಲ್ಲಿ ಯೋಗ ಶಿಬಿರ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯ ಕುಷ್ಟಗಿಯ ಶ್ರೀ ಬುತ್ತಿ ಬಸವೇಶ್ವರ ದೇವಸ್ಥಾನದಲ್ಲಿ ಯಲಬುರ್ಗಾ ಪತಂಜಲಿ ಯೋಗ ಸಮಿತಿಯವರಿಂದ ಶಿಬಿರಾರ್ಥಿಗಳಿಗೆ ಯೋಗಾಸನಗಳ ಬಗ್ಗೆ ಮಾಹಿತಿ ಮಾರ್ಗದರ್ಶನ ನೀಡಲಾಯಿತು.ಈ ವೇಳೆ ಕೊಪ್ಪಳ ಜಿಲ್ಲಾ ಅಧ್ಯಕ್ಷ ವೀರೇಶ ಬಂಗಾರ ಶೇಟ್ಟರ, ಗೌರವ ಅಧ್ಯಕ್ಷ ಸಂಗಣ್ಣ ಟೆಂಗಿನಕಾಯಿ,ಹಾಗು ಯೋಗ ತಬೇತಿದಾರ ಆಯುಷ್ಮಾನ ಇಲಾಖೆಯ ಲೋಕೇಶ ಲಮಾಣಿ, ಯೋಗ ಸಮಿತಿಯ ಶರಣಬಸಪ್ಪ ದಾನಕೈ ಇವರನ್ನು ಕುಷ್ಟಗಿಯ ಪತಂಜಲಿ ಸಮಿತಿಯವರು ಸನ್ಮಾನಿಸಿದರು. ಈ ವೇಳೆ ಅಚಲರಾಂ,ಪಂಕಜಾ ವಾಲಿಕಾರ, ಗಣೇಶ ಗುಡ್ಡದ,ಲತಾ ಸ್ಥಾವರಮಠ ಕುಸುಮಕ್ಕ ಶ್ಯಾಟಿ ಶೀವಲೀಲಾ ದಾವಣಗೇರಿ ,ಭಾರತಿ ಶೇಟ್ಟಿ, ಕುಮಾರ ಬಡಿಗೇರ, ಹನುಮಂತಪ್ಪ ಜಾಲಿಮರದ ,ಸೇರಿದಂತೆ ಇತರರು ಇದ್ದರು.

## ಮಣ್ಣಿನ ಫಲವತ್ತತೆ ಹೆಚ್ಚಳಕ್ಕೆ ವಿಜ್ಞಾನಿಗಳ ಸಲಹೆ




• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ತಾಲೂಕಿನ ಮುತ್ತಗಿ ಗ್ರಾಮದಲ್ಲಿ ಕೇತಿ ಬಚಾವೋ ಮತ್ತು ಧರತಿ ಬಚಾವೋ ಆಂದೋಲನ ಕಾರ್ಯಕ್ರಮ ಶುಕ್ರವಾರ ಆಯೋಜಿಸಲಾಗಿತ್ತು. ವಿಜ್ಞಾನಿಗಳಾದ ಶಿಲ್ಪಾ ಮತ್ತು ಶ್ವೇತಾ, ಎಫ್ಎನ್ ಎಸ್ ಪ್ರಕಾಶ ಎಸ್ ಕೆ ಬಿರಾದಾರ ಬಿಟಿಎಂ ಪುಷ್ಪ ಗುಡದಿನ್ನಿ ಅವರು ಭಾಗವಹಿಸಿದ್ದರು.

ಕೇತಿ ಬಚಾವು ಯಾವ ರೀತಿ ಮಾಡಬೇಕು ನಾವು ಭೂಮಿ ಸಂರಕ್ಷಣೆ ರಾಸಾಯನಿಕ ಗೊಬ್ಬರಗಳನ್ನು ಕಡಿಮೆ ಮಾಡಿ ಸಾವಯವ ಗೊಬ್ಬರಗಳು ತಿಪ್ಪೆ ಗೊಬ್ಬರ ಎರೆಹುಳ ಗೊಬ್ಬರ ಇವುಗಳು ಮತ್ತು ಹಸಿರೆಲೆ ಗೊಬ್ಬರಗಳು ಸೆನಬು ಗೊಬ್ಬರ ಗಿಡ ಇವುಗಳನ್ನೆಲ್ಲ ಉಪಯೋಗ ಮಾಡಿಕೊಂಡು ಮಣ್ಣಿನ ಫಲವತ್ತತೆಯನ್ನು ಹೇಗೆ ಹೆಚ್ಚಿಸಬೇಕು ಎಂದು ವಿಜ್ಞಾನಿಗಳು ಮತ್ತು ಆತ್ಮ ಡಿಪಿಡಿಎಸ್ ಕೆ ಬಿರಾದಾರ ವಿವರಿಸಿ ರೈತರಿಗೆ ಸಲಹೆ ನೀಡಲಾಯಿತು.

## ಮುಖ್ಯಮಂತ್ರಿ ಭೇಟಿ ಮಾಡಿ ಈಡಿಗರ ಸಮಸ್ಯೆ ಕುರಿತು ಚರ್ಚಿಸಿದ ಡಾ.ಪ್ರಣವಾನಂದ ಸ್ವಾಮೀಜಿ



• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಡಾ. ಪ್ರಣವಾನಂದ ಸ್ವಾಮೀಜಿ ಅವರು ರಾಜ್ಯಮಟ್ಟದ 5 ನೇ ವರ್ಷದ ವಾರ್ಷಿಕೋತ್ಸವ ಹಾಗೂ ಚಿಂತನೆ ಶಿಬಿರ ಗೋಕರ್ಣದಲ್ಲಿ ಹಮ್ಮಿಕೊಂಡಿದ್ದರು.

ಅದರಂತೆ ಸಮಾಜಕ್ಕೆ ಅಗತ್ಯವಿರುವ ಬೇಡಿಕೆಗಳ ಕುರಿತು ರಾಜ್ಯದ ವಿವಿಧ ಭಾಗಗಳಿಂದ ಬಂದ ಪ್ರತಿನಿಧಿಗಳು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಅದರಂತೆ ಪ್ರಣವಾನಂದ ಸ್ವಾಮೀಜಿಯವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರನ್ನು ಭೇಟಿಯಾಗಿ ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

ಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮಕ್ಕೆ ನಿರ್ದೇಶಕರ ಆಯ್ಕೆಯ ಜತೆಗೆ ಅನುದಾನ ಬಿಡುಗಡೆ, ಸಮಾಜಕ್ಕೆ ಅಗತ್ಯವಿರುವಲ್ಲಿ ವಸತಿ ನಿಲಯ, ಸಭಾಭವನ ನಿರ್ಮಾಣಕ್ಕೆ ಜಾಗಮಂಜೂರಿ, ಉತ್ತರ ಕನ್ನಡ, ಶಿವಮೊಗ್ಗ, ಉಡುಪಿ, ದಕ್ಷಿಣ ಕನ್ನಡದಲ್ಲಿ ಅತಿಹೆಚ್ಚಿನ ಸಂಖ್ಯೆಯಲ್ಲಿರುವ ಈಡಿಗರಿಗೆ ಹೆಚ್ಚಿನ ಅನುದಾನ ನೀಡುವುದು. ಹೀಗೆ ವಿವಿಧ ವಿಷಯಗಳ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಗೌರವಾಧ್ಯಕ್ಷ ಮಂಚೇಗೌಡ, ರಾಜ್ಯಾಧ್ಯಕ್ಷ ತಿಪ್ಪೇಶ ಇತರರಿದ್ದರು.

## ಜೇವರ್ಗಿ: ವಿವಿಧ ಯೋಜನೆಯಡಿ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.19–ಜೇವರ್ಗಿ (ಜಿ.ಪಂ.) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯಿಂದ 202627ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ಈ ಕೆಳಕಂಡ ವಿವಿಧ ಯೋಜನೆಗಳಡಿ ಸಹಾಯಧನ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆಎಂದು ಜೇವರ್ಗಿ (ಜಿ.ಪಂ.) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರುಪ್ರಕಟಣೆಯಲ್ಲಿ ತಿಳಿಸಿದ್ದಾರೆ. ರಾಷ್ಟ್ರೀಯ ತೋಟಗಾರಿಕೆ ಮೀಷನ್, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಇತರೆ ಇಲಾಖೆ ಯೋಜನೆಗಳಡಿ ಪ್ರದೇಶ ವಿಸ್ತರಣೆ, ಪ್ಲಾಸ್ಟಿಕ್ ಮಲ್ಚಿಂಗ್, ನೇರಳು ಪರದೆ, ಈರುಳ್ಳಿ ಶೇಖರಣಾ ಘಟಕ, ಪಕ್ಷಿ ನಿರೋಧಕ ಬಲೆ, ಹನಿ ನೀರಾವರಿ ಹಾಗೂ ತಳ್ಳುವ ಗಾಡಿ ಇತರೆಕಾರ್ಯಕ್ರಮಗಳಡಿ ಸಹಾಯಧನ ನೀಡಲಾಗುತ್ತದೆ. ಸಂಬಂಧಪಟ್ಟ/ಇಚ್ಛೆಯುಳ್ಳ ರೈತರು 2026ರಜೂನ್ 30ರೊಳಗಾಗಿಜೇವರ್ಗಿ (ಜಿ.ಪಂ.) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿಜೇವರ್ಗಿ (ಜಿ.ಪಂ.) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯ ಹೋಬಳಿ ಮಟ್ಟದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

## ಬಯೋಗ್ಯಾಸ್ ಘಟಕ ಸ್ಥಾಪನೆ ಏಜೆನ್ಸಿ/ಸಂಸ್ಥೆಗಳಿಂದ ದರಪಟ್ಟಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.19–ಸೇಡಂ ನಗರದಲ್ಲಿ ಬಯೋಗ್ಯಾಸ್ ಘಟಕಗಳನ್ನು ಅಳವಡಿಸಲು ನಿರ್ಧರಿಸಲಾಗಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಏಜೆನ್ಸಿ/ ಸಂಸ್ಥೆಗಳಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ ಎಂದು ಸೇಡಂ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

ಆಸಕ್ತಿಯುಳ್ಳ ಏಜೆನ್ಸಿ/ಸಂಸ್ಥೆಯವರು ಪ್ರಸ್ತಾವಿತ ಸ್ಥಳಕ್ಕೆ ಭೇಟಿ ನೀಡಿ ತಗಲುವ ಅಂದಾಜುವೆಚ್ಚದ ಬಗ್ಗೆ ಎಲ್ಲಾ ಸಾಮಾಗ್ರಿ ಮತ್ತು ಸ್ಥಾಪನೆ ಒಳಗೊಂಡಂತೆ ಪ್ರತ್ಯೇಕವಾಗಿ ದರವನ್ನು ನಮೂದಿಸಿ ಎರಡು ಅಂದಾಜು ಪತ್ರಿಕೆಗಳನ್ನು ಪ್ರತ್ಯೇಕವಾಗಿ ಲಗತ್ತಿಸಿ 2026ರ ಜೂನ್ 30 ರೊಳಗಾಗಿ ಸೇಡಂ ನಗರಸಭೆಯ ಕಚೇರಿಯಲ್ಲಿ ಸಲ್ಲಿಸಬೇಕು.

## ವಿದ್ಯಾರ್ಥಿಗಳು ಸ್ವಂತ ಸ್ಟಾರ್ಟ್‌ಅಪ್ ಆರಂಭಿಸಲು ಉದ್ಯಮಶೀಲತಾ ಕೌಶಲ ಬೆಳೆಸಿಕೊಳ್ಳಬೇಕು:ಪ್ರೊ. ಬಿಡವೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ವಿದ್ಯಾರ್ಥಿಗಳು ತಮ್ಮ ಉದ್ಯಮಶೀಲತಾ ಕೌಶಲ್ಯಗಳನ್ನು ವೃದ್ಧಿಪಡಿಸಿಕೊಂಡು, ಕಡಿಮೆ ಬಂಡವಾಳದಲ್ಲಿ ಸ್ವಂತ ಸ್ಟಾರ್ಟ್‌ಅಪ್‌ಗಳನ್ನು ಆರಂಭಿಸಿ ಸ್ವಾವಲಂಬಿಗಳಾಗಬೇಕು ಹಾಗೂ ಇತರರಿಗೆ ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯಬೇಕು ಎಂದು ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶರಣಬಸವ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿರುವ ದೊಡ್ಡಪ್ಪ ಅಪ್ಪಾ ಸಭಾ ಮಂಟಪದಲ್ಲಿ ಶುಕ್ರವಾರದಂದು ಆಯೋಜಿಸಿದ್ದ ಪ್ಲೇಸ್‌ಮೆಂಟ್ ಡ್ರೈವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದು ಉದ್ಯೋಗಗಳ ಕೊರತೆ ಇಲ್ಲ, ಆದರೆ ಕೈಗಾರಿಕೆಗಳು ತಮ್ಮ ಅವಶ್ಯಕತೆಗೆ ತಕ್ಕ ಕೌಶಲ್ಯ ಹೊಂದಿದ ಅಭ್ಯರ್ಥಿಗಳನ್ನು ಕಂಡುಹಿಡಿಯಲು ಸಾಧ್ಯವಾಗುತ್ತಿಲ್ಲ ಎಂಬುದೇ ಮುಖ್ಯ ಸಮಸ್ಯೆಯಾಗಿದೆ. ವಿಶ್ವವಿದ್ಯಾಲಯಗಳು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಿಂದ ಹೊರಬರುವ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಅವಧಿಯಲ್ಲೇ ಉದ್ಯೋಗದಾತರ ಅಗತ್ಯಗಳಿಗೆ ತಕ್ಕಂತೆ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು."ವಿಶ್ವವಿದ್ಯಾಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳು ನಿಮ್ಮ ವಿದ್ಯಾಭ್ಯಾಸದ ಅಂತ್ಯದಲ್ಲಿ ಪದವಿ ಪ್ರಮಾಣಪತ್ರವನ್ನು ಮಾತ್ರ ನೀಡಬಲ್ಲವು. ಆದರೆ, ನಿಮ್ಮ ಕೌಶಲ್ಯಗಳನ್ನು ಹೆಚ್ಚಿಸಿಕೊಳ್ಳಲು ಅಗತ್ಯವಾದ ಅವಕಾಶಗಳನ್ನು ನೀವು ನಿಮ್ಮ ಅಧ್ಯಯನದ ಅವಧಿಯಲ್ಲೇ ಹುಡುಕಿಕೊಳ್ಳಬೇಕು. ಶಿಕ್ಷಣ ಸಂಸ್ಥೆಗಳು ಸಾಮಾನ್ಯ ಶಿಕ್ಷಣದ ಜೊತೆಗೆ ಕೌಶಲ್ಯಾಭಿವೃದ್ಧಿಗೆ ಬೇಕಾದ ಮಾರ್ಗಗಳನ್ನು ಒದಗಿಸುತ್ತವೆ. ಆ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ನಿಮ್ಮನ್ನು ನೀವು ನಿಪುಣ ಕೌಶಲ್ಯವಂತರನ್ನಾಗಿ ರೂಪಿಸಿಕೊಳ್ಳುವುದು ವಿದ್ಯಾರ್ಥಿಗಳ ಜವಾಬ್ದಾರಿಯಾಗಿದೆ" ಎಂದು ಹೇಳಿದರು.ಪ್ರೊ. ಬಿಡವೆ ಅವರು, ಪ್ಲೇಸ್‌ಮೆಂಟ್ ಡ್ರೈವ್‌ಗಳು ಪ್ರತಿಯೊಬ್ಬ ಯುವಕರ ಜೀವನದ ಅತ್ಯಂತ ಮಹತ್ವದ ಹಂತವಾಗುವುದರ ಜೊತೆಗೆ ಸವಾಲಿನ ಸಂದರ್ಭಗಳೂ ಆಗಿವೆ. ಉದ್ಯೋಗಾವಕಾಶಗಳನ್ನು ಹುಡುಕುತ್ತಿರುವ ಯುವಕರು ಉದ್ಯೋಗದೊಂದಿಗೆ ಬರುವ ಎಲ್ಲಾ ಸವಾಲುಗಳನ್ನು ಎದುರಿಸಲು ಸಿದ್ಧರಾಗಿರಬೇಕು ಹಾಗೂ ಉದ್ಯೋಗದಾತರು ವಿಧಿಸುವ ಎಲ್ಲಾ ನಿರೀಕ್ಷೆಗಳನ್ನು ಪೂರೈಸಬೇಕು ಎಂದು ತಿಳಿಸಿದರು.

"ನಿಮ್ಮ ಕಠಿಣ ಪರಿಶ್ರಮವು ಕೊನೆಗೆ ಉತ್ತಮ ಫಲಿತಾಂಶಗಳನ್ನು ತಂದುಕೊಡುತ್ತದೆ. ನಾನು ನನ್ನ ವೃತ್ತಿಜೀವನವನ್ನು ಶರಣಬಸವ ವಿಶ್ವವಿದ್ಯಾಲಯದ ಇಂಜಿನಿಯರಿಂಗ್ ಕಾಲೇಜಿನಲ್ಲಿ ಉಪನ್ಯಾಸಕನಾಗಿ ಆರಂಭಿಸಿದ್ದೆ. ನಿರಂತರ ಪರಿಶ್ರಮ ಮತ್ತು ಸಂಸ್ಥೆಯ ನಿರೀಕ್ಷೆಗಳನ್ನು ಪೂರೈಸುವ ಮೂಲಕ ಇಂದು ವಿಶ್ವವಿದ್ಯಾಲಯದ ಉಪಕುಲಪತಿ ಹುದ್ದೆಗೆ ಏರಿದ್ದೇನೆ. ನನ್ನ ಜೀವನವೇ ನಿಮಗೆ ಪಾಠವಾಗಬೇಕು" ಎಂದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಅವರು ಉದ್ಘಾಟನಾ ಭಾಷಣದಲ್ಲಿ ವಿದ್ಯಾರ್ಥಿಗಳು ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ಉದ್ಯಮಿಗಳಾಗುವ ದಿಕ್ಕಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

"ನೀವು ಉದ್ಯೋಗಕ್ಕಾಗಿ ಅಲೆದಾಡುವವರಾಗದೆ, ಇತರರಿಗೆ ಉದ್ಯೋಗ ನೀಡುವ ಉದ್ಯೋಗದಾತರಾಗುವ ಕನಸು ಕಾಣಬೇಕು" ಎಂದ ಅವರು, ವಿಶ್ವವಿದ್ಯಾಲಯದ ಯುವ ಪದವೀಧರರಿಗೆ ಉದ್ಯೋಗಾವಕಾಶಗಳನ್ನು ಒದಗಿಸುವಲ್ಲಿ ಮಹತ್ವದ ಪಾತ್ರವಹಿಸುವ ಈ ಪ್ಲೇಸ್‌ಮೆಂಟ್ ಡ್ರೈವ್ ಆಯೋಜಿಸಿದ್ದಕ್ಕಾಗಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯನ್ನು ಅವರು ಅಭಿನಂದಿಸಿದರು.

ಕ್ಯಾಡ್‌ಮ್ಯಾಕ್ಸ್, ಹ್ಯಾಪಿ ಮೈಂಡ್ಸ್ ಎಐ, ಟೆಕ್ ಎಸ್‌ಎಫ್‌ಟಿ, ಸೀಕ್ ನಿಯೋ, ಎಕ್ಸ್‌ನಿಟ್ರಾ, ಎಂಆರ್‌ಎಫ್ ಟೈರ್ಸ್, ಟಿವಿಎಸ್ ಉಪಾಸನಾ ಸೇರಿದಂತೆ ಪ್ರಮುಖ ಸಾಫ್ಟ್‌ವೇರ್ ಮತ್ತು ಕೈಗಾರಿಕಾ ಸಂಸ್ಥೆಗಳು ಈ ಪ್ಲೇಸ್‌ಮೆಂಟ್ ಡ್ರೈವ್‌ನಲ್ಲಿ ಭಾಗವಹಿಸಿದ್ದವು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ, ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ್ ಮಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಡೀನ್ ಶಿವಕುಮಾರ್ ಜವಳಿಗಿ, ಸಂಶೋಧನಾ ಡೀನ್ ಹಾಗೂ ವಿಶೇಷಾಧಿಕಾರಿ ಡಾ. ಸುಜಾತಾ ಮಲ್ಲಾಪುರ ಮತ್ತು ಪ್ಲೇಸ್‌ಮೆಂಟ್ ಡ್ರೈವ್‌ನಲ್ಲಿ ಭಾಗವಹಿಸಿದ್ದ ವಿವಿಧ ಕಂಪನಿಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಪ್ರೊ. ಶ್ರತಿ ಕಾರ್ಯಕ್ರಮವನ್ನು ನಿರೂಪಿಸಿದರು. ಪ್ರೊ. ಸಾವಿತ್ರಿ ಸ್ವಾಗತಿಸಿದರೆ, ಪ್ರೊ. ಶೋಭನಾ ಪ್ಲೇಸ್‌ಮೆಂಟ್ ಡ್ರೈವ್ ಕುರಿತು ಮಾಹಿತಿ ನೀಡಿದರು. ಪ್ರೊ. ನಾಗವೇಣಿ ವಂದನಾರ್ಪಣೆ ಸಲ್ಲಿಸಿದರು.

## ನನ್ನ ಪತ್ನಿಯ ಜೀವ ಉಳಿಸಿ : ಕಿಡ್ನಿ ಕಸಿ ಚಿಕಿತ್ಸೆಗೆ ನೆರವು ಕೋರಿದ ತಿಮ್ಮಾರೆಡ್ಡಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕೊಪ್ಪಳ ತಾಲೂಕಿನ ಬಸಾಪುರ ಗ್ರಾಮದ ನಿವಾಸಿ ತಿಮ್ಮಾರೆಡ್ಡಿ ಅವರು ತಮ್ಮ ಪತ್ನಿ ಹುಲಿಗೆಮ್ಮ ಅವರ ಕಿಡ್ನಿ ಚಿಕಿತ್ಸೆಗೆ ಆರ್ಥಿಕ ನೆರವು ನೀಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ತಮ್ಮ ಪತ್ನಿ ಹುಲಿಗೆಮ್ಮ ಅವರ ಎರಡು ಕಿಡ್ನಿಗಳು ಸಂಪೂರ್ಣವಾಗಿ ವೈಫಲ್ಯಗೊಂಡಿದ್ದು, ವಾರದಲ್ಲಿ ಎರಡು ಬಾರಿ ಡಯಾಲಿಸಿಸ್ ಮಾಡಿಸಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ತಿಳಿಸಿದರು. ವೈದ್ಯರ ಸಲಹೆಯಂತೆ ಡಯಾಲಿಸಿಸ್ ಚಿಕಿತ್ಸೆ ನಿರಂತರವಾಗಿ ಮುಂದುವರಿಯದಿದ್ದರೆ ಜೀವಕ್ಕೆ ಅಪಾಯ ಉಂಟಾಗುವ ಸಾಧ್ಯತೆಯಿದೆ ಎಂದು ಹೇಳಿದರು.

ಈ ಸಂಬಂಧ ಹುಬ್ಬಳ್ಳಿ, ಧಾರವಾಡ ಸೇರಿದಂತೆ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ವೈದ್ಯರನ್ನು ಸಂಪರ್ಕಿಸಿದ್ದು, ಕಿಡ್ನಿ ಕಸಿ ಮಾಡಿದರೆ ಆರೋಗ್ಯ ಸುಧಾರಿಸುವ ಸಾಧ್ಯತೆ ಇದೆ ಎಂದು ವೈದ್ಯರು ಅಭಿಪ್ರಾಯಪಟ್ಟಿದ್ದಾರೆ ಎಂದು ವಿವರಿಸಿದರು.

ಆದರೆ ಕುಟುಂಬವು ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದು, ಕಿಡ್ನಿ ಕಸಿ ಹಾಗೂ ಇತರೆ ಚಿಕಿತ್ಸೆಗಳಿಗಾಗಿ ಸುಮಾರು 10 ಲಕ್ಷ ವೆಚ್ಚವಾಗಲಿದೆ. ಕೂಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿರುವ ತಮಗೆ ಇಬ್ಬರು ಹೆಣ್ಣು ಮಕ್ಕಳ ವಿದ್ಯಾಭ್ಯಾಸದ ಜೊತೆಗೆ ಚಿಕಿತ್ಸಾ ವೆಚ್ಚವನ್ನು ಭರಿಸುವುದು ಅತ್ಯಂತ ಕಷ್ಟಕರವಾಗಿದೆ ಎಂದು ನೋವು ತೋಡಿಕೊಂಡರು.

ಹೀಗಾಗಿ ದಾನಿಗಳು, ಸಂಘ,ಸಂಸ್ಥೆಗಳು ಹಾಗೂ ಸಾರ್ವಜನಿಕರು ಮಾನವೀಯ ನೆಲೆಯಲ್ಲಿ ನೆರವು ನೀಡುವಂತೆ ಅವರು ವಿನಂತಿಸಿದರು. ನೆರವು ನೀಡಲು ಇಚ್ಛಿಸುವವರು ಫೋನ್ ಪೇ ಸಂಖ್ಯೆ : 7795061761 ಗೆ ಆರ್ಥಿಕ ಸಹಾಯ ಮಾಡಬಹುದು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪತ್ನಿ,ಮತ್ತು ಮಕ್ಕಳು ಉಪಸ್ಥಿತರಿದ್ದರು.

## ಕನಗನಹಳ್ಳಿಗೆ ಡಿ.ಸಿ.ಭೇಟಿ ಬೌದ್ಧ ಸ್ತೂಪ, ಅಶೋಕನ ಶಿಲಾಕೃತಿ ವೀಕ್ಷಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.19: ಜಿಲ್ಲಾಧಿಕಾರಿ ಇಕ್ರಮ ಶರೀಫ್ ಅವರು ಗುರುವಾರ ಚಿತ್ತಾಪುರ ತಾಲೂಕಿನ ಐತಿಹಾಸಿಕ ಕನಗನಹಳ್ಳಿಗೆ ಭೇಟಿ ನೀಡಿ ಬೌದ್ಧ ಸ್ತೂಪ ಮತ್ತು ಸಾಮ್ರಾಟ್ ಅಶೋಕನ ಶಿಲಾಕೃತಿ ವೀಕ್ಷಿಸಿದರು.



ಇದಕ್ಕು ಮುನ್ನ ಜಿಲ್ಲಾಧಿಕಾರಿಗಳು ಚುತ್ತಾಪುರ ಪಟ್ಟಣದಲ್ಲಿ ತಾಲೂಕಾ ಆರೋಗ್ಯ ಆಸ್ಪತ್ರೆಗೆ ಭೇಟಿ ರೋಗಿಗಳ ಯೋಗಕ್ಷೇಮ ವಿಚಾರಿಸಿದರು. ಆಸ್ಪತ್ರೆಯಲ್ಲಿ ನೀಡಲಾಗುತ್ತಿರುವ ಸೇವೆ ಕುರಿತು ಸಾರ್ವಜನಿಕರಿಂದ ಮಾಹಿತಿ ಪಡೆದರು. ತಾಲೂಕಾ ಕ್ರೀಡಾಂಗಣಕ್ಕೂ ಭೇಟಿ ನೀಡಿ ಕ್ರೀಡಾ ಚಟುವಟಿಕೆ ಮತ್ತು ಪ್ರಗತಿ ಕುರಿತು ಕ್ರೀಡಾಪಟುಗಳೊಂದಿಗೆ ಸಂವಾದ ನಡೆಸಿದರು.

ಇದಕ್ಕೂ ಮುನ್ನ ಸೇಡಂ ತಾಲೂಕಿನ ಮಳಖೇಡ ಕೋಟೆಗೆ ಭೇಟಿ ನೀಡಿದ ಅದರ ಸಂರಕ್ಷಣೆ ಕುರಿತು ಪ್ರವಾಸೋದ್ಯಮ ಇಲಾಖೆ ಮತ್ತು ಕರ್ನಾಟಕ ಪುರಾತತ್ವ ಮತ್ತು ಪರಂಪರೆ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಪ್ರೊಬೇಷನರ್ ಐ.ಎ.ಎಸ್ ಅಧಿಕಾರಿ ಶಿಖರ ಮೋಘಾ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಬೇಬಿ ಮೊಗೇರ್, ಸಹಾಯಕ ಆಯುಕ್ತ ಪ್ರಭುರೆಡ್ಡಿ, ಸೇಡಂ ತಹಶೀಲ್ದಾರ ಶ್ರೇಯಾಂಕಾ ಧನಶ್ರೀ, ಚಿತ್ತಾಪುರ ತಹಶೀಲ್ದಾರ ನಾಗಯ್ಯ ಹಿರೇಮಠ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಂಗಮೇಶ ಸೇರಿದಂತೆ ಮತ್ತಿತರರು ಇದ್ದರು.

## ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಯೊಂದಿಗೆ ಕೈ ಜೋಡಿಸಿ ; ಅರುಣಾಂಗ್ಷಗಿರಿ

• ಮಲ್ಲಮ್ಮ ನುಡಿ ವಾರ್ತೆಮುದಗಲ್




ಇಲ್ಲಿನ ಮೊಹರಂ ಆಚರಣೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಯೊಂದಿಗೆ ಕೈ ಜೋಡಿಸಬೇಕು ಎಂದು ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷಗಿರಿ ಶುಕ್ರವಾರ ತಿಳಿಸಿದರು. ಪಟ್ಟಣದ ಭಾರತ್‌ಫಂಕ್ಷನ್ ಹಾಲ್ನಲ್ಲಿ ಸ್ಥಳೀಯ ಪೊಲೀಸ್ ಠಾಣಾವತಿಯಿಂದ ಹಮ್ಮಿಕೊಂಡಿದ್ದ ಮೊಹರಂ ಶಾಂತಿ ಸಭೆಯಲ್ಲಿ ಮಾತನಾಡಿದರು. ಮೊಹರಂ ಆಚರಣೆ ಎಲ್ಲರೂ ಶಾಂತಿ, ಸೌಹರ್ದತೆಯಿಂದ ಆಚರಿಸಬೇಕು,ಅಧಿಕಾರಿಗಳು ಮೊಹರಂ ಆಚರಣೆಯ ಸ್ಥಳಗಳನ್ನು ಪರಿಶೀಲನೆ ಮಾಡಬೇಕು. ನಿನ್ನೆನಾವು ಜಲ್ಲಾಧಿಕಾರಿ ನೇತ್ರತ್ವದಲ್ಲಿ ಮೊಹರಂ ಆಚರಣೆಯಲ್ಲಿ ಅವಘಡವಾಗದಂತೆ ಇಲಾಖೆಗಳು ಮುನ್ನೆಚ್ಚರಿಕೆ ವಹಿಸುವ ಅಧಿಕಾರಿಗಳ ಸಭೆ ಮಾಡಲಾಗಿದೆ. ಸಾಮಜಿಕ ಜಾಲತಾಣಗಳ ಮೇಲೆ ನಿಗಾ ಇಡಬೇಕು. ಮಧ್ಯಪಾನ ನಿಷೇಧಿಸಬೇಕು. ವೈದ್ಯಕೀಯ ತಪಾಸಣೆ , ಅಂಬುಲೈನ್ಸ ವ್ಯವಸ್ಥೆ, ಆಗ್ನಿಅವಘಡಗಳು ನಡೆಯದಂತೆ ಮುಂಜಾಗ್ರತ ಕ್ರಮವಾಗಿ ಮೊಹರಂ ಆಚರಣೆ ಪ್ರಮುಖ ಸ್ಥಳಗಳಲ್ಲಿ ಆಗ್ನಿ ನಂದಿಸುವ ಸಾಮಾಗ್ರಿ ಇಡಬೇಕು. ಜೆಸ್ಕಾಂ ಅಧಿಕಾರಿಗಳು ವಿದ್ಯುತ್ ಸಮಸ್ಯೆಯಾಗದಂತೆ ಸ್ಥಳದಲ್ಲಿಯೇ ಇದ್ದು ಎಚ್ಚರಿಕೆ ವಹಿಸಬೇಕು. ಪುರಸಭೆಯವರು ಮೂಲಭೂತ ಸೌಕರ್ಯಕ್ಕೆ ಹೆಚ್ಚಿನ ಆದ್ಯತೆ ಕಲ್ಪಿಸಬೇಕು. ಇಲಾಖೆಯು ಅವಘಡವಾಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು. ಸಾರ್ವಜನಿಕರಿಗೆ ಸಮಸ್ಯೆಯಾದರೆ ಪೊಲೀಸ್ 112ಗೆ ಕರೆ ಮಾಡಬೇಕು. ಸಿಸಿ ಟಿವಿ, ಫೂಕಸ್ ಲೈಟ, ಮೈಕ ವ್ಯವಸ್ಥೆ, ಬೆಂಕಿ ಸಮೀಪ ಹೋಗದಂತೆ ಹಗ್ಗ ಕಟ್ಟಿ ಮುನ್ನೆಚ್ಚರಿಕೆ ವಹಿಸಬೇಕು, ಕಾಲ್ತುಳಿತವಾಗದಂತೆ ಎಚ್ಚರಿಕೆ ವಹಿಸಬೇಕು. ಎಲ್ಲರ ಸಹಕಾರದೊಂದಿಗೆ ರಾಜ್ಯದಲ್ಲಿ ಮೊಹರಂ ಆಚರಣೆ ಮಾದರಿ ಯಾಗಬೇಕು ಎಂದು ತಿಳಿಸಿದರು.

ಸಹಾಯಕ ಆಯುಕ್ತ ಬಸವಣ್ಣೆಪ್ಪ ಮಾತನಾಡಿ ಹಬ್ಬಕ್ಕೆ ಬೇಕಾಗುವ ಮೂಲಭೂತ ಸೌಕರ್ಯಕ್ಕೆ ಬೇಕಾಗುವ ಸಿದ್ದತೆಯ ಭರವಸೆ ನೀಡಿದರು. ಡಿವೈಎಸ್ಪಿ ದತ್ತಾತ್ರೆಯ ಕಾರ್ನಾಡ ಮಾತನಾಡಿ ನಮ್ಮ ಪೊಲೀಸ್ ಇಲಾಖೆಯೊಂದಿಗೆ ಸಾರ್ಜಜನಿಕರಲ್ಲರೂ ಸಹಕರಿಸಬೇಕು ತಿಳಿಸಿದರು. ಮುಖಂಡರಾದ ಗುರುಬಸ್ಸಪ್ಪ ಸಜ್ಜನ್ ಮೊಹರಂ ಆಚರಣೆ ಚಿತ್ರಣ ನೀಡಿದರು, ಅಶೋಕ ಗೌಡ ಪಾಟೀಲ್ ಆದಾಪುರ, ಜಮಿರ ಅಹ್ಮದ್ ಖಾಜಿ ಸಲಹೆಗಳನ್ನು ನೀಡಿದರು.ಮಸ್ಕಿ ವೃತ್ತ ಸಿಪಿಐ ರಾಮಣ್ಣ ಜಲಗೇರಿ, ಪುಸಭೆ ಮುಖ್ಯಾಧಿಕಾರಿ ಪ್ರವೀಣ್ ಕುಮಾರ ಬೋಗಾರ, ಆಗ್ನಿ ಶಾಮಕ ಠಾಣಾ ಅಧಿಕಾರಿ ಹೊನ್ನಪ್ಪ, ಅರಣ್ಯಾ ಇಲಾಖೆ ಅಧಿಕಾರಿ ಬಸವರಾಜ, ಡಾ. ವಿನೋದಕುಮಾರ, ಜೆಸ್ಕಾಂ ಸುಪ್ರವೈಜರ ಬನ್ನೆಪ್ಪ, ಪಿಎ ವೆಂಕಟೇಶ ಮಾಡಗೇರಿ, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಹುಸೇನಿ ಆಲಂ ದರ್ಗಾ ಕಮಿಟಿ ಅಧ್ಯಕ್ಷ ಅಮೀರ್ಬೇಗ ಉಸ್ತಾದ, ಕಾರ್ಯಧರ್ಶಿ ಮೊಹ್ಮದ ಸಾಧಿಕಲಿ, ಮಾಸೂಮ್ ಷರೀಫ, ಗಯಾಸುದ್ದಿನ್, ಹಾಗೂ ಸದಸ್ಯರು, ಶರಣಪ್ಪ ಕಟ್ಟಿಮನಿ, ಬಸವರಾಜ ಬಂಕದಮನಿ, ಹಿಂದೂ, ಮುಸ್ಲಿಂ ಸಮಾಜದ ಮುಖಂಡರು, ಪೊಲೀಸ್ ಸಿಬ್ಬಂದಿಗಳು ಇದ್ದರು.

# ಜೆಡಿಎಸ್ ಸಾಂಸ್ಕೃತಿಕ ವಿಭಾಗದ ಅಧ್ಯಕ್ಷರಾಗಿ ಭೀಮಾಶಂಕರ ನೇಮಕ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜಿಲ್ಲಾ ಜನತಾದಳ (ಜಾತ್ಯತೀತ) ಪಕ್ಷದ ಸಾಂಸ್ಕೃತಿಕ ವಿಭಾಗಕ್ಕೆ ಅಧ್ಯಕ್ಷ ರನ್ನಾಗಿ ಭೀಮಾಶಂಕರ ಎಂ. ಯರಗೊಳ ರವರನ್ನು ನೇಮಕ ಮಾಡಲಾಗಿದೆ ಎಂದು ಜನತಾದಳ (ಜಾತ್ಯತೀತ) ಪಕ್ಷದ ಸಾಂಸ್ಕೃತಿಕ ವಿಭಾಗದ ರಾಜ್ಯಾಧ್ಯಕ್ಷ ರಾ. ವೀರೇಶಪ್ರಸಾದ ( ಗುಬ್ಬಿ ವೀರಣ್ಣ) ರವರು ಬೆಂಗಳೂರಿನ ಜೆಪಿ ಭವನ ಜೆಡಿಎಸ್ ಪಕ್ಷದ ರಾಜ್ಯ ಕಚೇರಿಯಲ್ಲಿ ನೇಮಕ ಮಾಡಿ ಆದೇಶ ಪತ್ರವನ್ನು ನೀಡಿದರು. ಈ ಸಂದರ್ಭದಲ್ಲಿ ಕೊರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ, ಸಂಸ್ಕೃತಿಕ ವಿಭಾಗದ ರಾಜ್ಯಾಧ್ಯಕ್ಷ ವೀರೇಶ್ ಪ್ರಸಾದ, ಮತ್ತು ಪಕ್ಷದ ಪ್ರಮುಖ ನಾಯಕರು ಹಾಗೂ ಕಾರ್ಯಕರ್ತರು ಇದ್ದರು.

> ಜೆಡಿಎಸ್ ಪಕ್ಷದ ಸಾಂಸ್ಕೃತಿಕ ವಿಭಾಗದ ಯಾದಗಿರಿ ಜಿಲ್ಲಾ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ ಮಾಜಿ ಮುಖ್ಯಮಂತ್ರಿಗಳಾದ ಎಚ್. ಡಿ.ಕುಮಾರಸ್ವಾಮಿ, ಕೋರ್ ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ, ಗುರುಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದುಕೂರ ಹಾಗೂ ಸಾಂಸ್ಕೃತಿಕ ವಿಭಾಗದ ರಾಜ್ಯಾಧ್ಯಕ್ಷ ವೀರೇಶ್ ಪ್ರಸಾದ್ (ಗುಬ್ಬಿ ವಿರಣ್ಣ) ಅವರಿಗೆ ತುಂಬು ಹೃದಯದ ಧನ್ಯವಾದಗಳು ಸಲ್ಲಿಸುತ್ತೇನೆ. ಈ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ಮತ್ತು ವರಿಶಿಷ್ಠರ ಪ್ರಕಾರ ನಿರ್ವಸುತ್ತೇನೆ.
> ನೂತನ ಜೆಡಿಎಸ್ ಪಕ್ಷದ ಸಾಂಸ್ಕೃತಿಕ ವಿಭಾಗದ ಜಿಲ್ಲಾಧ್ಯಕ್ಷ ಭೀಮಶಂಕರ್ ಎಂ ಯರಗೋಳ.

# ಬಿಡದಿ-ಹಾರೋಹಳ್ಳಿ ಭೂಸ್ವಾಧೀನ ಪ್ರಕ್ರಿಯೆ ಕೈಬಿಡಲು ಆಗ್ರಹಿಸಿ ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಬಿಡದಿ ಮತ್ತು ಹಾರೋಹಳ್ಳಿ ಹೋಬಳಿಯ ವ್ಯಾಪ್ತಿಯಲ್ಲಿರುವ ಬಡ ರೈತರ ಅತ್ಯಂತ ಫಲವತ್ತಾದ ಕೃಷಿ ಭೂಮಿಯನ್ನು ಬಲವಂತವಾಗಿ ವಶಪಡಿಸಿಕೊಳ್ಳುತ್ತಿರುವ ಹಾಗೂ ಮುಂದಿನ ತಿಂಗಳು ಬೃಹತ್ ಪ್ರಮಾಣದಲ್ಲಿ ಭೂಸ್ವಾಧೀನ ವಿಸ್ತರಿಸಲು ಹೊರಟಿರುವ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ತಕ್ಷಣವೇ ಕೈಬಿಡಬೇಕೆಂದು ಆಗ್ರಹಿಸಿ, ಜೆಡಿಎಸ್ ಜಿಲ್ಲಾಧ್ಯಕ್ಷರಾದ ಸುಭಾಷ್ಚಂದ್ರ ಕಟಕಟಿ ಅವರ ನೇತೃತ್ವದಲ್ಲಿ ಯಾದಗಿರಿ ಜಿಲ್ಲಾ ಜಾತ್ಯತೀತ ಜನತಾದಳದ (ಜೆಡಿಎಸ್) ವತಿಯಿಂದ ಮಾನ್ಯ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು. ರಾಜ್ಯ ಕಾಂಗ್ರೆಸ್ ಸರ್ಕಾರವು ಹೊರಡಿಸಿರುವ ಅಂತಿಮ ಗೆಜೆಟ್ ಅಧಿಸೂಚನೆಯು ಸಂಪೂರ್ಣವಾಗಿ ರೈತ ವಿರೋಧಿಯಾಗಿದ್ದು, ಇದು ಸಾರ್ವಜನಿಕ ಹಿತಾಸಕ್ತಿಯ ಮುಖವಾಡ ಧರಿಸಿದ ಬೃಹತ್ ರಿಯಲ್ ಎಸ್ಟೇಟ್ ದಂಧೆಯಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಮೊದಲ ಹಂತದಲ್ಲಿ ವಶಪಡಿಸಿಕೊಳ್ಳಲು ಹೊರಟಿರುವ 498.34 ಎಕರೆ ಫಲವತ್ತಾದ ಕೃಷಿ ಭೂಮಿಯಿಂದಾಗಿ ಒಟ್ಟು 755 ರೈತ ಕುಟುಂಬಗಳು ಬೀದಿಗೆ ಬೀಳುತ್ತಿದ್ದು, ಇದರಲ್ಲಿ ಬರೋಬ್ಬರಿ 614 ರೈತರು (ಶೇ. 81 ಕ್ಕೂ ಹೆಚ್ಚು) ಕೇವಲ 1 ಎಕ–ರೆಗಿಂತ ಕಡಿಮೆ ಜಮೀನು ಹೊಂದಿರುವ ಅತಿ ಸಣ್ಣ ಕೃಷಿಕರಾಗಿದ್ದಾರೆ. ಇದಲ್ಲದೆ, ಮುಂದಿನ ತಿಂಗಳ ಒಳಗಾಗಿ ಇಡೀ ಬಿಡದಿ ಭಾಗದ ಬರೋಬ್ಬರಿ 7481 ರಿಂದ 9600 ಎಕರೆ ವರೆಗಿನ ಭೂಮಿಯನ್ನು ಬಲವಂತವಾಗಿ ಕಸಿದುಕೊಳ್ಳುವ ಕರಾಳ ಸಂಚು ರೂಪಿಸಲಾಗಿದೆ.

ಈ ಯೋಜನೆಯಿಂದಾಗಿ ಪ್ರತಿ ತಿಂಗಳು ಉತ್ಪಾದನೆಯಾಗುತ್ತಿದ್ದ ಬರೋಬ್ಬರಿ 6 ಲಕ್ಷ ಲೀಟರ್ ಹಾಲು ಸಂಪೂರ್ಣವಾಗಿ ನಿಂತುಹೋಗಲಿದ್ದು, ಹೈನುಗಾರಿಕೆ ಮತ್ತು ಶೇ. 50 ಕ್ಕೂ ಹೆಚ್ಚು ಕುಟುಂಬಗಳು ನಂಬಿಕೊಂಡಿರುವ ರೇಷ್ಮೆ ಕೃಷಿ ಉದ್ಯಮ ಸಂಪೂರ್ಣ ನಾಶವಾಗಲಿದೆ. ರೈತರ ಭೂಮಿಯನ್ನು ಕನಿಷ್ಠ ಬೆಲೆಗೆ ಕಸಿದುಕೊಂಡು ಬರೋಬ್ಬರಿ 33,562 ಕೋಟಿ ರೂಪಾಯಿಗಳ ಬೃಹತ್ ಹಗರಣಕ್ಕೆ ಸರ್ಕಾರ ಮುಂದಾಗಿದ್ದು, ನಿಯಮಗಳ ಪ್ರಕಾರ ನಡೆಸಬೇಕಾದ ಸಾಮಾಜಿಕ ಮತ್ತು ಪರಿಸರ ಪರಿಣಾಮ ಮೌಲ್ಯಮಾಪನ ಪ್ರಕ್ರಿಯೆಗಳನ್ನು ಬೈಪಾಸ್ ಮಾಡಿ, ಸ್ಮಾರ್ಟ್ ಸಿಟಿ ಹೆಸರಿನಲ್ಲಿ 10 ಲಕ್ಷಕ್ಕೂ ಹೆಚ್ಚು ಹಸಿರು ಮರಗಳನ್ನು ಕತ್ತರಿಸಿ ಪರಿಸರ ಸಮತೋಲನವನ್ನು ನಾಶ ಮಾಡಲು ಹೊರಟಿದೆ ಎಂದು ಮನವಿಯಲ್ಲಿ ದೂರಲಾಗಿದೆ. ಈ ಹಿನ್ನೆಲೆಯಲ್ಲಿ, ಬಿಡದಿ ಮತ್ತು ಹಾರೋಹಳ್ಳಿ ಹೋಬಳಿಯ ಕೃಷಿ ಭೂಮಿ ವಶಪಡಿಸಿಕೊಳ್ಳಲು ಹೊರಡಿಸಿರುವ ಕರಾಳ ಅಂತಿಮ ಅಧಿಸೂಚನೆಯನ್ನು ತಕ್ಷಣವೇ ರದ್ದುಗೊಳಿಸಬೇಕು, ಮುಂದಿನ ತಿಂಗಳು ಜಾರಿಗೆ ತರಲು ಆದೇಶಿಸಿರುವ 7,500 ಕ್ಕೂ ಹೆಚ್ಚು ಎಕರೆ ಭೂಸ್ವಾಧೀನ ಪ್ರಕ್ರಿಯೆಯನ್ನು ಆರಂಭದಲ್ಲೇ ಕೈಬಿಡಬೇಕು, ಹೈನುಗಾರಿಕೆ ಹಾಗೂ ರೇಷ್ಮೆ ಕೃಷಿಯನ್ನು ನಂಬಿಕೊಂಡಿರುವ ಬಡ ರೈತ ಕುಟುಂಬಗಳ ಜೀವನೋಪಾಯವನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಲು ಅನುಮತಿ ನೀಡಬೇಕು ಮತ್ತು ಸಾರ್ವಜನಿಕ ಆಸ್ತಿಗಳಾದ ಸಿ.ಎ ನಿವೇಶನಗಳನ್ನು ಬ್ಯಾಂಕುಗಳಲ್ಲಿ ಅಡವಿಟ್ಟು ಸಾಲ ಪಡೆಯುತ್ತಿರುವ ಆರ್ಥಿಕ ದುರ್ನೀತಿಯನ್ನು ತಕ್ಷಣ ನಿಲ್ಲಿಸಬೇಕು ಎಂದು ಜೆಡಿಎಸ್ ಪ್ರಮುಖ ಬೇಡಿಕೆಗಳನ್ನು ಮಂಡಿಸಿದೆ. ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾ ವಕ್ತಾರರಾದ ಮಲ್ಲಣ್ಣಗೌಡ ಕೌಳೂರು, ಪ್ರಮುಖರಾದ ಬಂದಪ್ಪ ಅರಳಿ, ಆನಂದ್ ವಡವಾಟ್, ಮಲ್ಲಿಕಾರ್ಜುನ ಅರುಣಿ, ನರಸಿಂಹರೆಡ್ಡಿ ಚಿಂತಗುಂಟಾ, ತಾಯಪ್ಪ ಬದ್ದೇಪಲ್ಲಿ, ಶರಣಪ್ಪಗೌಡ ಹೊಸಳ್ಳಿ, ಭೀಮರಾಯ ಬಾಚವಾರ, ಭೀಮಲಿಂಗಪ್ಪ, ನಾಗಲಿಂಗಪ್ಪ ಹೊನಗೇರಾ, ಭೀಮಣ್ಣ ಯಂಪಾಡ, ಕಿಶನ್, ಪ್ರಕಾಶ್, ಯಲ್ಲಾಲಿಂಗ ಚಾಮನಹಳ್ಳಿ, ಬಸ್ಸುಸಾಹುಕಾರ್, ಮಲ್ಲಣ್ಣಗೌಡ ಪಸ್ಪುಲ್ ಸೇರಿದಂತೆ ಪಕ್ಷದ ಇನ್ನಿತರ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮಾರುತಿ ಗಂಜಗಿರಿ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಸೇಡಂ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಚಿಂಚೋಳಿ ತಾಲೂಕಿನ ಗ್ರಾಮಗಳ ಪ್ರಗತಿ ಪರಿಶೀಲನಾ ಸಭೆಗೆ ಆಗಮಿಸಿದ್ದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ ಪಾಟೀಲ ಅವರಿಗೆ ಯುನಿಟಿ ಆಫ್ ಮೂಲನಿವಾಸಿ ಬಹುಜನ ಸಂಘಟನೆಯ ರಾಜ್ಯ ಮುಖಂಡ ಮಾರುತಿ ಗಂಜಗಿರಿ ನೇತೃತ್ವದಲ್ಲಿ ವಿವಿಧ ಜನಪರ ಹಾಗೂ ಅಭಿವೃದ್ಧಿ ಸಂಬಂಧಿತ ಬೇಡಿಕೆಗಳ ಮನವಿ ಸಲ್ಲಿಸಲಾಯಿತು.

ಸುಲೇಪೇಟ ಗ್ರಾಮದಲ್ಲಿ ಶಿಥಿಲಾವಸ್ಥೆಯಲ್ಲಿರುವ ಹಳೆಯ ಸಾರ್ವಜನಿಕ ಆಸ್ಪತ್ರೆ ಕಟ್ಟಡದ ಸ್ಥಳದಲ್ಲಿ ಗ್ರಾಮ ಪಂಚಾಯಿತಿ ನೂತನ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಅಲ್ಲದೆ, ಸುಲೇಪೇಟ ಜೆಸ್ಕಾಂ ವ್ಯಾಪ್ತಿಯ ಗ್ರಾಮಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸಿ ರೈತರು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವಂತೆ ಆಗ್ರಹಿಸಲಾಗಿದೆ.

ಚಿಂಚೋಳಿ ಸಾರ್ವಜನಿಕ ಆಸ್ಪತ್ರೆ, ಸುಲೇಪೇಟ ಹಾಗೂ ಗಡಿಕೇಶ್ವಾರ ಸಮುದಾಯ ಆರೋಗ್ಯ ಕೇಂದ್ರಗಳು, ನಿಡಗುಂದ ಮತ್ತು ರುದ್ನೂರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳ ಕೊರತೆ ಹಾಗೂ ವೈದ್ಯರ ಅಭಾವದಿಂದ ರೋಗಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಹೀಗಾಗಿ ಅಗತ್ಯ ಔಷಧಿ ಪೂರೈಕೆ, ಖಾಯಂ ವೈದ್ಯರು ಹಾಗೂ ಸಿಬ್ಬಂದಿ ನೇಮಕ ಮಾಡಿ ಆರೋಗ್ಯ ಸೇವೆ ಸುಧಾರಿಸುವಂತೆ ಮನವಿ ಮಾಡಲಾಗಿದೆ.

ಸಿರೋಳ್ಳಿ ಗ್ರಾಮ ಪಂಚಾಯಿತಿ ಕೇಂದ್ರದಲ್ಲಿ ಸರ್ಕಾರಿ ಪ್ರೌಢಶಾಲೆ, ಪಂಚಪೂರ ಗ್ರಾಮಗಳಲ್ಲಿ 110 ಕೆವಿ ವಿದ್ಯುತ್ ಉಪಕೇಂದ್ರ ಹಾಗೂ ವೆಂಕಟಾಪೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರೌಢ ವಸತಿ ಶಾಲೆ ಮಂಜೂರು ಮಾಡುವಂತೆ ಒತ್ತಾಯಿಸಲಾಗಿದೆ.ಗಡಿಕೇಶ್ವಾರ, ರಾಯಕೋಡ್ ಹಾಗೂ ಸುಲೇಪೇಟ ಸರ್ಕಾರಿ ಬಾಲಕರ ವಸತಿ ನಿಲಯಗಳಲ್ಲಿ ಮೂಲಸೌಕರ್ಯ ಸಮಸ್ಯೆಗಳನ್ನು ಪರಿಹರಿಸಿ, ಮೇಲ್ವಿಚಾರಕರ ನಿಯಮಿತ ಹಾಜರಾತಿ ಖಚಿತಪಡಿಸಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ. ಗರಗಪಳ್ಳಿ ಗ್ರಾಮ ಪಂಚಾಯಿತಿ ಕೇಂದ್ರದಲ್ಲಿ ಬಸ್ ನಿಲ್ದಾಣ ನಿರ್ಮಾಣ ಹಾಗೂ ಬೇಡಕಪಳ್ಳಿ ಗ್ರಾಮದ ಹೊಸ ಬಡಾವಣೆ ನಿವಾಸಿಗಳಿಗೆ ಹಕ್ಕುಪತ್ರ ವಿತರಿಸುವಂತೆ ಆಗ್ರಹಿಸಲಾಗಿದೆ.

ಸುಲೇಪೇಟ ಗ್ರಾಮದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಯರ ವಸತಿ ನಿಲಯ, ಡಿಪ್ಲೊಮಾ ಕಾಲೇಜು ಹಾಗೂ ವೃತ್ತಿ ಆಧಾರಿತ ಕೌಶಲ್ಯ ತರಬೇತಿ ಕೇಂದ್ರ ಸ್ಥಾಪನೆಗೆ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಲಾಗಿದೆ. ಅಲ್ಲದೆ, ಸರ್ಕಾರಿ ಕನ್ಯಾ ಪ್ರೌಢಶಾಲೆ, ಮೈನಾರಿಟಿ ವಸತಿ ನಿಲಯ, ಕಂದಾಯ ಕಚೇರಿ ಹಾಗೂ ಮುಸ್ಲಿಂ ಸಮುದಾಯದ ಸ್ಮಶಾನಕ್ಕೆ ಸಂಪರ್ಕಿಸುವ ರಸ್ತೆಯಲ್ಲಿ ಮಳೆ ನೀರು ನಿಲ್ಲುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಒತ್ತಾಯಿಸಲಾಗಿದೆ.

ನಿಡಗುಂದ ಹಾಗೂ ಕುಪನೂರಿನ ಸರ್ಕಾರಿ ಉರ್ದು ಶಾಲೆಗಳಲ್ಲಿ ಶೌಚಾಲಯ ನಿರ್ಮಾಣ, ಸರ್ಕಾರಿ ಶಾಲೆಗಳಿಗೆ ಖಾಯಂ ಶಿಕ್ಷಕರ ನೇಮಕ, ಗಡಿಕೇಶ್ವಾರ–ಭೂತಪೂರ ರಸ್ತೆ ದುರಸ್ತಿ ಹಾಗೂ ಬೇಡಕಪಳ್ಳಿ ಗ್ರಾಮದ ಹೊಸ ಬಡಾವಣೆಯಲ್ಲಿ ಮಳೆ ನೀರು ಮನೆಗಳಿಗೆ ನುಗ್ಗುವ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗಿದೆ.

ಇದೇ ವೇಳೆ, ಸುಲೇಪೇಟ ಬಸ್ ನಿಲ್ದಾಣದಲ್ಲಿ ಮಳೆಗಾಲದಲ್ಲಿ ನೀರು ಸೋರಿಕೆಯಿಂದ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳು ಅನುಭವಿಸುತ್ತಿರುವ ತೊಂದರೆಗಳನ್ನು ನಿವಾರಿಸುವಂತೆ ಹಾಗೂ ಕುಪನೂರಿನಿಂದ ಪೆನ್ನಪಲ್ಲಿ ಮಾರ್ಗದ ಶಿವಶರಣ ಹಿರೇನ್ ಅವರ ಹೊಲದವರೆಗೆ ರಸ್ತೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮೋಹನ ಐನಾಪೂರ, ಮಹೇಶ್ ಕುಸರಂಪಳ್ಳಿ, ಎಂ.ಡಿ. ಹಫೀಜ್, ಸರ್ದಾರ ಶಾಮರಾವ ರೆಡ್ಡಿ, ಪ್ರಕಾಶ ಭಕ್ತಂಪಳ್ಳಿ, ರಸುಲ್ ಕೋಹಿರ್, ಗುಂಡಪ್ಪ ಮನ್ನಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಳೆಗಾಗಿ ಗ್ರಾಮದೇವತೆ ಮೊರೆಹೋದ ರೈತರು



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜೂ 19: ಮಳೆ ಹಾಗೂ ಉತ್ತಮ ಬೆಳೆಗಾಗಿ ರೈತರು ಗ್ರಾಮದೇವತೆ ಗಜಲಮ್ಮ ದೇವಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು.ಪಟ್ಟಣದ ಕಾಕಲವಾರ ಬೇಸ್ ಆಂಜನೇಯ ದೇವಸ್ಥಾನದಿಂದ ಆರಂಭವಾದ ಕುಂಭೋತ್ಸವವು ಚೆಪೆಟ್ಲಾ ರಸ್ತೆಯಲ್ಲಿರುವ ಗಜಲಮ್ಮ ದೇವಸ್ಥಾನದವರೆಗೆ ಭಕ್ತಿಭಾವದಿಂದ ನಡೆಯಿತು.

ಡೊಳ್ಳು ಭಾಜ ಭಜಂತ್ರಿ ಹಲಗೆಯೊಂದಿಗೆ ಮಹಿಳೆಯರು ಕುಂಭ ಹೊತ್ತು ಪುರುಷರು ಹಾಗೂ ಮಕ್ಕಳು ದೇವಿಯ ದರ್ಶನ ಪಡೆದು ಮಳೆ ಹಾಗೂ ಸಮೃದ್ಧ ಬೆಳೆಗೆ ಪ್ರಾರ್ಥಿಸಿದರು.

ಪ್ರತಿ ವರ್ಷ ಐದು ವಾರಗಳ ಕಾಲ ಈ ಸಂಪ್ರದಾಯವನ್ನು ನಡೆಸಲಾಗುತ್ತಿದ್ದು, ನೂರಾರು ವರ್ಷಗಳಿಂದ ರೈತಾಪಿ ವರ್ಗ ಈ ಆಚರಣೆಯನ್ನು ಪಾಲಿಸಿಕೊಂಡು ಬರುತ್ತಿದೆ. ಗ್ರಾಮದೇವಿಯ ಕೃಪೆಯಿಂದ ಉತ್ತಮ ಮಳೆ ಹಾಗೂ ಉತ್ತಮ ಬೆಳೆ ಲಭಿಸುತ್ತದೆ ಎಂಬುದು ರೈತರ ಅಚಲ ನಂಬಿಕೆಯಾಗಿದೆ.

# ಕುಡಿಯುವ ನೀರಿನ ಯೋಜನೆ ಕಾಮಗಾರಿ ವಿಳಂಬವಾದರೆ ಕ್ರಮ: ಡಾ.ಯತೀಂದ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಜೂ19 :ನಗರ ಪ್ರದೇಶಗಳ ಕುಡಿಯುವ ನೀರಿನ ಕಾಮಗಾರಿಗಳು ನಿಗದಿತ ಸಮಯಕ್ಕೆ ಪೂರ್ಣಗೊಳಿಸದಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದು ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಶುಕ್ರವಾರ ತಿಳಿಸಿದರು.

ಬೆಳಗಾವಿ, ಕಲಬುರಗಿ ಹಾಗೂ ಹುಬ್ಬಳ್ಳಿ–ಧಾರವಾಡದಲ್ಲಿ ಕೆಯುಐಡಿಎಫ್‌ಸಿ ಮೂಲಕ ವಿಶ್ವಬ್ಯಾಂಕ್ ಪ್ರಾಯೋಜಿತ ಕುಡಿಯುವ ನೀರಿನ ಬೃಹತ್ ಕಾಮಗಾರಿಗಳನ್ನು ಎಲ್ ಅಂಡ್ ಟಿ ಅನುಷ್ಠಾನಗೊಳಿಸುತ್ತಿದ್ದು, ಕಾಮಗಾರಿಗಳು ನಿಧಾನವಾಗಿರುವ ಹಿನ್ನೆಲೆಯಲ್ಲಿ ಎಲ್ ಅಂಡ್ ಟಿ ಅಧಿಕಾರಿಗಳಿಗೆ ನಿಗದಿತ ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ತಾಕೀತು ಮಾಡಿದರು.

ಎಲ್ ಅಂಡ್ ಟಿ ಯೋಜನಾ ಮುಖ್ಯಸ್ಥರಾದ ವೆಂಕಟೇಶನ್ ಹಾಗೂ ಇತರೆ ಅಧಿಕಾರಿಗಳಿದ್ದರು.

# ಸಿದ್ದರಾಮೇಶ್ವರ ಕಾಲೇಜಿಗೆ ಬೀದರ್ ವಿವಿ ಕುಲಪತಿಗಳ ಭೇಟಿ: ಸುಗಮ ಪರೀಕ್ಷಾ ನಿರ್ವಹಣೆಗೆ ಶ್ಲಾಘನೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಪಟ್ಟಣದ ಪ್ರತಿಷ್ಠಿತ ಶ್ರೀ ಸಿದ್ಧರಾಮೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಶುಕ್ರವಾರ ರಂದು ನಡೆ–ಯುತ್ತಿದ್ದ ಬೀದರ್ ವಿಶ್ವವಿದ್ಯಾಲಯದ ಪದವಿ ಪರೀಕ್ಷಾ ಕೇಂದ್ರಕ್ಕೆ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ ಪ್ರೊ. ಬಿ. ಎಸ್. ಬಿರಾದಾರ ಹಾಗೂ ಕುಲಸಚಿವರಾದ ಶ್ರೀ ಪರಮೇಶ್ವರ ನಾಯಕ ಮತ್ತು ಸಿಂಡಿಕೇಟ್ ಸದಸ್ಯರಾದ ಶ್ರೀ ಶಶಿಲಿಂಗ ಶಿವಾಣಿ ಅವರು ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಮಹಾವಿದ್ಯಾಲಯದಲ್ಲಿ ಪರೀಕ್ಷೆಗಳು ಅತ್ಯಂತ ವ್ಯವಸ್ಥಿತವಾಗಿ ಮತ್ತು ಪಾರದರ್ಶಕವಾಗಿ ನಡೆಯುತ್ತಿರುವುದನ್ನು ಕಂಡು ಕುಲಪತಿಗಳು ಹಾಗೂ ಅಧಿಕಾರಿಗಳ ತಂಡವು ಪ್ರಸನ್ನತೆ ವ್ಯಕ್ತಪಡಿಸಿತು. ಇದೇ ರೀತಿಯ ಶಿಸ್ತುಬದ್ಧ ವಾತಾವರಣವನ್ನು ಮುಂದಿನ ಎಲ್ಲಾ ಪರೀಕ್ಷೆಗಳಲ್ಲೂ ಮುಂದುವರಿಸಿಕೊಂಡು ಹೋಗುವಂತೆ ಕಾಲೇಜಿನ ಪ್ರಾಶುಪಾಲರಿಗೆ ಹಾಗೂ ಸಿಬ್ಬಂದಿ ವರ್ಗಕ್ಕೆ ಅವರು ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ನೀಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಕುಲಪತಿಗಳು, "ಬೀದರ್ ವಿಶ್ವವಿದ್ಯಾಲಯದ ಯಾವುದೇ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಮಯದಲ್ಲಿ ಯಾವುದೇ ರೀತಿಯ ತೊಂದರೆ ಅಥವಾ ಸಮಸ್ಯೆಗಳು ಎದುರಾಗದಂತೆ ನೋಡಿಕೊಳ್ಳುವುದು ನಮ್ಮ ಆದ್ಯತೆಯಾಗಿದೆ. ಪರೀಕ್ಷೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಗೆ ಯಾವುದೇ ದೂರು ಅಥವಾ ಸಮಸ್ಯೆಗಳಿದ್ದಲ್ಲಿ ತಕ್ಷಣವೇ ನಮ್ಮ ವಿಶ್ವವಿದ್ಯಾಲಯದ ಸಿಬ್ಬಂದಿಯನ್ನು ಅಥವಾ ಅಧಿಕಾರಿಗಳನ್ನು ಮುಕ್ತವಾಗಿ ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬಹುದು," ಎಂದು ಭರವಸೆ ನೀಡಿದರು. ಅಲ್ಲದೆ, ವಿದ್ಯಾರ್ಥಿಗಳಿಗೆ ಪರೀಕ್ಷಾ ಫಲಿತಾಂಶ ಹಾಗೂ ಅಂಕಪಟ್ಟಿಗಳನ್ನು ಯಾವುದೇ ವಿಳಂಬವಿಲ್ಲದೆ ಸಕಾಲದಲ್ಲಿ ತಲುಪಿಸಲು ವಿಶ್ವವಿದ್ಯಾಲಯವು ಈಗಾಗಲೇ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದು ಸ್ಪಷ್ಟಪಡಿಸಿದರು.ಈ ಭೇಟಿಯ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ವಿಶ್ವನಾಥ ಕಿವಡೆ ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಪಿ.ಎಂ. ಕಿಸಾನ್ ಯೋಜನೆ: ಇಂದು ಪ್ರಧಾನಿಗಳಿಂದ 23ನೇ ಕಂತಿನ ಹಣ ಬಿಡುಗಡೆ; ಕರ್ನಾಟಕದ 41.54 ಲಕ್ಷ ರೈತರಿಗೆ ನೆರವು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಜೂ19:ಕೇಂದ್ರಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ (ಪಿಎಂ–ಕಿಸಾನ್) ಯೋಜನೆಯ 23ನೇ ಕಂತಿನ ಆರ್ಥಿಕ ನೆರವನ್ನು ಬಿಡುಗಡೆ ಮಾಡಲು ದಿನಾಂಕ ನಿಗದಿಯಾಗಿದೆ. ಮಾನ್ಯ ಪ್ರಧಾನ ಮಂತ್ರಿಗಳು 2026 ನೇ ಜೂನ್ 20 ರಂದು ಪಶ್ಚಿಮ ಬಂಗಾಳ ರಾಜ್ಯದ ತಾರಕೇಶ್ವರ್, ಹೂಗ್ಲಿಯಲ್ಲಿ ಸಂಜೆ 4:00 ಗಂಟೆಗೆ ಆಯೋಜಿಸಲಾಗಿರುವ ಕಾರ್ಯಕ್ರಮದಲ್ಲಿ ದೇಶದ ರೈತರ ಖಾತೆಗಳಿಗೆ ಅಧಿಕೃತವಾಗಿ ಹಣ ವರ್ಗಾವಣೆ ಮಾಡಲಿದ್ದಾರೆ. ಈ ವಿಶೇಷ ದಿನವನ್ನು "ಪಿ.ಎಂ. ಕಿಸಾನ್ ಉತ್ಸವ ದಿವಸ್" ಎಂದು ಆಚರಿಸಲಾಗುತ್ತಿದೆ.

ಕರ್ನಾಟಕದ ರೈತರಿಗೆ ರೂ. 830.832 ಕೋಟಿ ಅನುದಾನ: ಈ ಯೋಜನೆಯಡಿ ಕರ್ನಾಟಕ ರಾಜ್ಯದ ಒಟ್ಟು 41,54,160 ಫಲಾನುಭವಿ ರೈತರಿಗೆ ಕೇಂದ್ರ ಸರ್ಕಾರದಿಂದ ಒಟ್ಟಾರೆ ರೂ. 830.832 ಕೋಟಿಗಳ ಆರ್ಥಿಕ ನೆರವು ನೇರ ನಗದು ವರ್ಗಾವಣೆ (ಆಃಖಿ) ಮೂಲಕ ಜಮೆಯಾಗಲಿದೆ.ಯೋಜನೆಯ ಹಿನ್ನೆಲೆ ಮತ್ತು ಪ್ರಯೋಜನಗಳು:ವಾರ್ಷಿಕ ನೆರವು: ಅರ್ಹ ರೈತ ಕುಟುಂಬಗಳಿಗೆ ಕೃಷಿ ಚಟುವಟಿಕೆಗಳ ನಿರ್ವಹಣೆ ಹಾಗೂ ಉತ್ತಮ ಇಳುವರಿ ಪಡೆಯಲು ನೆರವಾಗುವಂತೆ ವಾರ್ಷಿಕವಾಗಿ ಒಟ್ಟು ರೂ. 6,000/– ಗಳ ಆರ್ಥಿಕ ಸಹಾಯ ನೀಡಲಾಗುತ್ತದೆ.ಕಂತುಗಳ ವಿವರ: ಈ ಮೊತ್ತವನ್ನು ತಲಾ ರೂ. 2,000/– ಗಳಂತೆ ಮೂರು ಸಮಾನ ಕಂತುಗಳಲ್ಲಿ ಪ್ರತಿ ನಾಲ್ಕು ತಿಂಗಳಿಗೊಮ್ಮೆ ರೈತರ ಖಾತೆಗೆ ಜಮೆ ಮಾಡಲಾಗುತ್ತದೆ.ಅರ್ಹತೆ: ಕರ್ನಾಟಕದಲ್ಲಿ ಫೆಬ್ರವರಿ 2019 ರಿಂದ ಈ ಯೋಜನೆ ಜಾರಿಯಲ್ಲಿದ್ದು, ದಿನಾಂಕ: 01.02.2019 ರ ಅನ್ವಯ ಸಾಗುವಳಿ ಭೂಮಿ ಹೊಂದಿರುವ ಅರ್ಹ ರೈತ ಕುಟುಂಬಗಳು (ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ಇದರ ಪ್ರಯೋಜನ ಪಡೆಯುತ್ತಿದ್ದಾರೆ.ಪ್ರಧಾನ ಮಂತ್ರಿಗಳ ಈ ನೇರ ನಗದು ವರ್ಗಾವಣೆ ಪ್ರಕ್ರಿಯೆಯಿಂದಾಗಿ ರಾಜ್ಯದ ಲಕ್ಷಾಂತರ ರೈತ ಕುಟುಂಬಗಳ ಕೃಷಿ ವೆಚ್ಚಕ್ಕೆ ಸಕಾಲದಲ್ಲಿ ಆರ್ಥಿಕ ಆಸರೆ ಸಿಕ್ಕಂತಾಗಲಿದೆ.

# ಗ್ಯಾರಂಟಿ ಪರಿಷ್ಕರಣೆಗೆ ಮುಂದಾಗಿರುವುದು ಒಳ್ಳೆಯ ನಿರ್ಧಾರ :ರಂಭಾಪುರಿ ಶ್ರೀ

• ಮಲ್ಲಮ್ಮ ನುಡಿ ವಾರ್ತೆಕನಕಗಿರಿ



ಗ್ಯಾರಂಟಿ ಯೋಜನೆಗಳು ಚುನಾವಣಾ ಪೂರ್ವದಲ್ಲಿ ಎಲ್ಲರ ಗಮನ ಸೆಳೆದಿದ್ದವು. ಅದರ ಪರಿಣಾಮವಾಗಿ ಕಾಂಗ್ರೆಸ್ ಪಕ್ಷದಸರ್ಕಾರ ಪ್ರಚಂಡ ಬಹುಮತದಿಂದ ಗೆದ್ದಿತು. ಯೋಜನೆಗಳ ಅನುಷ್ಠಾನ ಕೈಕೊಂಡಾಗ ರಾಜ್ಯದ ಬೊಕ್ಕಸಕ್ಕೆ ಬಹಳಷ್ಟು ಪೆಟ್ಟುಬಿತ್ತು.ಇದೀಗ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಿಸುವ ನಿರ್ಧಾರ ಕೈಗೊಂಡಿರುವುದು ಉತ್ತಮವಾದ ಬೆಳವಣಿಗೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.
ಅವರು ಶುಕ್ರವಾರ ತಮ್ಮನ್ನು ಭೇಟಿಯಾದ ಪತ್ರಿಕಾ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದರು. ಗ್ಯಾರಂಟಿ ಯೋಜನೆಗಳಿಗೆ ಹಣ ಒದಗಿಸಲು ಬೇರೆ ಬೇರೆ ಮೂಲದಿಂದ ಜನರಿಂದ ಹೆಚ್ಚಿನ ತೆರಿಗೆ ಹಾಕಿ ಜನ ಸಾಮಾನ್ಯರಿಗೆ ಬಹಳಷ್ಟು ತೊಂದರೆಯಾಗಿರುವುದು ಎಲ್ಲರಿಗೂ ತಿಳಿದ ಸಂಗತಿ. ಗ್ಯಾರಂಟಿ ಯೋಜನೆಯಿಂದ ಕೆಲವರಿಗೆ ಒಳ್ಳೆಯದಾದರೂ ಬಹಳಷ್ಟು ಜನರಿಗೆ ತೊಂದರೆಯಾಗಿದ್ದು ಸತ್ಯ. ಮೃತ ವ್ಯಕ್ತಿಗಳಿಗೂ ಹಣ ಹೋಗುತ್ತಿರುವುದು ಸೇರಿದಂತೆ ಹಲವಾರು ವಿಷಯಗಳಲ್ಲಿ ಹಣ ಪೋಲಾಗುತ್ತಿರುವುದನ್ನು ತಪ್ಪಿಸಲು ಇದೀಗ ಗ್ಯಾರಂಟಿ ಪರಿಷ್ಕರಣೆಗೆ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಮುಂದಾಗಿರುವುದು ಒಳ್ಳೆಯ ನಿರ್ಧಾರವಾಗಿದೆ. ಅರ್ಹರಿಗೆ ಮಾತ್ರ ಇದರ ಲಾಭ ತಟ್ಟಬೇಕೇ ಹೊರತು ಅನರ್ಹರಿಗಲ್ಲ. ರಾಜ್ಯದ ಅಭಿವೃದ್ಧಿ ಯೋಜನೆಗಳಿಗೆ ಹೆಚ್ಚಿನ ಹಣ ತೊಡಗಿಸಿ ಕಾರ್ಯ ಪ್ರವೃತ್ತರಾಗುವುದು ಒಳಿತು. ರಾಜ್ಯದಲ್ಲಿ ಮಾಡಬೇಕಾದ ಸಾಕಷ್ಟು ಕೆಲಸಗಳಿರುವಾಗ ಜಾತಿ–ಧರ್ಮಗಳ ಸಂಘರ್ಷಕ್ಕೆ ಅವಕಾಶ ಕೊಡದೇ ಎಲ್ಲಾ ಸಮುದಾಯಗಳ ಹಿತ ಕಾಪಾಡುವ ನಿಟ್ಟಿನಲ್ಲಿ ಮುಖ್ಯ ಮಂತ್ರಿಗಳು ಗಟ್ಟಿ ನಿರ್ಧಾರ ತೆಗೆದುಕೊಳ್ಳುವರೆಂಬ ಆತ್ಮ ವಿಶ್ವಾಸ ತಮಗಿದೆ ಎಂದರು.

# ಬೀಜ,ಗೊಬ್ಬರ ಮಾರಾಟ ಮಳಿಗೆಗಳಿಗೆ ಸಹಾಯಕ ಕೃಷಿ ಅಧಿಕಾರಿ ಶ್ರೀಶೈಲ್ ಬೋವಿ ಭೇಟಿ: ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಇಲ್ಲಿನ ಬೀಜ, ರಸಗೊಬ್ಬರ ಅಂಗಡಿಗಳಿಗೆ ಸಹಾಯಕ ಕೃಷಿ ಅಧಿಕಾರಿ ಶ್ರೀಶೈಲ್ ಬೋವಿ ನೇತೃತ್ವದ ತಂಡ ಡಿಢಿರ ಭೇಟಿನೀಡಿ ಪರಿಶೀಲಿಸಿದರು.ಪಟ್ಟಣದಲ್ಲಿ ವಿವಿಧ ಗೊಬ್ಬರ ಮತ್ತು ಬೀಜ ಮಾರಾಟ ಮಾಡುವ ಅಂಗಡಿಗಳ ಪರವಾನಿಗೆ ಪತ್ರ ಮತ್ತು ನವಿಕರಣ ಮತ್ತು ಸೇರಿದಂತೆ ಹಲವು ಬೀಜ ಮತ್ತು ಗೊಬ್ಬರ ವನ್ನು ರೈತರಿಗೆ ಮಾರಿದ ಬಗ್ಗೆ ಮತ್ತು ಅಂಗಡಿಯಲ್ಲಿ ಸಂಗ್ರಹ ಇರುವ ಬೀಜ, ಗೊಬ್ಬರ ದಾಖಲೆಗಳನ್ನು ಪರಿಶೀಲಿಸಿದರು. ಸರಿಯಾದ ದಾಖಲಾತಿ ಹೊಂದಿರದ ಅಂಗಡಿಗಳಿಗೆ ನೋಟೀಸ್ ನೀಡಿ ಕೆಲವೆ ದಿನಗಳಲ್ಲಿ ಎಲ್ಲ ದಾಖಲಾತಿಗಳನ್ನು ಒದಗಿಸುವಂತೆ ಕಟ್ಟುನಿಟ್ಟಿನ ಆದೇಶ ನೀಡಿಮಾಡಿದರು. ಪರವಾನಿಗೆ ಇಲ್ಲದ ಗೊಬ್ಬರ ಬೀಜ ಹಾಗೂ ಕಿಟನಶಕಗಳನ್ನು ವ್ಯಪಾರ ಮಾಡದಂತೆ ಅಂಗಡಿಗಳಿಗೆ ತಾಕಿತು ಮಾಡಿದ ಅವರು ಹಾಗೊಂದು ವೇಳೆ ಪರವಾನಿಗೆ ರಹಿತ ಮಾರಾಟ ಕಂಡುಬಂದರೆ ಅಂತವರ ವಿರುದ್ಧ ಕ್ರಿಮಿನಲ್ ಮೊಕದಮ್ಮೆ ದಾಖಲಿಸುವಂತೆ ಸ್ಥಳದಲ್ಲಿದ್ದ ಸಿಬ್ಬಂದಿಗಳಿಗೆ ಸೂಚಿಸಿದರು. ಗೊಬ್ಬರದ ಕೃತಕ ಅಭಾವ ಸೃಷ್ಟಿ ಹಾಗೂ ಹೆಚ್ಚಿನ ಧಾರಕ್ಕೆ ಮಾರಾಟ ಮಾಡದೇ ರೈತರಿಗೆ ಸರಿಯಾದ ತಿಳುವಳಿಕೆ ನೀಡಿ ಸಮಪ್ರಮಾಣದಲ್ಲಿ ರೈತರಿಗೆ ಗೊಬ್ಬರ ವಿತರಿಸುವಂತೆ ಹೇಳಿದ ಅವರು ಕಡ್ಡಾಯವಾಗಿ ಎಫ್ ಐ ಡಿ ನಂಬರ್ ಮೂಲಕವೇ ಯೂರಿಯಾ ಮತ್ತು ಡಿ ಎ ಪಿ ಗೊಬ್ಬರ ವಿತರಿಸುವಂತೆ ತಾಕೀತು ಮಾಡಿದರು. ಸಹಾಯಕ ಕೃಷಿ ಅಧಿಕಾರಿ ಶ್ರೀಶೈಲ್ ಬೋವಿ ಮತ್ತು ಅಮರೇಶ ಮತ್ತು ಕೃಷಿ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಇಂದು ಮಾಹಿತಿ ಹಕ್ಕು ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 18 : ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮದಲ್ಲಿ ರಾಯಚೂರು ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಜೂನ್ 20ರ ಬೆಳಿಗ್ಗೆ 10ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಜರಾಗುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್ ಅವರು ಕೋರಿದ್ದಾರೆ.ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟ ಸಿಂಗ್ ಹಾಗೂ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರುಗಳಾದ ರಾಮನ್ ಕೆ. ಮತ್ತು ಡಾ.ರಿಚರ್ಡ್ ವಿನ್ಸೆಂಟ್ ಡೊಸೋಜ ಅವರು ಜೂನ್.20ರ ಶನಿವಾರ ದಂದು ರಾಯಚೂರು ಜಿಲ್ಲೆಗೆ ಆಗಮಿಸಿ, ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮ ನಡೆಸಲಿದ್ದಾರೆ.ಈ ಕಾರ್ಯಾಗಾರದಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ), ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು ಹಾಗೂ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಕಡ್ಡಾಯವಾಗಿ ನಿಗದಿತ ಸಮಯಕ್ಕೆ ಕಾರ್ಯಾಗಾರದಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ತಂಬಾಕು ರಹಿತ ದಿನಾಚರಣೆ




• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ತಾಲೂಕಿನ ಸಾರ್ವಜನಿಕ ಆಸ್ಪತ್ರೆ ಎನ್ ಸಿ ಡಿ ವಿಭಾಗದಿಂದ , ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು ವಿಶೇಷವಾಗಿ ಆಟೋ ಚಾಲಕರನ್ನು ಆರೋಗ್ಯ ತಪಾಸಣೆ ಮಾಡಿ ಅವರಿಗೆ ಜಾಗೃತಿ ಮೂಡಿಸುವ ಮುಖೇನ ಆಚರಣೆ ಮಾಡಲಾಯಿತು. ತಾ ಸಾ ಆಸ್ಪತ್ರೆ ಲಿಂಗಸೂರು ಮುಖ್ಯ ಆಡಳಿತ ವೈದ್ಯಾಧಿಕಾರಿಗಳು ಡಾಕ್ಟರ ರುದ್ರಗೌಡ ಪೊಲೀಸ್ ಪಾಟೀಲ್ ಅಧ್ಯಕ್ಷತೆಯಲ್ಲಿ , ಡಾಕ್ಟರ ಪ್ರಗತಿ ಎನ್ ಸಿ ಡಿ ವೈದ್ಯಾಧಿಕಾರಿಗಳು, ಎನ್ ಸಿ ಡಿ ತಂಡದ ಚಂದ್ರಕಲಾ, ನೀಲಾಂಬಿಕೆ ಹಾಗೂ ಡಾಕ್ಟರ್ ರುದ್ರಮುನಿ ವೈದ್ಯಾಧಿಕಾರಿಗಳು ಏ ಆರ್ ಟಿ ವಿಭಾಗ ತಾ ಸಾ ಆಸ್ಪತ್ರೆ ಲಿಂಗಸೂರು ಹಾಗೂ ನರ್ಸಿಂಗ್ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಪ್ರಾರಂಭಿಕ ಹಂತವಾಗಿ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು ಡಾಕ್ಟರ್ ರುದ್ರಗೌಡ ಪೊಲೀಸ್ ಪಾಟೀಲ್ರವರು ತಂಬಾಕಿನಿಂದ ಹಾಗೂ ಇತರೆ ದುಶ್ಚಟಗಳಿಂದ ದೂರ ಇರುವಲ್ಲಿ ಅರೋಗ್ಯ ಸುಧಾರಣೆ ಸಾಧ್ಯ ಎಂದರು. ಡಾಕ್ಟರ್ ಪ್ರಗತಿ ಹಾಗೂ ಎನ್ ಸಿ ಡಿ ವಿಭಾಗ ಸಿಬ್ಬಂದಿ ವೃಂದ 1. ಧೂಮಪಾನ ಬಿಡಿ ಆರೋಗ್ಯ ಪಡಿ 2. ಧೂಮಪಾನ ನಿಲ್ಲಿಸಿ ಜೀವನ ರಕ್ಷಿಸಿ

3. ಧಮ್ ಇದ್ರೆ ಧಮ್ ಬಿಡಿ ಹೀಗೆ ಧ್ಯೇಯ ವಾಕ್ಯಗಳನ್ನು ಸಾಕಾರ ಗೊಳಿಸಿದರು ಹಾಗೂ ಅಧಿಕ ದುಶ್ಚಟಗಳಿಂದಾಗುವ ಆಗು ಹೋಗುಗಳ ಬಗ್ಗೆ ಮಾಹಿತಿ ನೀಡಿದರು ಇವುಗಳಲ್ಲಿ ಎಲ್ಲಾ ಅಂಗಗಳನ್ನು ಒಳಗೊಂಡಂತೆ ಕ್ಯಾನ್ಸರ್ ಬಾಧೆ, ಯುವ ವಯಸ್ಸಿನಲ್ಲಿಯೇ ಮುಪ್ಪು ,ಇತರೆ ದೈಹಿಕ ತೊಂದರೆಗಳು ಹೆಚ್ಚಾಗುತ್ತದೆ ಎಂದರು ಹಾಗೂ ಜೀವನ ಶೈಲಿಯ ಕುರಿತಾಗಿ ಅವಶ್ಯ ಬದಲಾವಣೆಗಳನ್ನು ಮಾಡಿಕೊಳ್ಳಲು ಸಲಹೆ ನೀಡಿದರು. ಡಾಕ್ಟರ್ ರುದ್ರಮುನಿ ವೈದ್ಯಾಧಿಕಾರಿಗಳು ಏ ಆರ್ ಟಿ ವಿಭಾಗ ದುಶ್ಚಟಗಳ ಮೇಲೆ ನಿಯಂತ್ರಿಸಲು ಇರುವ ಮಾರ್ಗೋಪಾಯಗಳನ್ನು ಹಂತ ಹಂತವಾಗಿ ಅಳವಡಿಸಿಕೊಂಡು ಹಾಗೂ ದೈನಂದಿನ ಜೀವನದಲ್ಲಿ ಚಟುವಟಿಕೆಯನ್ನು ಮತ್ತು ಆಹಾರ ಪದ್ಧತಿ ಬದಲಾವಣೆ ಇಟ್ಟುಕೊಂಡು ಔಷಧಿ ಪಡೆಯಿರಿ ಜೊತೆಗೆ ಆರೋಗ್ಯವನ್ನು ಹತೋಟಿಯಲ್ಲಿ ಇಟ್ಟುಕೊಳ್ಳಲು ನಿಯಮಿತ ಅವಧಿಯಲ್ಲಿ ಸೂಕ್ತ ಪರೀಕ್ಷೆ ಮಾಡಿಸಿಕೊಳ್ಳಲು ತಾ ಸಾ ಆಸ್ಪತ್ರೆ ಎನ್ ಸಿ ಡಿ ವಿಭಾಗ ನೆರವು ಪಡೆಯಲು ತಿಳಿಸಿದರು.ಎನ್ ಸಿ ಡಿ ತಂಡದ ನೀಲಾಂಬಿಕ,ಚಂದ್ರಕಲಾ ತಪಾಸಣೆ ಶಿಬಿರ ಕೈಗೊಳ್ಳುವ ಮೂಲಕ ಶಿಬಿರಾರ್ಥಿಗಳಿಗೆ ಅರಿವು ಮೂಡಿಸಿದರು ಹಾಗೂ ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು ಯಶಸ್ವಿ ಗೊಳಿಸಿದರು.

## ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪರಿಕರ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1% ಹ್ಯುಮಾನಿಟಿ ಕ್ಲಬ್ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತವಾಗಿ ಶೈಕ್ಷಣಿಕ ಪರಿಕರಗಳನ್ನು ವಿತರಿಸಲಾಯಿತು.ಗ್ರಾಮೀಣ ಭಾಗದ ಸರ್ಕಾರಿ ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿದ್ದ ಈ ಕಾರ್ಯಕ್ರಮದಲ್ಲಿ ಶಾಲೆಯ ಮಕ್ಕಳಿಗೆ ನೋಟ್‌ಬುಕ್ ಹಾಗೂ ಅಗತ್ಯ ಲೇಖನ ಸಾಮಗ್ರಿಗಳನ್ನು ವಿತರಿಸಿ, ಮಕ್ಕಳ ಮುಖದಲ್ಲಿ ಮಂದಹಾಸ ಮೂಡಿಸಲಾಯಿತು.ಈ ಸಂದರ್ಭದಲ್ಲಿ ಶಾಲಾ ಎಸ್‌ಡಿಎಂಸಿ ಅಧ್ಯಕ್ಷರಾದ ಹನುಮಂತ ಬಿರಾದಾರ, ಮುಖ್ಯೋಪಾಧ್ಯಾಯರಾದ ರವೀಂದ್ರ ಪಾಟೀಲ, ಸಹ ಶಿಕ್ಷಕರಾದ ಗುಂಡಣ್ಣ ಬಂಡಿ, ರಾಕೇಶ ಚಿದ್ರೆ, ವಿಜಯಲಕ್ಷ್ಮಿ ದಾನಿ ಹಾಗೂ ನಂಜು ಗೋಖಲೆ ಉಪಸ್ಥಿತರಿದ್ದರು.ಇದೇ ವೇಳೆ ವಿದ್ಯಾರ್ಥಿಗಳಿಗೆ ಸಹಾಯ ಹಸ್ತ ಚಾಚಿದ 1% ಹ್ಯುಮಾನಿಟಿ ಕ್ಲಬ್‌ನ ಪ್ರಮುಖರಾದ ಆನಂದ ತೋರಶೆಟ್ಟಿ, ಸತೀಶ ಪಾಟೀಲ, ಪ್ರಶಾಂತ ಸ್ವಾಮಿ, ಅನಿಲ ಹುಗಾರ, ಸತೀಶ ಶೇಟಕಾರ ಹಾಗೂ ಅಮರ ಬಿಲಗುಂದಿ ಅವರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಈ ಸಮಾಜಮುಖಿ ಕಾರ್ಯಕ್ಕೆ ಶಾಲಾ ಸಿಬ್ಬಂದಿ ಹಾಗೂ ಗ್ರಾಮಸ್ಥರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

# ಯೋಗ ಜಾಗೃತಿ ಜಾಥಾಕ್ಕೆ ಅಪರ ಜಿಲ್ಲಾಧಿಕಾರಿಗಳಿಂದ ಚಾಲನೆ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 19 : ರಾಯಚೂರು ಜಿಲ್ಲೆಯಲ್ಲಿ ಜೂನ್ 21 ರಂದು ನಡೆಯುವ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಗುರುವಾರ ದಂದು ಯೋಗ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಪ್ರಭಾರ ಅಪರ ಜಿಲ್ಲಾಧಿಕಾರಿಗಳಾದ ಹಂಪಣ್ಣ ಸಜ್ಜನ್ ಅವರು ಚಾಲನೆ ನೀಡಿದರು.

ಈ ವೇಳೆ ಅವರು ಮಾತನಾಡಿ, ಆರೋಗ್ಯಕ್ಕಾಗಿ ಯೋಗವನ್ನು ಪ್ರತಿ ದಿನ ಮಾಡುತ್ತಾಹೊದರೆ ಮಾನಸಿಕ ನೆಮ್ಮದಿ ಮತ್ತು ದೈಹಿಕ ಶಕ್ತಿ ಹೆಚ್ಚಿಸುತ್ತದೆ. ಹಾಗೂ ರೋಗ ನಿರೋಧಕ ಶಕ್ತಿ ಹೆಚ್ಚಾಗುತ್ತದೆ.ಹೀಗಾಗಿ ಜಿಲ್ಲೆಯಲ್ಲಿ ಭಾನುವಾರ ದಂದು ಅಂತರಾಷ್ಟ್ರೀಯ ದಿನಾಚರಣೆಯಲ್ಲಿ




ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕರೆ ನೀಡಿದರು.

ಯೋಗ ಜಾಗೃತಿ ಜಾಥಾವು ರಾಯಚೂರು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಿಂದ ಸರಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆ, ಏಕ್ ಮೀನಾರ್ ವರಿಗೆ ನಡೆಸಲಾಯಿತು.

ಈ ಜಾಥಾದಲ್ಲಿ ಪೂರ್ಣಿಮಾ ಆಯುರ್ವೇದ ಕಾಲೇಜಿನ 200 ವಿದ್ಯಾರ್ಥಿಗಳು ಸೇರಿದಂತೆ ವಿವಿಧ ಸಂಘ, ಸಂಸ್ಥೆಗಳ ಸುಮಾರು 100 ಜನರು ಭಾಗವಹಿಸಿದ್ದರು ಎಂದು ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಶಂಕರಗೌಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಸತ್ಯ ನಾರಾಯಣ ಶೆಟ್ಟಿ ಅವರಿಂದ ರಾಯಚೂರಿನ ವಿವಿಧ ಕಡೆ ಭೇಟಿ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 19 : ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಸತ್ಯನಾರಾಯಣ ಶೆಟ್ಟಿ ಅವರು ಜೂನ್ 18ರ ಗುರುವಾರ ದಂದು ರಾಯಚೂರಿ ರಿಮ್ಸ್ ಆಸ್ಪತ್ರೆ, ಸಖಿ ಓನ್ ಸ್ಟಾಫ್ ಸೆಂಟರ್, ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಪಶೀಲನೆ ಮಾಡಿದರು.ಮೊದಲು ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ, ಅಪೌಷ್ಟಿಕ ಮಕ್ಕಳ ಆರೋಗ್ಯ ವಿಚಾರಿಸಿ ಪಾಲಕರೊಂದಿಗೆ ಸಮಾಲೋಚಿಸಿದರು.ನಂತರ ರಿಮ್ಸ್ ಆಸ್ಪತ್ರೆಯ ಆವರಣದಲ್ಲಿರುವ ಸಖಿ ಓನ್ ಸ್ಟಾಫ್ ಸೆಂಟ–ರ್‌ಗೆ ಭೇಟಿ ನೀಡಿ, ಮಕ್ಕಳ ಪ್ರಕರಣಗಳ ಕುರಿತು ಸಿಬ್ಬಂದಿಗಳ ಕಾರ್ಯನಿರ್ವಹಣೆ ಮತ್ತು ಇತರೆ ಇಲಾಖೆಗಳ



ಸಮನ್ವಯದೊಂದಿಗೆ ಕ್ರಮಕೈಗೊಳ್ಳಲು ಸಲಹೆ ನೀಡಿದರು.

ನಂತರ ರಾಯಚೂರಿನ ಆಗಾಫೆ ಚರ್ಚ್ ಹತ್ತಿರವಿರುವ ಮಕ್ಕಳ ಪಾಲನಾ ಸರ್ಕಾರಿ ಸಂಸ್ಥೆಗಳಿಗೆ ಭೇಟಿ ಮಾಡಿ

ಮಕ್ಕಳೊಂದಿಗೆ ಸಮಾಲೋಚಿಸಿ, ಅಧಿಕಾರಿ ಮತ್ತು ಸಿಬ್ಬಂದಿಗಳೊಂದಿಗೆ ಸಭೆ ನಡೆಸಿದರು.ಇದೇ ಸಂಧರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಂ.ಡಿ.ಗೋಕುಲ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ,ಗಿಲ್ಲೇಸೂಗೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮನ್ಸೂರ್ ಅಹ್ಮದ್ ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಕಲ್ಯಾಣ ಸಮಿತಿಯ ಅಧೀಕ್ಷಕರು, ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ದೇವದುರ್ಗ ಪಟ್ಟಣಕ್ಕೆ ಜಿಲ್ಲಾಧಿಕಾರಿ ಪೂವಿತಾ ಎಸ್. ದಿಢೀರ್ ಭೇಟಿ; ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 19 : ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಗುರುವಾರ ದಂದು ಜಿಲ್ಲೆಯ ದೇವದುರ್ಗದ ತಹಶೀಲ್ದಾರ್ ಕಚೇರಿ ಸೇರಿದಂತೆ ವಿವಿಧ ಕಡೆಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಮೊದಲು ದೇವದುರ್ಗದ ತಹಶೀಲ್ದಾರ್ ಕಚೇರಿಗೆ ಭೇಟಿ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗ ಇಲಾಖೆ, ಕಂದಾಯ ವಿವಿಧ ಶಾಖೆಗೆ ಭೇಟಿ ದಾಖಲಾತಿಗಳನ್ನು ಪರಿಶೀಲಿಸಿದರು.

ನಂತದ ತಹಶೀಲ್ದಾರರ ಕಚೇರಿಯ ಸಭಾಂಗಣದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿ, ದೇವದುರ್ಗ ತಾಲೂಕು ಸಮಗ್ರ ಅಭಿವೃದ್ಧಿಗಾಗಿ ಕೈಗೊಳ್ಳಬೇಕಾದ ಕ್ರಮಗಳು, ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಕುರಿತು ಹಾಗೂ ದೇವದುರ್ಗ ತಾಲೂಕಿನ ಮುಂದಿನ ಅಭಿವೃದ್ಧಿಗಾಗಿ ಬೇಕಾಗುವ ಅನುದಾನ ಬಗ್ಗೆ ವಿವಿಧ ಇಲಾಖೆಯ ಅಧಿಕಾರಿಗಳಿಂದ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಸರ್ಕಾರದ ವಿವಿಧ ಯೋಜನೆಗಳಿಗೆ ಸಾರ್ವಜನಿಕರಿಂದ ಸಲ್ಲಿಸುವ ಅರ್ಜಿಗಳನ್ನು ನಿಗದಿತ ಸಮಯದೊಳಗೆ ವಿಲೇವಾರಿ ಮಾಡಿ, ಅವರಿಗೆ ಸೌಲಭ್ಯವನ್ನು ದೊರಕಿಸಬೇಕು. ಮುಂದಿನ ದಿನಗಳಲ್ಲಿ ದೇವದುರ್ಗ ಪಟ್ಟಣ ಸೇರಿದಂತೆ ತಾಲೂಕಿನ ಗ್ರಾಮೀಣ ಭಾಗದಲ್ಲಿ



ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಮುಂಜಾಗ್ರತೆ ವಹಿಸಬೇಕು. ಮಳೆ ನೀರು ಸರಾಗವಾಗಿ ಹರಿಯುವಂತಾಗಲು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಾಲುವೆ, ಚರಂಡಿಗಳನ್ನು ಸ್ವಚ್ಛಗೊಳಿಸುವ ಕಾರ್ಯ ಆಗಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಸೇವೆ ಸಲ್ಲಿಸಬೇಕು. ಯಾವುದೇ ದೂರುಗಳು ಬರದಂತೆ ಕರ್ತವ್ಯ ನಿರ್ವಹಿಸಬೇಕು. ಪಿಂಚಣಿ ಸೌಲಭ್ಯವನ್ನು ಅರ್ಹ ಫಲಾನುಭವಿಗಳಿಗೆ ಮುಟ್ಟಿಸಲು ಸೂಕ್ತ ಕ್ರಮವಹಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಂತರ ಸಿಬ್ಬಂದಿಗಳು ಕಾರ್ಯನಿರ್ವಹಿಸುವ ಕೊಠಡಿಗಳಿಗೆ ತೆರಳಿ ಒಂದೊಂದು ಸಮಸ್ಯೆಗಳು ಆಲಿಸಿದರು. ಶಾಲಾ–ಕಾಲೇಜುಗಳು ಆರಂಭವಾಗಿದ್ದು, ಜಾತಿ ಪ್ರಮಾಣ ಪತ್ರ ಸೇರಿದಂತೆ ಇತರೆ ಪ್ರಮಾಣ ಪತ್ರಗಳು ಸಕಾಲಕ್ಕೆ ವಿದ್ಯಾರ್ಥಿಗಳಿಗೆ ಮುಟ್ಟಿಸುವ ಕೆಲಸ ಮಾಡಬೇಕು. ಯಾವುದೇ ಕಾರಣಕ್ಕೆ ವಿದ್ಯಾರ್ಥಿಗಳು ಶಾಲೆ, ಕಾಲೇಜ್ ಬಿಟ್ಟು ಕಚೇರಿಗೆ ಅಲೆಯದಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ವಸತಿ ನಿಯಲಕ್ಕೆ ಭೇಟಿ: ದೇವದುರ್ಗ ಪಟ್ಟಣದ ಹೊರವಲಯದ ರಾಯಚೂರು ರಸ್ತೆಯ ಹತ್ತಿರುವ ವಿವಿಧ ವಸತಿ ನಿಲಯಗಳಿಗೆ ಜಿಲ್ಲಾಧಿಕಾರಿ ಅವರು ಭೇಟಿ ನೀಡಿ, ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿವಿಧ ಸೌಲಭ್ಯಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ನಿಲಯದ ಕೊಠಡಿಗಳು, ಗ್ರಂಥಾಲಯ, ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಅಡುಗೆ ಮನೆ, ದಿನಸಿ ಸಾಮಗ್ರಿಗಳ ಉಗ್ರಾಣ ಇತರೆ ಸೌಲಭ್ಯಗಳನ್ನು ಕೂಲಂಕುಶವಾಗಿ ಪರಿಶೀಲಿಸಿ ಅಗತ್ಯ ಮಾಹಿತಿಯನ್ನು ಪಡೆದು, ವಿದ್ಯಾರ್ಥಿಗಳಿಗೆ ಸರಕಾರದಿಂದ ಸಿಗುವ ಸೌಲಭ್ಯಗಳನ್ನು ಸರಿಯಾದ ರೀತಿಯಲ್ಲಿ ಕೊಡಬೇಕೆಂದರು,

ನಂತರ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದ ಜಿಲ್ಲಾಧಿಕಾರಿಗಳು ವಿದ್ಯಾರ್ಥಿಗಳ ಕನಸುಗಳು, ಗುರಿಗಳು ಹಾಗೂ ಭವಿಷ್ಯದ ಯೋಜನೆಗಳ ಕುರಿತು ಸಂವಾದ ನಡೆಸಿ ತಮ್ಮ ಸ್ಫೂರ್ತಿದಾಯಕ ಮಾತುಗಳ ಮೂಲಕ ವಿದ್ಯಾರ್ಥಿಗಳನ್ನು ಸರ್ವತೋಮುಖ ಬೆಳವಣಿಗೆ ಸಾಧಿಸಲು ಹುರಿದುಂಬಿಸಿದರು.

ಇದಕ್ಕೂ ಮುಂಚೆ ದೇವದುರ್ಗ ಪಟ್ಟಣದ ಅಂಗನವಾಡಿ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ದೇವದುರ್ಗ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಅರಕೇರಾ ತಹಶೀಲ್ದಾರ್ ಅಮರೇಶ, ತಾಲೂಕು ಆರೋಗ್ಯಾಧಿಕಾರಿ ಡಾ.ಬನದೇಶ್ವರ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಪತ್ರಿಕೆಗಳು ಸಮಾಜದ ರಕ್ಷಾ ಕವಚವಾಗಿ ಕಾರ್ಯನಿರ್ವಹಿಸಲಿ : ಚಂದ್ರಶೇಖರ ವಂಕೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಕೆಯುಡಬ್ಲೂಜೆ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಸಮಾಜಮುಖಿ ಕಾರ್ಯಕರ್ತ ಜಯರಾಜ್ ಪಾತ್ರೆ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದ ಯುವ ಪತ್ರಕರ್ತ ಬಿ. ಜಿ. ಸಂತೋಷ್ ಪಾಟೀಲ್ ಅವರನ್ನು ನಗರದ ಐಶ್ವರ್ಯ ಎಲೆಕ್ಟ್ರಾನಿಕ್ಸ್ ಮತ್ತು ಫರ್ನಿಚರ್ ಶೋರೂಮ್ನಲ್ಲಿ ಗೆಳೆಯರ ಬಳಗದಿಂದ ಅದ್ದೂರಿಯಾಗಿ ಸನ್ಮಾನಿಸಲಾಯಿತು.

ಶೋರೂಮ್ ಮಾಲೀಕರಾದ ಬಸವರಾಜ್ ವಂಕೆ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸ್ನೇಹಿತರು ಹಾಗೂ ಗಣ್ಯರು ನೂತನ ಪದಾಧಿಕಾರಿಗಳಿಗೆ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ



ಮಾತನಾಡಿದ ಪಿ.ಎಲ್.ಡಿ. ಬ್ಯಾಂಕಿನ ನಾಮ ನಿರ್ದೇಶಿತ ನಿರ್ದೇಶಕರಾದ ಚಂದ್ರಶೇಖರ ವಂಕೆ ಸಮಾಜದ ಮೂರನೇ ಕಣ್ಣಾಗಿರುವ ಪತ್ರಿಕಾ ರಂಗವು ಜನರ ಧ್ವನಿಯಾಗಿ, ಸಮಾಜದ ರಕ್ಷಾ ಕವಚವಾಗಿ ಕಾರ್ಯನಿರ್ವಹಿಸಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಲೋಕೇಶ್ ಭೂರೆ, ಪ್ರಸಾದ್ ಪಾತ್ರೆ, ಸಂಗಮೇಶ್ ಪಾತ್ರೆ, ಮಚ್ಚಿಂದರ್ ಸೂರಿ, ಮಹಂತೇಶ್, ವಸಂತ್ ಪಾಟೀಲ್, ಸುಭಾಷ್, ಎಪಿಎಂಸಿ ನಂದಕುಮಾರ್ ದೇಶಮುಖ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದು ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು.

ನೂತನ ಪದಾಧಿಕಾರಿಗಳ ನೇತೃತ್ವದಲ್ಲಿ ಸಂಘವು ಮತ್ತಷ್ಟು ಬಲಿಷ್ಠವಾಗಿ ಬೆಳೆಯಲಿ ಹಾಗೂ ಸಮಾಜಮುಖಿ ಕಾರ್ಯಗಳ ಮೂಲಕ ಜನಸೇವೆಯಲ್ಲಿ ಮಾದರಿಯಾಗಲಿ ಎಂದು ಉಪಸ್ಥಿತರು ಹಾರೈಸಿದರು.

# ನಿಜವಾದ ಮತದಾರರನ್ನು ಗುರುತಿಸುವ ಕಾರ್ಯವಾಗಬೇಕು: ಪ್ರಕಾಶ ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಬಿಜೆಪಿ ಪಕ್ಷದ ಬಿಎಲ್ ಎ ಗಳು

ತಮ್ಮ ತಮ್ಮ ಬೂತ್ ಗಳಲ್ಲಿ ನಿಜವಾದ ಮತದಾರರನ್ನು ಗುರುತಿಸಿ ಅವರ ಹೆಸರುಗಳು ಮತದಾರರ ಮತಪಟ್ಟಿಯಲ್ಲಿ ಉಳಿಸಿಕೊಳ್ಳುವ ಕಾರ್ಯ ಮಾಡಬೇಕು ಎಂದು ಬಿಜೆಪಿ ಮುಖಂಡರೂ ಆದ ಮಾಜಿ ಶಾಸಕ ಪ್ರಕಾಶ ಖಂಡ್ರೆ ಹೇಳಿದರು.

ನಗರದಲ್ಲಿ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಎಸ್‌ಐಆರ್ ಕುರಿತ ಬಿಎಲ್ ಎ–2 ಹಾಗೂ ಪದಾಧಿಕಾರಿಗಳ ವಿಶೇಷ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.ಎರಡೆರಡೂ ಕಡೆ ಹೆಸರಿರುವ ಮತದಾರರಿಗೆ ಯಾವುದಾದರೂ ಒಂದು ಕಡೆ ಹೆಸರು ಇಡುವಂತೆ ತಿಳಿ ಹೇಳಬೇಕು. ಪಕ್ಷದ ವತಿಯಿಂದ ನೇಮಿಸಲಾದ ಬಿಎಲ್ ಎ ಗಳಿಗೆ ಚುನಾವಣಾ ಆಯೋಗದ ವತಿಯಿಂದ ಗುರುತಿನ



ಚೀಟಿ ನೀಡಲಾಗುತ್ತದೆ. ಜೊತೆಗೆ ಚುನಾವಣಾ ಆಯೋಗದ ವತಿಯಿಂದ ತರಬೇತಿ ಕೂಡ ನೀಡುವವರಿದ್ದಾರೆ ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಮಾತನಾಡಿ, ಪಕ್ಷದ ವತಿಯಿಂದ ನೇಮಿಸಲಾದ ಬಿಎಲ್ ಎ ಅವರು ಪ್ರತಿ ಮನೆ ಮನೆಗೆ ಭೇಟಿ ನೀಡಿ ದಿನಾಲೂ ಕನಿಷ್ಠ 30 ಏನುಮ್ರೇಶನ್ ಫಾರ್ಮ್ ಗಳು ತುಂಬಿಸಿ ಬಿಎಲ್ ಓ ಗಳಿಗೆ ಸಲ್ಲಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿ ಪ್ರಾಸ್ತಾವಿಕ ಮಾತನಾಡಿದರು.

ಪ್ರಮುಖರಾದ ಅಶೋಕ ಹೊಕ್ರಾಣೆ, ಮಾಧವ ಹಸೂರ್ರೆ, ಬಾಬುರಾವ್ ಕಾರಬಾರಿ, ಶಿವರಾಜ ಗಂದಗೆ, ಮಾತನಾಡಿದರು.ಮುಖಂಡರುಗಳಾದ, ಅಶೋಕ ವಕಾರೆ, ಸುಭಾಷ ಬಿರಾದಾರ, ಗೋವಿಂದರಾವ್ ಬಿರಾದಾರ, ಪಂಡಿತ ಶಿರೋಳೆ, ಶಫಿ ಬುಜುರ್ಗ್, ಜೈ ಭೀಮ್ ಬಂಧು, ಅಶೋಕ್ ಪಾಟೀಲ, ದಿಗಂಬರರಾವ್ ಮಾನಕಾರಿ, ಲುಂಬಿಣಿ ಗೌತಮ್, ತಾನಾಜಿ ರಾಥೋಡ್, ಕಿಶನರಾವ್ ಪಾಟೀಲ, ವೆಂಕಟ ಬಿರಾದಾರ, ಶ್ರೀಕಾಂತ ದಾನಿ, ಸೇರಿದಂತೆ ಇತರರು ಇದ್ದರು.ರೇವಣಸಿದ್ದ ಜಾಡರ್ ನಿರೂಪಿಸಿದರು. ಡಾ ಮಹೇಶ ಭಾಲ್ಕೆ ಸ್ವಾಗತಿಸಿದರು. ವೆಂಕಟ ಲಾಳೆ ವಂದಿಸಿದರು.

# ಜೂ. 21 ರಂದು ಯುಜಿ-ನೀಟ್ ಪರೀಕ್ಷೆ: ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.19–ನವದೆಹಲಿಯ ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ (ಎನ್.ಟಿ.ಎ.) ವತಿಯಿಂದ ಯುಜಿ–ನೀಟ್–2026 (UG-NEET-2026) ಪರೀಕ್ಷೆಯು 2026ರ ಜೂನ್ 21ರಂದು ಮಧ್ಯಾಹ್ನ 2 ರಿಂದ ಸಂಜೆ 5.30 ಗಂಟೆಯವರೆಗೆ ಕಲಬುರಗಿ ನಗರದ 16 ಪರೀಕ್ಷಾ ಕೇಂದ್ರ ಹಾಗೂ ಆಳಂದ ತಾಲೂಕಿನ ಕಡಗಂಚಿ ಗ್ರಾಮದಲ್ಲಿ 04 ಪರೀಕ್ಷಾ ಕೇಂದ್ರ ಸೇರಿದಂತೆ ಹೀಗೆ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದೆ. ಈ ಪರೀಕ್ಷೆ ಸಮಯದಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ಈ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಠಿಯಿಂದ ಬಿ.ಎನ್.ಎಸ್.ಎಸ್ ಕಾಯ್ದೆ–2023ರ ಕಲಂ 163 ರನ್ವಯ ಜಿಲ್ಲಾ ದಂಡಾಧಿಕಾರಿಗಳಾಗಿರುವ ಕಲಬುರಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಆದೇಶ ಹೊರಡಿಸಿದ್ದಾರೆ. ಈ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜೆರಾಕ್ಸ್ ಅಂಗಡಿಗಳು, ಪುಸ್ತಕ ಅಂಗಡಿಗಳು ಮತ್ತು ಸೈಬರ್ ಕೆಫೆ (ಇಂಟರ್‌ನೆಟ್ ಸೆಂಟರ್) ಮುಚ್ಚುವಂತೆ ಆದೇಶಿಸಲಾಗಿದೆ. ಇದಲ್ಲದೆ ಪರೀಕ್ಷಾ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಸಿಬ್ಬಂದಿ ವರ್ಗದವರು ಹೊರತುಪಡಿಸಿ, ಯಾವುದೇ ಬೇರೆ ವ್ಯಕ್ತಿಗಳು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ ಪ್ರದೇಶದಲ್ಲಿ ಮೊಬೈಲ್ ಫೋನ್, ಪೇಜರ್, ಬ್ಲ್ಯುಟೂತ್, ವೈರಲೆಸ್ ಸೆಟ್‌ಗಳು ಹಾಗೂ ಇತ್ಯಾದಿ ಎಲೆಕ್ಟ್ರಾನಿಕ ವಸ್ತುಗಳನ್ನು ಉಪಯೋಗಿಸುವುದನ್ನು ಸಹ ಕರ್ನಾಟಕ ಪೊಲೀಸ್ ಅಧಿನಿಯಮ–1963ರ ಕಲಂ–35(ಸಿ) ರಡಿಯಲ್ಲಿ ನಿಷೇಧಿಸಿ ಡಿ.ಸಿ. ಅವರು ಆದೇಶ ಮಾಡಿದ್ದಾರೆ.

# ಫಲವತ್ತಾದ ಕೃಷಿಭೂಮಿ ಸ್ವಾಧೀನ ವಿರೋಧಿಸಿ ಜೆಡಿಎಸ್ ಪ್ರತಿಭಟನೆ


• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಿಡದಿ ಮತ್ತು ಹಾರೋಹಳ್ಳಿ ಹೋಬಳಿಗಳಲ್ಲಿನ ಫಲವತ್ತಾದ ಕೃಷಿಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಜೆಡಿಎಸ್ ಕಾರ್ಯಕರ್ತರು ಹಾಗೂ ರೈತರು ಗುರುವಾರ ಬಳ್ಳಾರಿಯಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಜೆಡಿಎಸ್ ಕಚೇರಿಯಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ರಾಯಲ್ ಸರ್ಕಲ್‌ವರೆಗೆ ಸಾಗಿತು. ಬಳಿಕ ಕೆಲಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಿದ ಪ್ರತಿಭಟನಾಕಾರರು, ಸರ್ಕಾರದ ಭೂಸ್ವಾಧೀನ ನೀತಿಯನ್ನು ತಕ್ಷಣ ಕೈಬಿಡುವಂತೆ ಆಗ್ರಹಿಸಿದರು.

ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಜೆಡಿಎಸ್ ಜಿಲ್ಲಾಧ್ಯಕ್ಷ ಮಿನಲ್ಲಿ ತಾಯಣ್ಣ, ಬಿಡದಿ ಮತ್ತು ಹಾರೋಹಳ್ಳಿ ಹೋಬಳಿಗಳ ವ್ಯಾಪ್ತಿಯಲ್ಲಿರುವ ಅತ್ಯಂತ ಫಲವತ್ತಾದ ಕೃಷಿಭೂಮಿಯನ್ನು ವಶಪಡಿಸಿಕೊಳ್ಳಲು ಸರ್ಕಾರ ಹೊರಡಿಸಿರುವ ಅಂತಿಮ ಅಧಿಸೂಚನೆ ರೈತ ವಿರೋಧಿ ಹಾಗೂ ದಬ್ಬಾಳಿಕೆಯ ಕ್ರಮವಾಗಿದೆ ಎಂದು ಆರೋಪಿಸಿದರು.

ಮೊದಲ ಹಂತದಲ್ಲಿ ಸುಮಾರು 498.34 ಎಕರೆ ಕೃಷಿಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವುದರಿಂದ 755 ರೈತ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಲಿವೆ. ಈ ಪೈಕಿ ಶೇ.81ಕ್ಕೂ ಹೆಚ್ಚು ರೈತರು ಒಂದು ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ಸಣ್ಣ ಮತ್ತು ಅತಿ ಸಣ್ಣ ರೈತರಾಗಿದ್ದು, ಅವರ ಬದುಕು ಸಂಪೂರ್ಣವಾಗಿ ಕೃಷಿಯನ್ನೇ ಅವಲಂಬಿಸಿದೆ ಎಂದು ಹೇಳಿದರು.



ಮುಂದಿನ ಹಂತದಲ್ಲಿ 7,500ಕ್ಕೂ ಹೆಚ್ಚು ಎಕರೆ ಫಲವತ್ತಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಯೋಜನೆ ಸರ್ಕಾರದ ಮುಂದಿದ್ದು, ರೈತರು ಭೂಮಿ ಬಿಟ್ಟುಕೊಡಲು ಸಿದ್ಧರಿಲ್ಲದಿದ್ದರೂ ಬಲವಂತವಾಗಿ ಸ್ವಾಧೀನ ಪ್ರಕ್ರಿಯೆ ಮುಂದುವರಿಸಲಾಗುತ್ತಿದೆ ಎಂದು ದೂರಿದರು.

ಈ ಭಾಗದಲ್ಲಿ ಹೈನುಗಾರಿಕೆ, ರೇಷ್ಮೆ ಕೃಷಿ, ರೇಷ್ಮೆಹುಳು ಸಾಕಾಣಿಕೆ ಹಾಗೂ ತೋಟಗಾರಿಕೆ ಪ್ರಮುಖ ಜೀವನೋಪಾಯವಾಗಿದ್ದು, ಭೂಸ್ವಾಧೀನದಿಂದ ಪ್ರತಿ ತಿಂಗಳು ಸುಮಾರು 6 ಲಕ್ಷ ಲೀಟರ್ ಹಾಲು ಉತ್ಪಾದನೆ ಮೇಲೆ ಪರಿಣಾಮ ಬೀಳಲಿದೆ. ಸಾವಿರಾರು ಕುಟುಂಬಗಳ ಜೀವನಾಧಾರವೇ ಕಳೆದುಹೋಗುವ ಅಪಾಯ ಎದುರಾಗಿದೆ ಎಂದು ಹೇಳಿದರು.

ಸರ್ಕಾರ ಸ್ಮಾರ್ಟ್ ಸಿಟಿ ಹಾಗೂ ಇಂಟಿಗ್ರೇಟೆಡ್ ಟೌನ್‌ಶಿಪ್ ಹೆಸರಿನಲ್ಲಿ ರಿಯಲ್ ಎಸ್ಟೇಟ್ ಯೋಜನೆ ಜಾರಿಗೊಳಿಸಲು ಮುಂದಾಗಿದ್ದು, ಇದರಿಂದ ಸಾವಿರಾರು ಕೋಟಿ ರೂಪಾಯಿ ಮೌಲ್ಯದ ಭೂಮಿ ವಾಣಿಜ್ಯ ಉದ್ದೇಶಗಳಿಗೆ ಬಳಸಿಕೊಳ್ಳುವ ಸಾಧ್ಯತೆ ಇದೆ ಎಂದು ಆರೋಪಿಸಿದರು.

ಅಲ್ಲದೆ, ಸುಮಾರು 10 ಲಕ್ಷಕ್ಕೂ ಹೆಚ್ಚು ಮರಗಳನ್ನು ತೆರವುಗೊಳಿಸುವ ಮೂಲಕ ಪರಿಸರ ಹಾನಿಗೆ ಕಾರಣವಾಗುವ ಸಾಧ್ಯತೆಯಿದ್ದು, ಸಾಮಾಜಿಕ ಪರಿಣಾಮ ಮೌಲ್ಯಮಾಪನ (ಖಐಂ) ಹಾಗೂ ಪರಿಸರ ಪರಿಣಾಮ ಮೌಲ್ಯಮಾಪನ (ಇಖಂ) ಪ್ರಕ್ರಿಯೆಗಳನ್ನು ಸಮರ್ಪಕವಾಗಿ ಅನುಸರಿಸಿಲ್ಲ ಎಂದು ದೂರಿದರು.

ಭೂಸ್ವಾಧೀನದ ಅಂತಿಮ ಅಧಿಸೂಚನೆಯನ್ನು ತಕ್ಷಣ ರದ್ದುಗೊಳಿಸಬೇಕು, 7,500ಕ್ಕೂ ಹೆಚ್ಚು ಎಕರೆ ಭೂಸ್ವಾಧೀನ ಯೋಜನೆಯನ್ನು ಕೈಬಿಡಬೇಕು, ರೈತರ ಜೀವನೋಪಾಯ ರಕ್ಷಿಸಬೇಕು ಹಾಗೂ ಸಾರ್ವಜನಿಕ ಆಸ್ತಿಗಳನ್ನು ಅಡವಿಟ್ಟು ಸಾಲ ಪಡೆಯುವ ಕ್ರಮವನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಲ್ಲನ ಗೌಡ ಜಿಲ್ಲಾ ರೈತ ವಿಭಾಗದ ಅಧ್ಯಕ್ಷರಾದ ಲಕ್ಷ್ಮಿಕಾಂತ್ ರೆಡ್ಡಿ ,ಪ್ರಧಾನ ಕಾರ್ಯದರ್ಶಿ ಮಧುರೈ ವಿಜಯ್ ಕುಮಾರ್, ಮಹಿಳಾಧ್ಯಕ್ಷೆ ಪುಷ್ಪ, ಬಳ್ಳಾರಿ ನಗರ ಅಧ್ಯಕ್ಷ ಹೊನ್ನೂರು ಸ್ವಾಮಿ ,ಕಂಪ್ಲಿ ಅಧ್ಯಕ್ಷ ಮೇಘರಾಜ್,ಬಳ್ಳಾರಿ ಗ್ರಾಮಾಂತರ ಅಧ್ಯಕ್ಷರಾದ ರಾಜ ಹೊನ್ನಳ್ಳಿ,ಸಿರುಗುಪ್ಪ ಅಧ್ಯಕ್ಷರಾದ ಶಿವನಾರಾಯಣ,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶೋಕ್ ಸಂಗನಕಲ್ಲು,ಪರಿಶಿಷ್ಟ ಪಂಗಡ ಅಧ್ಯಕ್ಷರಾದ ಅದ್ದಿಗೇರಿ ರಾಮಣ್ಣ, ಪರಿಶಿಷ್ಟ ಜಾತಿ ಅಧ್ಯಕ್ಷರಾದ ವಸಂತ್ ಕುಮಾರ್,ಜಿಲ್ಲಾ ವಿದ್ಯಾರ್ಥಿ ಘಟಕದ ಅಧ್ಯಕ್ಷರಾದ ಮುತ್ತು,ಹೊನ್ನೂರು,ಅಲಿ ವಿಜಯ, ಲಕ್ಷ್ಮಿ,ಜಯಲಕ್ಷ್ಮಿ, ರಾಜೇಶ್ವರಿ ಮತ್ತು ಇತರ ಕಾರ್ಯಕರ್ತರು ಭಾಗವಹಿಸಿದ್ದರು.

# ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಸಾವಿರಾರು ಕೋಟಿ ರೂ. ದುರುಪಯೋಗ: ಆರೋಪ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕರಿಗೆ ಅಗತ್ಯವಿಲ್ಲದ ಯೋಜನೆಗಳನ್ನು ಜಾರಿಗೆ ತಂದು ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಕಾರ್ಮಿಕರ ಹಣವನ್ನು ದುರುಪಯೋಗ ಮಾಡಲಾಗುತ್ತಿದೆ ಎಂದು ಕಲ್ಯಾಣ ಕರ್ನಾಟಕ ಕಟ್ಟಡ ಕಾರ್ಮಿಕರ ಸಂಘದ ಸಂಸ್ಥಾಪಕ ಅಧ್ಯಕ್ಷ ಮಲ್ಲೇಶ್ ಆರೋಪಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣ – ದಲ್ಲಿರುವ ಪತ್ರಿಕಾ –ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಮಿಕರ ಬೆವರ ಹನಿಯಿಂದ – ಸಂಗ್ರಹವಾಗಿರುವ ಸೆಸ್ ನಿಧಿಯನ್ನು ಖಾಸಗಿ ಸಂಸ್ಥೆಗಳಿಗೆ ಟೆಂಡರ್ ನೀಡುವ ಮೂಲಕ ಅನಾವಶ್ಯಕ ಯೋಜನೆಗಳಿಗೆ ವ್ಯಯಿಸಲಾಗುತ್ತಿದೆ ಎಂದು ದೂರಿದರು.

ರಾಜ್ಯದಾದ್ಯಂತ ಕಾರ್ಮಿಕರು ಹಾಗೂ – ವಿವಿಧ ಕಾರ್ಮಿಕ ಸಂಘಟನೆಗಳು ಅನಗತ್ಯ ಯೋಜನೆಗಳನ್ನು ವಿರೋಧಿಸಿ ಹೋರಾಟ ನಡೆಸುತ್ತಿದ್ದರೂ ಕಾರ್ಮಿಕ ಸಚಿವರು ಹಾಗೂ

ಅನಗತ್ಯ ಯೋಜನೆ ಗಳನ್ನು ರದ್ದುಪಡಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ...

ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ಈಗಾಗಲೇ ಕಾರ್ಮಿಕರಿಗೆ ವೈದ್ಯಕೀಯ ಸೌಲಭ್ಯಗಳು ಲಭ್ಯವಿದ್ದರೂ ಆರೋಗ್ಯ ಸಂಚಾರಿ ಕ್ಲಿನಿಕ್, ಪ್ರಿವೆಂಟಿವ್ ಹೆಲ್ತ್ ಚೆಕ್ ಅಪ್, ಆರ್‌ಪಿ–ಎಲ್ ತರಬೇತಿ, ನ್ಯೂಟ್ರಿಷನ್ ಕಿಟ್, ಹ್ಯೂಮ್ಯಾನಿಟಿ ಕಿಟ್ ಹಾಗೂ ಕಾರ್ಮಿಕ ಸೇವಾ ಕೇಂದ್ರಗಳಂತಹ ಯೋಜನೆಗಳಿಗೆ ನೂರಾರು ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ ಎಂದು ಅವರು ಆರೋಪಿಸಿದರು.

ಕಾರ್ಮಿಕರಿಗೆ ನೀಡಲಾಗುತ್ತಿರುವ ಟೂಲ್ ಕಿಟ್ ಹಾಗೂ ಸೇಫ್ಟಿ ಕಿಟ್‌ಗಳ ಖರೀದಿಯಲ್ಲಿ ಭಾರಿ ಅಕ್ರಮ ನಡೆದಿದೆ ಎಂದು ಆರೋಪಿಸಿದ ಮಲ್ಲೇಶ್, ಮಾರುಕಟ್ಟೆಯಲ್ಲಿ ಸುಮಾರು 1,378 ಬೆಲೆಯ

ಕಿಟ್‌ಗಳನ್ನು 3,575ಕ್ಕೆ ಖರೀದಿಸುವ ಮೂಲಕ ಮಂಡಳಿಗೆ ಕೋಟ್ಯಂತರ ರೂಪಾಯಿ ನಷ್ಟ ಉಂಟುಮಾಡಲಾಗಿದೆ. ಕಳಪೆ ಗುಣಮಟ್ಟದ ಕಿಟ್‌ಗಳ ವಿರುದ್ಧ ಹಲವಾರು ಕಾರ್ಮಿಕ ಸಂಘಟನೆಗಳು ದೂರು ನೀಡಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ತಿಳಿಸಿದರು.

ಆರ್‌ಪಿಎಲ್ ತರಬೇತಿ ಯೋಜನೆಗೆ 100 ಕೋಟಿ ಮೀಸಲಿರಿಸಲಾಗಿದ್ದು, ತರಬೇತಿ ನೀಡುವ ಸಂಸ್ಥೆಗಳು ನೈಜ ತರಬೇತಿ ನೀಡದೆ ಕೇವಲ ಔಪಚಾರಿಕ ಕಾರ್ಯಕ್ರಮ ನಡೆಸಿ ಕಾರ್ಮಿಕರಿಗೆ ಹಾಗೂ ಮಂಡಳಿಗೆ ವಂಚನೆ ಮಾಡುತ್ತಿವೆ ಎಂದು ದೂರಿದರು.

ಪ್ರಿವೆಂಟಿವ್ ಹೆಲ್ತ್ ಕೇರ್ ಚೆಕ್‌ಅಪ್ ಯೋಜನೆಯಡಿ 940 ಕೋಟಿಗೂ ಅಧಿಕ ಹಣ ಖರ್ಚು ಮಾಡಲಾಗಿದ್ದು, ಈ ಯೋಜನೆಯಿಂದ ಕಾರ್ಮಿಕರಿಗೆ ಯಾವುದೇ ಪ್ರಯೋಜನವಾಗುತ್ತಿಲ್ಲ.

ವೈದ್ಯಕೀಯ ತಪಾಸಣೆಯ ವರದಿಗಳನ್ನು ಕಾರ್ಮಿಕರಿಗೆ ಸಮರ್ಪಕವಾಗಿ ನೀಡದಿರುವುದು ಹಾಗೂ ಹಲವು ದೂರುಗಳಿದ್ದರೂ ಕ್ರಮ ಕೈಗೊಳ್ಳದಿರುವುದು ಖಂಡನೀಯ ಎಂದು ಹೇಳಿದರು.

ರಾಜ್ಯಾದ್ಯಂತ ಆರಂಭಿಸಲಾಗಿರುವ ಕಾರ್ಮಿಕ ಸೇವಾ ಕೇಂದ್ರಗಳಿಗೂ ವಿರೋಧ ವ್ಯಕ್ತಪಡಿಸಿದ ಅವರು, ಈಗಾಗಲೇ ಕಾರ್ಮಿಕ ಇಲಾಖೆಯ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿರುವ ಸಂದರ್ಭದಲ್ಲಿ ಖಾಸಗಿ ಸಂಸ್ಥೆಗಳಿಗೆ 41 ಕೋಟಿ ವೆಚ್ಚದಲ್ಲಿ ಟೆಂಡರ್ ನೀಡಿರುವುದು ಹಣದ ದುರುಪಯೋಗವಾಗಿದೆ ಎಂದು ಆರೋಪಿಸಿದರು.

ಶೈಕ್ಷಣಿಕ ಸಹಾಯಧನ, ಮದುವೆ ಸಹಾಯಧನ, ಮರಣ ಸಹಾಯಧನ, ಪಿಂಚಣಿ ಸೇರಿದಂತೆ ಮೂಲಭೂತ ಸೌಲಭ್ಯಗಳಿಗೆ ಆದ್ಯತೆ ನೀಡಬೇಕು. ಅನಗತ್ಯ ಯೋಜನೆಗಳನ್ನು ತಕ್ಷಣ ರದ್ದುಪಡಿಸಿ ಕಾರ್ಮಿಕರಿಗೆ ನೇರ ನಗದು ವರ್ಗಾವಣೆ ಆಧಾರಿತ ಯೋಜನೆಗಳನ್ನು ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಸರ್ಕಾರ ಹಾಗೂ ಮಂಡಳಿ ಈ ಬೇಡಿಕೆಗಳನ್ನು ಈಡೇರಿಸದಿದ್ದರೆ

ರಾಜ್ಯದಾದ್ಯಂತ ಜಿಲ್ಲೆ, ತಾಲೂಕು, ಹೋಬಳಿ ಹಾಗೂ ಗ್ರಾಮ ಮಟ್ಟದಲ್ಲಿ ಉಗ್ರ ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕಲ್ಯಾಣ ಕರ್ನಾಟಕ ಕಟ್ಟಡ ಕಾರ್ಮಿಕರ ಸಂಘದ ಪದಾಧಿಕಾ–ರಿಗಳಾದ ರಮೇಶ್, ಲಕ್ಷ್ಮಣ, ಶಿವಕುಮಾರ್, ರಾಮಾಂಜಿ, ದುರುಗಪ್ಪ, ಶರಣಪ್ಪ, ಲೋಕೇಶ್ ನಾಯ್, ತಿಪ್ಪೇಸ್ವಾಮಿ, ಮಲ್ಲಿಕಾರ್ಜುನ, ಮೆಹಬೂಬ್, ಬಾಬು, ಚಂದ್ರಣ್ಣ, ಸಣ್ಣಪ್ಪ ರೊಟ್ಟಿ ಹಾಗೂ ಅಂಬ್ರೇಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಮಹಿಳೆಯರು ಸೌಲಭ್ಯಗಳನ್ನು ಬಳಸಿಕೊಂಡು ಅಭಿವೃದ್ಧಿ ಹೊಂದಲು ಕರೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಮಾಜದಲ್ಲಿ ಮಹಿಳೆಯರಿಗಿರುವ ಹಲವು ಸೌಲಭ್ಯಗಳನ್ನು ಬಳಸಿಕೊಂಡು ಅಭಿವೃದ್ಧಿ ಹೊಂದಬೇಕು ಎಂದು ಬೆಂಗಳೂರಿನ ಒಂದೆಡೆ ಸಂಸ್ಥೆಯ ಸಂಸ್ಥಾಪಕರಾದ ಡಾ.ಅಕ್ಕೈ ಪದ್ಮಶಾಲಿ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್ ಅಂಬೇಡ್ಕರ್ ಸಭಾಭವನದಲ್ಲಿ ವಿಶ್ವವಿದ್ಯಾಲಯದ ಇಂಗ್ಲೀಷ್ ಅಧ್ಯಯನ ವಿಭಾಗ, ಯುಜಿ ಇಂಗ್ಲೀಷ್ ಶಿಕ್ಷಕರ ಸಂಘ ಹಾಗೂ ಇಂಗ್ಲೀಷ್ ಹಳೆಯ ವಿದ್ಯಾರ್ಥಿಗಳು ಜಂಟಿಯಾಗಿ ಶುಕ್ರವಾರ ಆಯೋಜಿಸಲಾಗಿದ್ದ 'ಬಾಡಿ ಆಯಿಂಡ್ ಲಿಟ್‌ರೆಚರ್' ಒಂದು ದಿನದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ದೇವದಾಸಿಯರು, ದಲಿತ ಮಹಿಳೆಯರು, ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಸ್ವಾವಲಂಬಿ ಜೀವನ ನಡೆಸುವಂತರಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಮಾತನಾಡಿ, ಸಮಾಜದಲ್ಲಿ ವ್ಯಕ್ತಿ ಗೌರವ, ಹಕ್ಕು ಸ್ವಾತಂತ್ರ ವನ್ನು ಕಾಪಾಡುವುದು ಮುಖ್ಯವಾಗಿದೆ. ಹಲವಾರು ನೈತಿಕ ವಿಚಾರಗಳ ಕುರಿತು ವಿದ್ಯಾರ್ಥಿಗಳು, ಸಂಶೋಧಕರು ಗಂಭೀರವಾಗಿ ಚಿಂತನೆ ನಡೆಸಿ, ಸಮಾಜದ ಪರಿವರ್ತನೆಗೆ ಮುಂದಾಗಬೇಕು ಎಂದು ಹೇಳಿದರು.

ವಿವಿಯ ಕುಲಸಚಿವ ಪ್ರೊ.ವಿ.ಲೋಕೇಶ್, ಕಲಾ ನಿಕಾಯದ ಡೀನರಾದ ಪ್ರೊ ರಾಬರ್ಟ್ ಜೋಸ್, ಯುಜಿ ಶಿಕ್ಷಕರ ಸಂಘದ ಅಧ್ಯಕ್ಷ ಡಾ.ಬಸವರಾಜ್ ಟಿ.ಎಚ್ ವೇದಿಕೆಯಲ್ಲಿದ್ದರು.


ಇಂಗ್ಲೀಷ್ ಅಧ್ಯಯನ ವಿಭಾಗದ ಡಾ.ಸಂತೋಷ ಜಿ.ಕೆ ಪ್ರಾಸ್ತಾವಿಕವಾಗಿ ಮಾತನಾಡಿ, ಅತಿಥಿಗಳನ್ನು ಸ್ವಾಗತಿಸಿದರು. ವಿದ್ಯಾರ್ಥಿನಿ ನಿಹಾರಿಕಾ ನಿರೂಪಿಸಿದರು. ಸಹಾಯಕ ಪ್ರಾಧ್ಯಾಪಕರಾದ ಡಾ.ವಾತ್ಸಲ್ಯ ಆರ್ ವಂದಿಸಿದರು.

ವಿವಿಧ ಕಾಲೇಜುಗಳ ಇಂಗ್ಲೀಷ್ ಪ್ರಾಧ್ಯಾಪಕರು ಸೇರಿದಂತೆ 200ಕ್ಕೂ ಅಧಿಕ ವಿದ್ಯಾರ್ಥಿಗಳು ವಿಚಾರ ಸಂಕಿರಣದಲ್ಲಿ ಭಾಗವಹಿಸಿದ್ದರು. ಕನ್ನಡ, ಇಂಗ್ಲೀಷ್ ಮತ್ತು ನಾಟಕ ಹಾಗೂ ಪ್ರದರ್ಶನ ಕಲೆ ಅಧ್ಯಯನ ವಿಭಾಗದ ಎಲ್ಲ ಬೋಧಕ –ಬೋಧ–ಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬೀದರ್ ಜಿಲ್ಲೆಗೆ ಹೆಚ್ಚುವರಿ ರೈಲು ಸೌಲಭ್ಯ ಕಲ್ಪಿಸಲು ಸಂಸದ ಸಾಗರ್ ಖಂಡ್ರೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಗಡಿಜಿಲ್ಲೆ ಬೀದರ್‌ನ ಜನರ ಪ್ರಯಾಣ ಸೌಲಭ್ಯವನ್ನು ವಿಸ್ತರಿಸುವ ಉದ್ದೇಶದಿಂದ ಹೆಚ್ಚುವರಿ ರೈಲು ಸೇವೆಗಳನ್ನು ಕಲ್ಪಿಸುವಂತೆ ನಮ್ಮ ಕರ್ನಾಟಕ ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ್ ಪಾಟೀಲ ನೇತೃತ್ವದ ನಿಯೋಗವು ಸಂಸದ ಸಾಗರ್ ಖಂಡ್ರೆ ಅವರಿಗೆ ಮನವಿ ಸಲ್ಲಿಸಿತು.



ನಗರದ ಸಂಸದರ ನಿವಾಸಕ್ಕೆ ಭೇಟಿ ನೀಡಿದ ನಿಯೋಗವು, ಬೀದರ್‌ನಿಂದ ನವದೆಹಲಿಗೆ ಸೂಪರ್‌ಫಾಸ್ಟ್ ರೈಲು ಸೇವೆ ಆರಂಭಿಸುವುದರ ಜೊತೆಗೆ ಬೆಂಗಳೂರಿಗೆ ಮತ್ತೊಂದು ರೈಲು ಸಂಪರ್ಕ ಕಲ್ಪಿಸಬೇಕು ಎಂದು ಒತ್ತಾಯಿಸಿತು. ವಾರದಲ್ಲಿ ಎರಡು ದಿನ ಸಂಚರಿಸುತ್ತಿರುವ ಕಲಬುರಗಿ–ಬೆಂಗಳೂರು ರೈಲಿನ ಸಮಯವನ್ನು ಮಧ್ಯಾಹ್ನ 2 ಗಂಟೆಯ ಬದಲು ಸಂಜೆ 5 ಗಂಟೆಗೆ ನಿಗದಿಪಡಿಸಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದವರೆಗೆ ವಿಸ್ತರಿಸಿದರೆ ಈ ಭಾಗದ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಮನವಿಯಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಸುಧೀಪ್ ತೂಗಾಂವೆ, ಚಂದು ಸಂಪಂಗೆ, ಬಸವರಾಜ ಕಾರಬಾರಿ, ಅನೀಲ ರಾಜಗೀರಾ, ರವಿ ಪಾಟೀಲ, ಆದಿತ್ಯ ರೆಡ್ಡಿ, ಸುಧೀರ್ ಹೆಡೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಾಹಿತಿ ಡಾ. ಆರ್.ಜಿ. ಗುಂದಿಯವರಿಗೆ ಕಸಾಪ ರಜತ ಗೌರವ ಸಮರ್ಪಣೆ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ದಾಂಡೇಲಿಯಲ್ಲಿ ನಡೆದಿದ್ದ ಉತ್ತರಕನ್ನಡ ಜಿಲ್ಲಾ 25 ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ರಜತ ಗೌರವಕ್ಕೆ ಭಾಜನರಾಗಿದ್ದ ಅಂಕೋಲೆಯ ಹಿರಿಯ ಸಾಹಿತಿ ಡಾ.ಆರ್.ಜಿ.ಗುಂದಿಯವರನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ಎನ್ ವಾಸರೆಯವರು ಕೆಎಲ್‌ಇ ಸಭಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಿ, ಗೌರವಿಸಿದರು. ಬಿ.ಎನ್. ವಾಸರೆ ಮಾತನಾಡಿ, ದಾಂಡೇಲಿಯಲ್ಲಿ ನಡೆದಿದ್ದ ಜಿಲ್ಲಾ 25ನೇ ವರ್ಷದ ಜಿಲ್ಲಾ ಸಾಹಿತ್ಯ ಸಮ್ಮೇಳನದಲ್ಲಿ ಹಿರಿಯ ಸಾಹಿತ್ಯ ಡಾ.ಅರ್.ಜಿ. ಗುಂದಿಯವರನ್ನ ರಜತ ಗೌರವಕ್ಕೆ ಆಯ್ಕೆ ಮಾಡಲಾಗಿತ್ತು. ಆದರೆ ಆ ಸಮ್ಮೇಳನದ ಸಂದರ್ಭದಲ್ಲಿ ಅನಿವಾರ್ಯ ಕಾರಣಗಳಿಂದ ಅವರಿಗೆ ಭಾಗವಹಿಸಲು ಸಾಧ್ಯವಾಗಿರಲಿಲ್ಲ. ಹಾಗಾಗಿ ಆ ಗೌರವವನ್ನು ಇಲ್ಲಿ ನೀಡುತ್ತಿದ್ದೇವೆ ಎಂದರು. ಈ ಸಂದರ್ಭದಲ್ಲಿ ಕಸಾಪ ಅಂಕೋಲಾ ತಾಲೂಕು ಘಟಕದ ಅಧ್ಯಕ್ಷ ಗೋಪಾಲಕೃಷ್ಣನಾಯಕ, ಜಿಲ್ಲಾ ಗೌರವ ಕಾರ್ಯದರ್ಶಿ ಜಾರ್ಜ ಫರ್ನಾಂಡೀಸ್, ಶಿಕ್ಷಣಾಧಿಕಾರಿ ಮಂಗಲಲಕ್ಷ್ಮೀ ನಾಯಕ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ ನಾಯ್ಕ, ವಕೀಲ ಬಿ.ಡಿ. ನಾಯ್ಕ, ವರದಿಗಾರ ನಾಗರಾಜ ಮಂಜಗುಣಿ, ಜಿ.ಪಂ. ಮಾಜಿ ಸದಸ್ಯೆ ಶಾಂತಿ ಆಗೇರ, ತಿಮ್ಮಣ್ಣ ಭಟ್, ಮಹಾಂತೇಶ ರೇವಡಿ, ಜೆ. ಪ್ರೇಮಾನಂದ, ರಫಿಕ್ ಶೇಖ್, ಸುಜಿತ್ ನಾಯ್ಕ, ಎಂ.ಬಿ.ಆಗೇರ ಇತರರಿದ್ದರು.



# ಮಹಿಳೆಯರ ಸುಪ್ತ ಪ್ರತಿಭೆಯ ಅನಾವರಣಕ್ಕೆ ತರಬೇತಿಗಳು ಸಹಕಾರಿ : ಸುಧಾ ಶೆಟ್ಟಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಭಾರತೀಯ ವಿಕಾಸ ಟ್ರಸ್ಟ್ ಮಣಿಪಾಲ, ಸಂಗಮ ಸೇವಾ ಸಂಸ್ಥೆ ಅಂಕೋಲಾ, ಶಾರದಾಂಬಾ ಮಹಿಳಾ ಮಂಡಳ ಅಂಕೋಲಾ ಆಶ್ರಯದಲ್ಲಿ ನೋಮಿ ನೆಟ್ವರ್ಕ್ ಇವರ ಪ್ರಾಯೋಜಕತ್ವದಲ್ಲಿ ಮಹಿಳೆಯರಿಗಾಗಿ ಬ್ಯೂಟಿ ಪಾರ್ಲರ್ ಹಾಗೂ ಸೀರೆ ಬಾಕ್ಸ್ ಫೋಲ್ಡಿಂಗ್ ತರಬೇತಿಯ ಉದ್ಘಾಟನಾ ಕಾರ್ಯಕ್ರಮ ಪಟ್ಟಣದ ಅರ್ಬನ್ ಬ್ಯಾಂಕ್ ಮಹಡಿಯ ಮೇಲೆ ಶುಕ್ರವಾರ ನಡೆಯಿತು. ಕಲಾಭಾರತಿ ಟ್ರಸ್ಟ್ ಕಾರ್ಯದರ್ಶಿ ಸುಧಾ ಪ್ರಶಾಂತ ಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಂತಹ ತರಬೇತಿಗಳು ಮಹಿಳೆಯರಲ್ಲಿ ಅಡಗಿರುವ ಸುಪ್ತ ಪ್ರತಿಭೆ ಹೊರಹೊಮ್ಮಲು ಸಹಕಾರಿಯಾಗುತ್ತದೆ. ಹಾಗೇ ಇದು ಕೂಡ ಒಂದು ಉದ್ಯೋಗವಾಗಿದ್ದು ಮಹಿಳೆಯರು ಸ್ವಾವಲಂಬಿ ಜೀವನ ನಡೆಸಲು ಈ ತರಬೇತಿ ಪೂರಕವಾಗಿದೆ ಎಂದರು.



ಸಂಗಮ ಸೇವಾ ಸಂಸ್ಥೆಯ ರವೀಂದ್ರ ಎನ್. ಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಅಂಕೋಲಾ ಅರ್ಬನ್ ಬ್ಯಾಂಕ್‌ನ ಪ್ರಧಾನ ವ್ಯವಸ್ಥಾಪಕ ಉದಯ ಶೆಣ್ವಿ, ಭಾರತೀಯ ವಿಕಾಸ ಟ್ರಸ್ಟ್ ಮಣಿಪಾಲ ಇದರ ಯೋಜನಾಧಿಕಾರಿ ರಾಘವೇಂದ್ರ ಅಚಾರ್ಯ ಉಪಸ್ಥಿತರಿದ್ದರು.

ಶ್ರೇಯಾ ಶೆಟ್ಟಿ ಪ್ರಾರ್ಥಿಸಿದರು. ಶಾರದಾಂಬಾ ಮಹಿಳಾ ಮಂಡಳದ ಕಾರ್ಯದರ್ಶಿ ಜ್ಯೋತಿ ಕೆ. ಬಾಳೇಹಿತ್ತಲ್ ಸ್ವಾಗತಿಸಿದರು. ಕೆಎಲ್‌ಇ ಸಂಸ್ಥೆಯ ತಿಮ್ಮಣ್ಣ ಭಟ್ ನಿರೂಪಿಸಿದರು. ತರಬೇತಿದಾರರಾದ ಮಾಯಾ ಕೃಷ್ಣಾನಂದ ಶೆಟ್ಟಿ ಇತರರಿದ್ದರು.

# ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಸರ್ಕಾರಿ ಶಾಲೆಗಳ ದತ್ತು: ಶ್ಲಾಘನೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಮೂಲಸೌಕರ್ಯವನ್ನು ಮೇಲ್ದರ್ಜೆಗೇರಿಸಿ, ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವ ಗುಣಮಟ್ಟದ ಶಿಕ್ಷಣವನ್ನು ನೀಡುವ ಉದ್ದೇಶದಿಂದ ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ನಾಗೇಂದ್ರ ಅವರು ವಿಶೇಷ ಹೆಜ್ಜೆ ಇಟ್ಟಿದ್ದಾರೆ.

ಹಾಗಾಗಿ ಅವರು ತಮ್ಮ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಕ್ಷೇತ್ರದ ಬಂಡಿಹಟ್ಟಿ ಮತ್ತು ಎತ್ತಿನ ಬೂದಿಹಾಳ್ ಗ್ರಾಮದ ಸರ್ಕಾರಿ ಶಾಲೆಗಳ ಸಂಪೂರ್ಣ ಅಭಿವೃದ್ಧಿಗಾಗಿ ತಲಾ 10 ಲಕ್ಷ ರೂಪಾಯಿಗಳ ವಿಶೇಷ ಅನುದಾನವನ್ನು ಬಿಡುಗಡೆಗೊಳಿಸಿದ್ದು, ಶುಕ್ರವಾರ ಈ ಶಾಲೆಗಳನ್ನು ದತ್ತು ಪಡೆದುಕೊಂಡರು.

ಆಯ್ಕೆಯಾದ ಎರಡು ಶಾಲೆಗಳ ಅಭಿವೃದ್ಧಿಗೆ ತಲಾ 10 ಲಕ್ಷ ರೂ. ಗಳಂತೆ ಒಟ್ಟು 20 ಲಕ್ಷ ರೂ. ಅನುದಾನ ಬಿಡುಗಡೆಗೊಳಿಸಿದ್ದಾರೆ. ಸರ್ಕಾರಿ ಶಾಲೆಗಳಲ್ಲಿನ ಮೂಲಸೌಕರ್ಯ ಕೊರತೆಯನ್ನು ನೀಗಿಸುವುದು, ಡಿಜಿಟಲ್ ಕಲಿಕೆಗೆ ಉತ್ತೇಜನ ಮತ್ತು ಆಕರ್ಷಕ ಶಾಲಾ ವಾತಾವರಣ ನಿರ್ಮಾಣ ಮಾಡುವುದಾಗಿದೆ.

ಈ ಅನುದಾನದಡಿ ಶಾಲಾ ಕಟ್ಟಡಗಳ ದುರಸ್ತಿ, ಸುಣ್ಣ–ಬಣ್ಣ, ಆಧುನಿಕ ಶೌಚಾಲಯಗಳ ನಿರ್ಮಾಣ, ಕುಡಿಯುವ ನೀರಿನ ವ್ಯವಸ್ಥೆ, ಸ್ಮಾರ್ಟ್ ಕ್ಲಾಸ್ ರೂಮ್ ಹಾಗೂ ಪೀಠೋಪಕರಣಗಳ ವ್ಯವಸ್ಥೆಯನ್ನು ಮಾಡಲಾಗುತ್ತದೆ.

*ಶ್ಲಾಘನೆ:*

ಶಾಸಕರ ಈ ಜನಪರ ನಿರ್ಧಾರಕ್ಕೆ ಕ್ಷೇತ್ರದ ಸಾರ್ವಜನಿಕರು ಮತ್ತು ಪೋಷಕರಿಂದ ವ್ಯಾಪಕ ಶ್ಲಾಘನೆ ವ್ಯಕ್ತವಾಗಿದೆ. ಖಾಸಗಿ ಶಾಲೆಗಳ ವ್ಯಾಮೋಹದ ನಡುವೆ, ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಈ ಮಟ್ಟದ ಅನುದಾನ ನೀಡಿರುವುದು ಗ್ರಾಮೀಣ ಭಾಗದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗಲಿದೆ ಎಂದು ಸ್ಥಳೀಯ ಮುಖಂಡರು ಹರ್ಷ ವ್ಯಕ್ತಪಡಿಸಿದರು.

## ಎನ್ಐಎಸ್ಎಂ ಮತ್ತು ಬಿವಿವಿ ಸಂಘದ ನಡುವೆ ಒಡಂಬಡಿಕೆಗೆ ಸಹಿ



**ಬಾಗಲಕೋಟೆ:** ಭಾರತದ ಷೇರುಪೇಟೆ ಮತ್ತು ಹಣಕಾಸು ಮಾರುಕಟ್ಟೆ ಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಜ್ಞಾನ ಹಾಗೂ ಉದ್ಯೋಗಾರ್ಹತೆಯನ್ನು ವೃದ್ಧಿಸುವ ಉದ್ದೇಶದಿಂದ, ನಾಷನಲ್ ಇನ್ಸ್ಟಿಟ್ಯೂಟ್ ಆಫ್ ಸೆಕ್ಯೂರಿಟೀಸ್ ಮಾರ್ಕೆಟ್ (NISM) ಮತ್ತು ಬಿ.ವಿ.ವಿ. ಸಂಘದ ನಡುವೆ ಒಡಂಬಡಿಕೆ ಪತ್ರಕ್ಕೆ ಶುಕ್ರವಾರ ಸಹಿ ಹಾಕಲಾಗಿದೆ.

ಸಂಘದ ಆಡಳಿತ ಕಛೇರಿಯಲ್ಲಿ ಬಿ.ವಿ.ವಿ. ಸಂಘದ ಕಾರ್ಯಾಧ್ಯಕ್ಷ ಡಾ. ವೀರಣ್ಣ ಚರಂತಿಮಠ ಹಾಗೂ ಎನ್ಐಎಸ್ಎಂನ ಪಾಲುದಾರಿಕೆ ಮತ್ತು ಮಾರುಕಟ್ಟೆ ವಿಭಾಗ-2ರ ಜನರಲ್ ಮ್ಯಾನೇಜರ್ ಸಂಜೀವ್ ಬಜಾಜ್ ಪರಸ್ಪರ ಒಡಂಬಡಿಕೆಗೆ ಸಹಿ ಹಾಕಿದರು.

ಈ ಒಡಂಬಡಿಕೆ ವ್ಯಾಪ್ತಿಯಲ್ಲಿ ಬಿ.ವಿ.ವಿ ಸಂಘದ ಅಧೀನದಲ್ಲಿರುವ ಸುಮಾರು 11 ಶಿಕ್ಷಣ ಸಂಸ್ಥೆಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗಿದ್ದು, ಬಿ.ವಿ.ವಿ. ಸಂಘದ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ವಿದ್ಯಾಗಿರಿ ಬಾಗಲಕೋಟೆ ಸಂಸ್ಥೆಯು ಎನ್ಐಎಸ್ಎಂ ಪರೀಕ್ಷಾ ಕೇಂದ್ರದ ಸಮನ್ವಯ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದೆ. ಈ ಸಂದರ್ಭದಲ್ಲಿ ಬಿ.ವಿ.ವಿ. ಸಂಘದ ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ ಹಾಗೂ ಬಿ.ವಿ.ವಿ ಸಂಘದ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜಮೆಂಟ ಸ್ಟಡೀಸ್‌ನ ನಿರ್ದೇಶಕ ಡಾ.ಪ್ರಕಾಶ ಕೆ. ವಡವಡಗಿ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಷೇರು ಮಾರುಕಟ್ಟೆ ಸಂಬಂಧಿಯ ವಿಷಯಗಳಲ್ಲಿ ತರಬೇತಿ ನೀಡುವುದು ಹಾಗೂ ಎನ್ಐಎಸ್ಎಂ ಪ್ರಮಾಣಪತ್ರಗಳನ್ನು ಪಡೆಯಲು ನೆರವಾಗುವುದರ ಜೊತೆಗೆ ವಿದ್ಯಾರ್ಥಿಗಳ ವೃತ್ತಿಪರ ಜ್ಞಾನ, ಕೌಶಲ್ಯ ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು ಈ ಒಡಂಬಡಿಕೆಯ ಪ್ರಮುಖ ಉದ್ದೇಶವಾಗಿದೆ ಎಂದು ಬಿ.ವಿ.ವಿ ಸಂಘದ ಅಧ್ಯಕ್ಷ ಡಾ.ವೀರಣ್ಣ ಸಿ ಚರಂತಿಮಠ ತಿಳಿಸಿದರು.

## ಗಜಾನನ ಬಾಲೆ ನೂತನ ಸಿಇಒ ಆಗಿ ಆಯ್ಕೆ

**ಬಾಗಲಕೋಟೆ:** ಜಿಲ್ಲಾ ಪಂಚಾಯತ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಗಜಾನನ ಬಾಲೆ ಶುಕ್ರವಾರ ಅಧಿಕಾರ ವಹಿಸಿಕೊಂಡರು.



ಸಿಇಓ ಹೆಚ್ಚುವರಿ ಪ್ರಭಾರ ವಹಿಸಿಕೊಂಡಿದ್ದ ಜಿಲ್ಲಾಧಿಕಾರಿ ಸಂಗಪ್ಪ ಅವರಿಂದ ಬಾಲೆ ಅಧಿಕಾರ ಸ್ವೀಕರಿಸಿದರು. ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಕುಡಚಿಯ ಶಂಕರ ಮತ್ತು ಸುಜಾತಾ ದಂಪತಿಗಳ ಮಗನಾದ ಗಜಾನನ ಬಾಲೆ ಇಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ವಿಭಾಗದ ಇಂಜಿನೀಯರಿಂಗ್ ಪದವಿ, 2022 ರಲ್ಲಿ ಐ.ಎ.ಎಸ್ ಪಡೆದಿದ್ದಾರೆ. ಪ್ರಾರಂಭದಲ್ಲಿ ರಾಯಚೂರು ಉಪವಿಭಾಗಾಧಿಕಾರಿಯಾಗಿ ನಂತರ ಬಾಗಲಕೋಟೆ ಯುಕೆಪಿಯ ಮಹಾ ವ್ಯವಸ್ಥಾಪಕರಾಗಿ ಕೆಲಸ ನಿರ್ವಹಿಸಿದ್ದಾರೆ. ಸದ್ಯ ಬಾಗಲಕೋಟೆ ಜಿ.ಪಂ ಸಿಇಓ ಹುದ್ದೆಯ ಅಧಿಕಾರ ವಹಿಸಿಕೊಂಡು, ಈ ಹುದ್ದೆಯ ಜೊತೆಗೆ ಹೆಚ್ಚುವರಿಯಾಗಿ ಯುಕೆಪಿಯ ಮಹಾ ವ್ಯವಸ್ಥಾಪಕ ಹುದ್ದೆಯ ಪ್ರಭಾರವನ್ನು ನೋಡಿಕೊಳ್ಳುತ್ತಾರೆ.

ಅಧಿಕಾರ ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ಜಿಲ್ಲೆಯ ಸಮಗ್ರ ಅಭಿವೃದ್ದಿಗೆ ಆದ್ಯತೆ ನೀಡಲಾಗುವುದು. ಸರಕಾರದ ವಿವಿಧ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದೊಂದಿಗೆ ಗ್ರಾಮೀಣಾಭಿವೃದ್ಧಿ, ಕುಡಿಯುವ ನೀರು, ಶಿಕ್ಷಣ, ಆರೋಗ್ಯ, ಸ್ವಚ್ಛತೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನಕ್ಕೆ ವಿಶೇಷ ಒತ್ತು ನೀಡಲಾಗುವುದೆಂದು ತಿಳಿಸಿದರು.

ಜಿ.ಪಂ ವ್ಯಾಪ್ತಿಯ ಎಲ್ಲ ಇಲಾಖೆಗಳ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಜನಸ್ನೇಹಿ ಆಡಳಿತಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗುವುದೆಂದು ಅವರು ತಿಳಿಸಿದರು. ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ, ಯುಕೆಪಿಯ ಉಪ ಮಹಾ ವ್ಯವಸ್ಥಾಪಕ ಮಹಾದೇವ ಮುರಗಿ, ಕೃಷಿ ಇಲಾಖೆಯ ಉಪನಿರ್ದೇಶಕ ಕೆ.ಎಸ್.ಅಗಸನಾಳ, ಜಿ.ಪಂ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ ಸೇರಿದಂತೆ ಇತರರು ಇದ್ದರು.

## ಬಾಲವಿಕಾಸ ನಡೆ ಪಾಲಕರ ಕಡೆ



**ಬಾಗಲಕೋಟೆ:** ಜಿಲ್ಲಾಡಳಿತ, ಜಿ.ಪಂ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಮಗ್ರ ಶಿಶು ಅಭಿವೃದ್ದಿ ಯೋಜನೆ ಸಹಯೋಗದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಬಾಲವಿಕಾಸ ನಡೆ ಪಾಲಕರ ಕಡೆ ಕಾರ್ಯಕ್ರಮ ಜರುಗಿತು. ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಅಡಿವೇಶ ಇಟಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳ ಕಲಿಕಾ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಪಾಲಕರ ಜವಾಬ್ದಾರಿ ಮಹತ್ವದ್ದಾಗಿದೆ ಎಂದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ್ ದಿಡ್ಡಿ ಮಾತನಾಡಿ, ಪೋಷಕರಿಗೆ ಕಾನೂನಿನ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ ಮೊಬೈಲ್ ಬಳಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತರಾಗಬೇಕು ಎಂದು ತಿಳಿಸಿದರು. ಕರ್ನಾಟಕ ಬಾಲವಿಕಾಸ ಅಕಾಡೆಮಿ ಯೋಜನಾ ನಿರ್ದೇಶಕ ವೀರುಪಾಕ್ಷ ಪಾಟೀಲ ಬಾಲವಿಕಾಸದ ಅಂಶಗಳ ಕುರಿತು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪ್ರಭಾಕರ ಕೆ, ಕಾರ್ಯಕ್ರಮದ ಗುರಿ- ಉದ್ದೇಶ ಗಳ ಬಗ್ಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಸಿಡಿಪಿಓ ರಮೇಶ ಸೂಳಿಕೇರಿ, ನವಲಗುಂದ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಮಹ್ಮದ ರಫಿ, ಜಿಲ್ಲಾ ಮಿಷನ್ ಶಕ್ತಿ ಸಂಯೋಜಕ ಸುರೇಮ ಹುಲಮನಿ, ಆರೋಗ್ಯ ಇಲಾಖೆಯ ರಾಜು ಜಿಗಜಿನ್ನಿ ಉಪಸ್ಥಿತರಿದ್ದರು.

# 32 ಕೆರೆಗಳ ನೀರಿನ ಗುಣಮಟ್ಟ ಸುಧಾರಿಸಲು ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಜಿಬಿಎ ವ್ಯಾಪ್ತಿಯಲ್ಲಿ ಕ್ಲಾಸ್ 'ಇ' ವರ್ಗಕ್ಕೆ ಸೇರಿದ 32 ಕೆರೆಗಳ ನೀರಿನ ಗುಣಮಟ್ಟವನ್ನು ಸುಧಾರಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಬಿಎ ವ್ಯಾಪ್ತಿಯ ಕೆ-100 ರಾಜಕಾಲುವೆ, ಕ್ಲಾಸ್ 'ಇ' ವರ್ಗಕ್ಕೆ ಸೇರಿರುವ ಕೆರೆಗಳು ಹಾಗೂ ರಸ್ತೆ ಪುನಶ್ಚೇತನಕ್ಕೆ ಸಂಬಂಧಿಸಿದಂತೆ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಪಾಲಿಕೆ ಒಡೆತನದ 182 ಕೆರೆಗಳಿದ್ದು, ಅವುಗಳಲ್ಲಿ 32 ಕೆರೆಗಳ ನೀರಿನ ಗುಣಮಟ್ಟವು ಕ್ಲಾಸ್ 'ಇ' ವರ್ಗಕ್ಕೆ ಸೇರಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಏಪ್ರಿಲ್-2026ರಲ್ಲಿ ನೀಡಿರುವ ವರದಿಯಲ್ಲಿ ಉಲ್ಲೇಖಿಸಿದೆ. ಈ ಸಂಬಂಧ ಆಯಾ ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿರುವ ಕ್ಲಾಸ್ 'ಇ' ವರ್ಗದ ಕೆರೆಗಳನ್ನು ಪರಿಶೀಲಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಜಿಬಿಎ ವ್ಯಾಪ್ತಿಯಲ್ಲಿ ಕೇಂದ್ರ ನಗರ ಪಾಲಿಕೆಯಲ್ಲಿ 1 ಕೆರೆ, ಉತ್ತರ ನಗರ ಪಾಲಿಕೆಯಲ್ಲಿ 8 ಕೆರೆ, ದಕ್ಷಿಣ ನಗರ ಪಾಲಿಕೆಯಲ್ಲಿ 7 ಕೆರೆ, ಪೂರ್ವ ನಗರ ಪಾಲಿಕೆಯಲ್ಲಿ 12 ಕೆರೆ ಹಾಗೂ ಪಶ್ಚಿಮ ನಗರ ಪಾಲಿಕೆಯಲ್ಲಿ 4 ಕೆರೆಗಳು ಸೇರಿದಂತೆ ಒಟ್ಟು 32 ಕೆರೆಗಳು ಕ್ಲಾಸ್ 'ಇ' ವರ್ಗದಲ್ಲಿವೆ. ಈ ಸಂಬಂಧ ಪಾಲಿಕೆ ಹಾಗೂ ಜಲಮಂಡಳಿ ಅಧಿಕಾರಿಗಳು ಜಂಟಿಯಾಗಿ ಪರಿಶೀಲನೆ ನಡೆಸಿ, ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿದು ವರದಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿದರು.

**ಕೆ-100ಕ್ಕೆ ಸೀವೇಜ್ ಸೇರ್ಪಡೆ ತಡೆಯಬೇಕು:**

ಕೆ-100 ರಾಜಕಾಲುವೆ ಮಾರ್ಗದಲ್ಲಿ 19 ಸ್ಥಳಗಳಲ್ಲಿ ಕೊಳಚೆ ನೀರು ಸೇರುತ್ತಿದ್ದು, ಅದನ್ನು ಸಂಪೂರ್ಣವಾಗಿ ತಡೆಯಬೇಕಿದೆ. ಈ ಸಂಬಂಧ ಜಲಮಂಡಳಿ ಹಾಗೂ ಪಾಲಿಕೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಸಮಸ್ಯೆಯ ಮೂಲವನ್ನು ಗುರುತಿಸಿ ರಾಜಕಾಲುವೆಗೆ ಕೊಳಚೆ ನೀರು ಸೇರುವುದನ್ನು ತಡೆಯಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಮಿಷನ್ ರಸ್ತೆಯಲ್ಲಿ ಕೆಲವು ಮನೆಗಳಿಂದ ನೇರವಾಗಿ ರಾಜಕಾಲುವೆಗೆ ಕೊಳಚೆ ನೀರು ಹರಿಯುತ್ತಿದ್ದು, ಯಾವ ಮನೆಗಳಿಂದ ಕೊಳಚೆ ನೀರು ಬರುತ್ತಿದೆ ಎಂಬುದನ್ನು ಪರಿಶೀಲಿಸಿ, ಸಂಬಂಧಿಸಿದವರಿಗೆ ನೋಟಿಸ್ ನೀಡಿ ಸಮಸ್ಯೆ ಸರಿಪಡಿಸಿಕೊಳ್ಳಲು ಸೂಚಿಸಬೇಕು. ಕೆ-109ರ ಕೆಎಸ್ ಗಾರ್ಡನ್ ಸಮೀಪ ರಾಜಕಾಲುವೆ ಭಾಗದಲ್ಲಿ ಒಳಚರಂಡಿ ಪೈಪ್ ಹಾದು ಹೋಗಿದ್ದು, ಭಾರಿ ಮಳೆಯ ಸಂದರ್ಭದಲ್ಲಿ ಒಳಚರಂಡಿ ನೀರು ಉಕ್ಕಿ ಹರಿದು ಸಮಸ್ಯೆ ಉಂಟಾಗುತ್ತಿದೆ. ಆದ್ದರಿಂದ ಆ ಭಾಗವನ್ನು ಮರು ವಿನ್ಯಾಸಗೊಳಿಸಿ(ರೀ-ಮಾಡೆಲಿಂಗ್) ಸಮಸ್ಯೆ ಪರಿಹರಿಸಬೇಕು ಎಂದು ತಿಳಿಸಿದರು.

ಡ್ರೈಯಿಂಗ್ ಯುನಿಟ್‌ಗಳಿಂದ ಬಣ್ಣ ಮಿಶ್ರಿತ ನೀರು ಕೆ-100ಕ್ಕೆ ಸೇರುತ್ತಿದ್ದು, ಅದನ್ನು ತಡೆಯುವ ಸಲುವಾಗಿ ಸ್ಥಳ ಪರಿಶೀಲನೆ ನಡೆಸಿ ಸೂಕ್ತ ಯೋಜನೆ ರೂಪಿಸಿ ವರದಿ ಸಲ್ಲಿಸಬೇಕು. ಜೊತೆಗೆ ಕೆ-100 ಮಾರ್ಗದಲ್ಲಿ ನೀರಿನ ಗುಣಮಟ್ಟವನ್ನು ನಿಯಮಿತವಾಗಿ ಪರಿಶೀಲಿಸಿ ವರದಿ ನೀಡಬೇಕು ಎಂದು ಸೂಚಿಸಿದರು.

**ರಾಜಕಾಲುವೆ ಮೇಲಿರುವ ಕಟ್ಟಡ ತೆರವುಗೊಳಿಸಿ:**

ಕೆ-100 ಮಾರ್ಗದ ಜೆಸಿ ರಸ್ತೆ ಸಮೀಪ ರಾಜಕಾಲುವೆ ಮೇಲಿರುವ ಎರಡು ಕಟ್ಟಡಗಳನ್ನು ತೆರವುಗೊಳಿಸಬೇಕು. ಈ ಸಂಬಂಧ ಕೇಂದ್ರ ನಗರ ಪಾಲಿಕೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಕಟ್ಟಡಗಳನ್ನು ನೆಲಸಮಗೊಳಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

**ಜಲಮಂಡಳಿ ಕಾಮಗಾರಿಗಳ ಸ್ಥಳ ಪರಿಶೀಲಿಸಿ:**

ಜಿಬಿಎ ವ್ಯಾಪ್ತಿಯಲ್ಲಿ ಜಲಮಂಡಳಿಯಿಂದ ಕಳೆದ ಎರಡು ವರ್ಷಗಳಲ್ಲಿ ಪೂರ್ಣಗೊಳಿಸಿರುವ ಕಾಮಗಾರಿಗಳು, ಪ್ರಸ್ತುತ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಹಾಗೂ ಮುಂದಿನ ಎರಡು ವರ್ಷಗಳಿಗೆ ಪ್ರಸ್ತಾವನೆಯಲ್ಲಿರುವ ಕಾಮಗಾರಿ ಸ್ಥಳಗಳನ್ನು ಪಾಲಿಕೆ ಹಾಗೂ ಜಲಮಂಡಳಿ ಅಧಿಕಾರಿಗಳು ಜಂಟಿಯಾಗಿ ಪರಿಶೀಲಿಸಬೇಕು. ಕಾಮಗಾರಿ ಪೂರ್ಣಗೊಂಡಿರುವ ಪ್ರದೇಶಗಳಲ್ಲಿ ರಸ್ತೆ ಪುನಶ್ಚೇತನ ಕಾರ್ಯದ ಗುಣಮಟ್ಟವನ್ನು ಪರಿಶೀಲಿಸಿ, ಪುನಶ್ಚೇತನ ಮಾಡದಿರುವ ರಸ್ತೆಗಳನ್ನು ಗುರುತಿಸಿ ಪಟ್ಟಿ ಸಿದ್ಧಪಡಿಸಿ ವರದಿ ಸಲ್ಲಿಸಬೇಕು. ಕಾಮಗಾರಿ ಪೂರ್ಣಗೊಂಡ ಪ್ರದೇಶಗಳಲ್ಲಿ ಪುನಶ್ಚೇತನ ಕಾರ್ಯ ಸಮರ್ಪಕವಾಗಿ ನಡೆದಿರುವ ಕುರಿತು ದೃಢೀಕೃತ ವರದಿಯನ್ನು ಸಲ್ಲಿಸುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ವಿಶೇಷ ಆಯುಕ್ತರಾದ ಸುಷಮಾ ಗೋಡಬೋಲೆ, ಆಯುಕ್ತರಾದ ರಮೇಶ್ ಡಿ.ಎಸ್., ಪೊಮ್ಮಲ ಸುನೀಲ್ ಕುಮಾರ್, ಜಿ. ಜಗದೀಶ್, ಡಾ. ರಾಜೇಂದ್ರ ಕೆ.ವಿ., ಅಪರ ಆಯುಕ್ತರಾದ ಲೋಖಂಡೆ ಸ್ನೇಹಲ್ ಸುಧಾಕರ್, ಮುಖ್ಯ ಅಭಿಯಂತರರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ) ಹಾಗೂ ಜಲಮಂಡಳಿ ಅಧಿಕಾರಿಗಳು ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ತಾಯಿ ಮತ್ತು ಶಿಶು ಮರಣ ಶೂನ್ಯಕ್ಕೆ ತನ್ನಿ: ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ

• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ**

ಗರ್ಭಿಣಿಯರು ಮತ್ತು ನವಜಾತ ಶಿಶುಗಳ ಆರೋಗ್ಯ ರಕ್ಷಣೆಗೆ ಪ್ರತಿಯೊಬ್ಬರು ಕಾಳಜಿವಹಿಸಬೇಕು. ಅದರಲ್ಲೂ ಗ್ರಾಮೀಣ ಪ್ರದೇಶಗಳಲ್ಲಿ ತಾಯಿ ಮತ್ತು ಶಿಶು ಮರಣಗಳ ಪ್ರಮಾಣವನ್ನು ಶೂನ್ಯಕ್ಕೆ ತರಲು ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶುಕ್ರವಾರ ಆರೋಗ್ಯ ಇಲಾಖೆವತಿಯಿಂದ ಆಯೋಜಿಸಲಾಗಿದ್ದ ತಾಯಿ ಮರಣ ಮತ್ತು ಶಿಶು ಮರಣ ಕುರಿತ ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ 9 ತಾಯಿ ಮರಣ ಮತ್ತು 3 ಶಿಶು ಮರಣ ಸಂಭವಿಸಿವೆ. ಆದ್ದರಿಂದ ಆರೋಗ್ಯಕ್ಕೆ ಸಂಬಂಧಪಟ್ಟ ವಿಚಾರದಲ್ಲಿ ಸಣ್ಣ ನಿರ್ಲಕ್ಷ್ಯವೂ ದೊಡ್ಡ ಅನಾಹುತಕ್ಕೆ ದಾರಿ ಮಾಡಿಕೊಡಬಹುದು. ಆದ್ದರಿಂದ ಪ್ರತಿಯೊಬ್ಬ ವೈದ್ಯಾಧಿಕಾರಿಯೂ ಕರ್ತವ್ಯದ ಅವಧಿಯಲ್ಲಿ ಅತ್ಯಂತ ಜಾಗರೂಕತೆಯಿಂದ ನಡೆದುಕೊಳ್ಳಬೇಕು. ರೋಗಿಗಳಿಗೆ ಯಾವುದೇ ಚಿಕಿತ್ಸೆ ಅಥವಾ ಚುಚ್ಚುಮದ್ದು ನೀಡುವ ಮುನ್ನ ಔಷಧಿಯ ಗುಣಮಟ್ಟ ಹಾಗೂ ಮುಖ್ಯವಾಗಿ ಎಕ್ಸ್‌ಪೈರಿ ದಿನಾಂಕವನ್ನು ಪ್ರತಿಯೊಂದನ್ನೂ ಕಡ್ಡಾಯವಾಗಿ ಪರಿಶೀಲಿಸಿಕೊಳ್ಳಬೇಕು. ಆಸ್ಪತ್ರೆಗೆ ಬರುವ ರೋಗಿಗಳ, ವಿಶೇಷವಾಗಿ ಗರ್ಭಿಣಿಯರ ಆರೋಗ್ಯದ ಸ್ಥಿತಿಗತಿಯನ್ನು ತಕ್ಷಣವೇ ಅರಿತು ತ್ವರಿತವಾಗಿ ಚಿಕಿತ್ಸೆ ಆರಂಭಿಸಬೇಕು. ಸ್ಥಳೀಯವಾಗಿ ಚಿಕಿತ್ಸೆ ನೀಡುವುದು ಅಸಾಧ್ಯವೆನಿಸಿದರೆ, ತಕ್ಷಣವೇ ಉನ್ನತ ಮಟ್ಟದ ಆಸ್ಪತ್ರೆಗೆ ಕೊಂಡೊಯ್ಯುವಂತೆ ಶಿಫಾರಸ್ಸು ಮಾಡಬೇಕು.

ಹೆರಿಗೆಯಂತಹ ಸೂಕ್ಷ್ಮ ಸಂದರ್ಭಗಳಲ್ಲಿ ಯಾವುದೇ ರೀತಿಯ ಆಲಸ್ಯ, ನಿರ್ಲಕ್ಷ್ಯ ವಹಿಸದೆ, ಲಭ್ಯವಿರುವ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳ ಬಳಸಿಕೊಂಡು ಜೀವ ಉಳಿಸುವ ಕೆಲಸವಾಗಬೇಕು. ಕೇವಲ ವೈದ್ಯರಷ್ಟೇ ಅಲ್ಲದೆ, ಚಿಕಿತ್ಸೆ ಅರಸಿ ಬರುವ ರೋಗಿಗಳು ಮತ್ತು ಅವರ ಕುಟುಂಬದವರು ಸಹ ವೈದ್ಯಾಧಿಕಾರಿಗಳು ನೀಡುವ ಸಲಹೆ, ಸೂಚನೆಗಳನ್ನು ಪಾಲಿಸಬೇಕು. ಗರ್ಭಿಣಿಯರು ಕಾಲಕಾಲಕ್ಕೆ ತಪಾಸಣೆ ಮಾಡಿಸಿಕೊಳ್ಳುವುದು, ಪೌಷ್ಟಿಕ ಆಹಾರ ಸೇವನೆ ಮತ್ತು ವೈದ್ಯರು ಸೂಚಿಸಿದ ನಿಯಮ ಪಾಲಿಸುವುದೂ ಅಷ್ಟೇ ಮುಖ್ಯ. ಆರೋಗ್ಯದ ವಿಷಯದಲ್ಲಿ ಸಾರ್ವಜನಿಕರು ಆಲಸ್ಯ ತೋರಿದಲ್ಲಿ ಅಥವಾ ರೋಗದ ಲಕ್ಷಣಗಳ ಮುಚ್ಚಿಟ್ಟಲ್ಲಿ ಸಾವು-ನೋವುಗಳು ಸಂಭವಿಸುವ ಸಾಧ್ಯತೆ ಹೆಚ್ಚಿರುತ್ತದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳಲ್ಲಿ ಅಗತ್ಯ ಮೂಲ ಸೌಕರ್ಯಗಳ ಒಳಗೊಂಡಿರಬೇಕು. ಆಂಬುಲೆನ್ಸ್ ಸೇವೆಗಳು ಸದಾ ಸನ್ನದ್ಧವಾಗಿರುವಂತೆ ನೋಡಿಕೊಳ್ಳಬೇಕು. ಗ್ರಾಮೀಣ ಭಾಗದ ಆಶಾ ಕಾರ್ಯಕರ್ತೆಯರು ಮತ್ತು ಎಎನ್‌ಎಂಗಳು ತಳಮಟ್ಟದಲ್ಲಿ ಗರ್ಭಿಣಿಯರ ನೋಂದಣಿ ಹಾಗೂ ಹೈ-ರಿಸ್ಕ್ ಗರ್ಭಿಣಿಯರನ್ನು ಗುರುತಿಸಿ ಸಕಾಲಕ್ಕೆ ಆಸ್ಪತ್ರೆಗೆ ದಾಖಲಿಸುವ ಪ್ರಕ್ರಿಯೆ ಮತ್ತಷ್ಟು ಚುರುಕುಗೊಳಿಸಬೇಕು. ಪ್ರತಿಯೊಂದು ಜೀವವೂ ಅಮೂಲ್ಯ. ಆಸ್ಪತ್ರೆಗೆ ಬರುವ ಸಾರ್ವಜನಿಕರಿಗೆ ಗುಣಮಟ್ಟದ ಮತ್ತು ಸುರಕ್ಷಿತ ಚಿಕಿತ್ಸೆ ಸಿಗಬೇಕು. ಇದರಲ್ಲಿ ಯಾವುದೇ ಲೋಪ ದೋಷಗಳಾದರೆ ಸಂಬಂಧಪಟ್ಟ ವೈದ್ಯಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಈ ವೇಳೆ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಎಲ್.ಆರ್.ಶಂಕರ್ ನಾಯ್ಕ, ಡಾ.ಜಂಬಯ್ಯ, ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ವಿನಯ್, ಕ್ಷಯರೋಗ ನಿರ್ಮೂಲನ ಅಧಿಕಾರಿ ಡಾ.ಭಾಸ್ಕರ್, ಕುಷ್ಟರೋಗ ನಿರ್ಮೂಲನ ಅಧಿಕಾರಿ ಡಾ.ರಾಧಿಕಾ, ಡಾ.ಷಣ್ಮುಖ ನಾಯ್ಕ, ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಸತೀಶ್ ಚಂದ್ರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಇದ್ದರು.

# ಬಿವಿವಿ ಸಂಘದ ನೇತೃತ್ವದಲ್ಲಿ ಯೋಗ ದಿನಾಚರಣೆ 21ಕ್ಕೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ನೇತೃತ್ವದಲ್ಲಿ ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಗರದ ಮೂರು ಸ್ಥಳಗಳಲ್ಲಿ ಏಕಕಾಲದಲ್ಲಿ ಆಯೋಜಿಸಲಾಗಿದ್ದು, ಸುಮಾರು 10 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದಾರೆ ಎಂದು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ತಿಳಿಸಿದರು.

ನಗರದ ಬಿ.ವಿ.ವಿ. ಸಂಘದ ಮಿನಿ ಸಭಾಭವನದಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಆರೋಗ್ಯಕರ ಜೀವನಕ್ಕಾಗಿ ಯೋಗ" ಎಂಬ ಘೋಷವಾಕ್ಯದಡಿ ಯೋಗ ದಿನಾಚರಣೆ ನಡೆಯಲಿದ್ದು, ಸಾರ್ವಜನಿಕರು ಮುಕ್ತವಾಗಿ ಭಾಗವಹಿಸಬಹುದು ಎಂದರು.

ನಗರದ ಬಿ.ವಿ.ವಿ. ಸಂಘದ ಕ್ರೀಡಾಂಗಣ, ವಿದ್ಯಾಗಿರಿಯ ಬಸವೇಶ್ವರ ಇಂಜಿನಿಯರಿಂಗ್ ಕಾಲೇಜು ಮೈದಾನ ಹಾಗೂ ಎಸ್. ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಮೈದಾನಗಳಲ್ಲಿ ಬೆಳಿಗ್ಗೆ 6.45 ರಿಂದ 7.45 ರವರೆಗೆ ಯೋಗಾಭ್ಯಾಸ ನಡೆಯಲಿದ್ದು ಭಾಗವಹಿಸುವವರು ಬೆಳಿಗ್ಗೆ 6.30 ರೊಳಗೆ ಸ್ಥಳಕ್ಕೆ ಆಗಮಿಸಬೇಕು ಎಂದರು.

ಬಿ.ವಿ.ವಿ. ಸಂಘದ ಹಳೆಯ ಆವರಣದಲ್ಲಿ ಡಾ.ವೀರಣ್ಣ ಚರಂತಿಮಠ, ಎಸ್.ಎನ್. ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಅಶೋಕ ಎಂ. ಸಜ್ಜನ (ಬೇವೂರ) ಹಾಗೂ ಬಸವೇಶ್ವರ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ಮಹೇಶ ಎನ್. ಅಥಣಿ ಅವರ ನೇತೃತ್ವದಲ್ಲಿ ಕಾರ್ಯಕ್ರಮಗಳು ಜರುಗಲಿವೆ. ಬಾಗಲಕೋಟೆ ಸಂಘದ ಮೈದಾನದಲ್ಲಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಡಾ. ಆರ್.ಬಿ. ಹೊಸಮನಿ ನೇತೃತ್ವದ ತಂಡ ಮಾರ್ಗದರ್ಶನ ಮಾಡಲಿದ್ದು, ಎಸ್. ನಿಜಲಿಂಗಪ್ಪ ಮೇಡಿಕಲ್ ಕಾಲೇಜಿ ಮೈದಾನದಲ್ಲಿ ಯೋಗ ಪರಿಣತ ವೈದ್ಯರಾದ ಡಾ. ಅಶೋಕ ಬಡಕಲಿ, ಡಾ. ಎಸ್. ಎಸ್. ದೊಡಮನಿ, ಡಾ. ಮೀನಾಕ್ಷಿ ಬಡಕಲಿ ಹಾಗೂ ಯೋಗ ಸ್ಪರ್ಧೆ ವಿಜೇತ ವಿದ್ಯಾರ್ಥಿಗಳು ವಿವಿಧ ಯೋಗಾಸನಗಳ ಪ್ರದರ್ಶನ ನೀಡಲಿದ್ದಾರೆ. ವಿದ್ಯಾಗಿರಿಯ ಇಂಜನೀಯರಿಂಗ್ ಕಾಲೇಜು ಮೈದಾನದಲ್ಲಿ ವಿವೇಕಾನಂದ ಯೋಗ ವಿಜ್ಞಾನ ಕೇಂದ್ರದ ಸಂಗಣ್ಣ ಕುಪ್ಪಸ್ತ ಅವರ ತಂಡ ಯೋಗದ ಮಾರ್ಗದರ್ಶನ ನಡೆಸಿಕೊಡಲಿದೆ ಎಂದು ಚರಂತಿಮಠ ಹೇಳಿದರು. ಶಾಲೆ-ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು, ಸಿಬ್ಬಂದಿ ಹಾಗೂ ಸಾರ್ವಜನಿಕರು ಸೇರಿದಂತೆ ಸುಮಾರು 10 ಸಾವಿರ ಶಿಬಿರಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ವಿನಂತಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿ.ವಿ.ವಿ. ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಅಶೋಕ ಸಜ್ಜನ ಬೇವೂರ, ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಬಾವಿ, ಮಲ್ಲಿಕಾರ್ಜುನ ಸಾಸನೂರ, ಮಹಾಂತೇಶ ಶೆಟ್ಟರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಲಂಚದ ಸ್ವೀಕರಿಸುತ್ತಿದ್ದವರು ಲೋಕಾಯುಕ್ತರ ಬಲೆಗೆ



• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಲಂಚದ ಸ್ವೀಕರಿಸುತ್ತಿದ್ದ ಯಡ್ರಾಮಿ ಠಾಣೆ ಪಿಎಸ್ಐ ಮುದರೆಡ್ಡಿ, ಸಿಬ್ಬಂದಿ ಸಿದ್ದಣ್ಣ ಬಿರಾದಾರ್ ಅವರು ಲೋಕಾಯುಕ್ತರ ಬಲೆಗೆ ಬಿದ್ದ ಘಟನೆ ಯಡ್ರಾಮಿ ಪೋಲಿಸ್ ಠಾಣೆ ಆವರಣದಲ್ಲಿ ಗುರುವಾರ ರಾತ್ರಿ ವರದಿಯಾಗಿದೆ.

ಅಕ್ಕಿ ವ್ಯಾಪಾರಕ್ಕೆ ಸಂಬಂಧಿಸಿದಂತೆ ಸಹಕಾರ ನೀಡುವುದಾಗಿ ಆನಂದ್ ಕುಸ್ತಿ ಎಂಬುವವರಿಗೆ ಹಣದ ಬೇಡಿಕೆ ಇಟ್ಟಿದ್ದರು. ಆಗ ಕಳೆದ 12 ರಂದು ಫೋನ್ ಪೇ ಮೂಲಕ 20,000ರೂ.ಗಳನ್ನು ಪಡೆದಿದ್ದರು. ಮತ್ತೆ 30,000ರೂ.ಗಳಿಗೆ ಬೇಡಿಕೆ ಇಟ್ಟಿದ್ದು ಅದರಲ್ಲಿ 20,000ರೂ.ಗಳನ್ನು ಯಡ್ರಾಮಿ ಪೋಲಿಸ್ ಠಾಣೆ-ಯ ಆವರಣದಲ್ಲಿ ಗುರುವಾರ ರಾತ್ರಿ ಪಡೆಯುವಾಗ ಲೋಕಾಯುಕ್ತರು ದಾಳಿ ಮಾಡಿ ಇಬ್ಬರನ್ನೂ ಬಂಧಿಸಿದರು.

ಲೋಕಾಯುಕ್ತ ಎಸ್‌ಪಿ ಸಿದ್ದರಾಜು ಅವರ ಮಾರ್ಗದರ್ಶನದಲ್ಲಿ ಇನ್‌ಸ್ಪೆಕ್ಟರ್ ಅರುಣ್ ಮರಗುಂಡಿ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸಿಬ್ಬಂದಿ ಮಲ್ಲಿನಾಥ, ರಾನೋಜಿ ಬಸವರಾಜ್ ಅವರೂ ಸೇರಿದಂತೆ ಇತರ ಅಧಿಕಾರಿಗಳು ಭಾಗವಹಿಸಿದ್ದರು.

ವಿಚಿತ್ರ ಸಂಗತಿಯೆಂದರೆ, ಗಂಭೀರ ಪ್ರಕರಣಗಳಲ್ಲಿ ಹಾಗೂ ಆರೋಪಿಗಳ ಬಂಧನದಲ್ಲಿ ತೋರಿದ ಕಾರ್ಯಕ್ಷಮತೆಗಾಗಿ ಪಿಎಸ್ಐ ವಿಶ್ವನಾಥ ಮುದರೆಡ್ಡಿ ಅವರು 2024-25ನೇ ಸಾಲಿನಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಚಿನ್ನದ ಪದಕವನ್ನು ಪಡೆದಿದ್ದರು. ಬಂಧಿತ ಆರೋಪಿಗಳನ್ನು ನಗರದ ಐವಾನ್ ಶಾಹಿ ಅತಿಥಿಗೃಹದ ಆವರಣದಲ್ಲಿ ಇರುವ ಲೋಕಾಯುಕ್ತರ ಕಚೇರಿಗೆ ಕರೆತಂದು ಹೆಚ್ಚಿನ ವಿಚಾರಣೆಗೆ ಒಳಪಡಿಸಿದ್ದಾರೆ ಎಂದು ಅಧಿಕೃತ ಮೂಲಗಳು ಹೇಳಿವೆ.

# ಕರಾಟೆ ಆಯ್ಕೆ ಸ್ಪರ್ಧೆ, 85 ಕರಾಟೆ ಕ್ರೀಡಾಪಟುಗಳು ಭಾಗಿ

• **ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ**

ನಗರದ ಸರ್ ಎಂ.ವಿ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಕೆ.ವಿ ಆಂಗ್ಲ ಶಾಲೆಯ ವತಿಯಿಂದ ಚಿಕ್ಕಬಳ್ಳಾಪುರ, ಕೋಲಾರ ಹಾಗೂ ತುಮಕೂರು ಜಿಲ್ಲೆಗಳ ವ್ಯಾಪ್ತಿಯ ಐಸಿಎಸ್‌ಇ ಶಾಲಾ ಮಂಡಳಿಯ ಕರಾಟೆ ಪಟುಗಳಿಗಾಗಿ ಝೋನಲ್ ಸೆಲೆಕ್ಷನ್ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಈ ಸ್ಪರ್ಧೆಯಲ್ಲಿ ಮೂರು ಜಿಲ್ಲೆಗಳ ಸುಮಾರು 85 ಕರಾಟೆ ಕ್ರೀಡಾಪಟುಗಳು ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.



ಭಾಗವಹಿಸಿದ ಎಲ್ಲಾ ಸ್ಪರ್ಧಿಗಳಿಗೆ ಭಾಗವಹಿಸುವಿಕೆ ಪ್ರಮಾಣಪತ್ರಗಳನ್ನು ಹಾಗೂ ಉತ್ತಮ ಪ್ರದರ್ಶನ ನೀಡಿ ರೀಜಿನಲ್ ಸ್ಪರ್ಧೆಗೆ ಆಯ್ಕೆಯಾದ ಕ್ರೀಡಾಪಟುಗಳಿಗೆ ಪದಕ ಮತ್ತು ಪ್ರಮಾಣಪತ್ರಗಳನ್ನು ವಿತರಿಸಲಾಗಿದೆ ಎಂದು ಕೆ.ವಿ ಆಂಗ್ಲ ಶಾಲೆಯ ಮುಖ್ಯ ತರಬೇತುದಾರ ಮಹಮ್ಮದ್ ಝುಬಿಯುಲ್ಲಾ ಅವರು ತಿಳಿಸಿದರು. ಐಸಿಎಸ್‌ಇ ಶಾಲಾ ಮಂಡಳಿಯ ವತಿಯಿಂದ ಆಯೋಜಿಸಿರುವ ಈ ಝೋನಲ್ ಕರಾಟೆ ಸ್ಪರ್ಧೆಯ ಮೂಲಕ ಇಂದು ರೀಜಿನಲ್ ಹಂತದ ಆಯ್ಕೆ ಪ್ರಕ್ರಿಯೆ ನಡೆಸಲಾಗಿದೆ.ಭಾಗವಹಿಸಿದ 85 ಕರಾಟೆ ಪಟುಗಳು ತಮ್ಮ ಪ್ರತಿಭೆಯನ್ನು ಉತ್ತಮವಾಗಿ ಪ್ರದರ್ಶಿಸಿದ್ದು, ತರಬೇತಿ ಅವಧಿಯಲ್ಲಿಯೇ ಸ್ಪರ್ಧಿಗಳಿಗೆ ಸೂಕ್ತ ರೀತಿಯಲ್ಲಿ ಸಿದ್ಧತೆ ಮಾಡಲಾಗಿದೆ ಎಂದು ಝುಬಿಯುಲ್ಲಾ ಹೇಳಿದರು.ಚಿಕ್ಕಬಳ್ಳಾಪುರ ಸೇರಿದಂತೆ ಮೂರು ಜಿಲ್ಲೆಗಳ ಕ್ರೀಡಾಪಟುಗಳು ಉತ್ತಮ ಪ್ರದರ್ಶನ ನೀಡಿದ್ದು, ಆಯ್ಕೆಯಾದವರು ಮುಂದಿನ ದಿನಗಳಲ್ಲಿ ನಡೆಯುವ ಪ್ರಾದೇಶಿಕ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ ಎಂದರು. ಕರಾಟೆ ತರಬೇತುದಾರ ಕಾರ್ತಿಕ್ ಮಾತನಾಡಿ,ಇಂದಿನ ದಿನಗಳಲ್ಲಿ ಮಕ್ಕಳು ಮೊಬೈಲ್ ಫೋನ್ ಬಳಕೆಗೆ ಹೆಚ್ಚು ಒಲವು ತೋರುತ್ತಿದ್ದು,ಅದು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಆದ್ದರಿಂದ ಮಕ್ಕಳು ದೈಹಿಕ ಚಟುವಟಿಕೆ ಹಾಗೂ ಕ್ರೀಡೆಗಳಲ್ಲಿ ಭಾಗವಹಿಸುವುದು ಮುಖ್ಯವಾಗಿದೆ ವಿಶೇಷವಾಗಿ ಕರಾಟೆ ಅಭ್ಯಾಸದಿಂದ ಮಕ್ಕಳ ದೈಹಿಕ ಸಾಮರ್ಥ್ಯ ಮತ್ತು ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಜೀವನದ ಮುಂದಿನ ಬೆಳವಣಿಗೆಗೂ ಇದು ಸಹಕಾರಿಯಾಗುತ್ತದೆ.ಮುಖ್ಯವಾಗಿ ಹೆಣ್ಣು ಮಕ್ಕಳಿಗೆ ಆತ್ಮರಕ್ಷಣೆ ಅತ್ಯಂತ ಅಗತ್ಯವಾಗಿರುವುದರಿಂದ ಕರಾಟೆ ಕಲಿಯುವುದು ಬಹಳ ಮುಖ್ಯ ಎಂದು ತಿಳಿಸಿದರು.ಇಂದಿನ ಸ್ಪರ್ಧೆಯಲ್ಲಿ ಹೆಣ್ಣು ಮಕ್ಕಳು ಸಹ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿರುವುದು ಸಂತಸದ ವಿಷಯ ಎಂದು ಹೇಳಿದರು.ಈ ಸಂದರ್ಭದಲ್ಲಿ ಕರಾಟೆ ಸ್ಪರ್ಧೆಯ ಮುಖ್ಯ ರೆಫರಿಗಳಾದ ಅರುಣ್ ಕುಮಾರ್ ಹಾಗೂ ರೋಹಿತ್ ಈಶ್ವರ್ ಅವರು ತೀರ್ಪುಗಾರರಾಗಿ ಕಾರ್ಯನಿರ್ವಹಿಸಿದರು.

# ನೀರಿನ ಬವಣೆ ನೀಗಿಸಲು ಮನವಿ



**ಹಳಿಯಾಳ:** ಪಟ್ಟಣದ G+2 ಆಶ್ರಯ ಬಡಾವಣೆಯ ನಿವಾಸಿಗಳಿಗೆ ನೀರಿನ ಸಮಸ್ಯೆ ಕಳೆದ ಮೂರು ತಿಂಗಳಿಂದ ಎದುರಾಗಿದ್ದು ಇದರ ಬಗ್ಗೆ ಗಮನ ಹರಿಸಬೇಕಾದ ಪುರಸಭೆ ತಿರುಗಿ ನೋಡದ ಕಾರಣ ಇಂದು ಜಿ ಪ್ಲಸ್ ಟು ಬಡಾವಣೆಯ ನಿವಾಸಿಗಳು ತಹಸೀಲ್ದಾರ್ ಹಾಗೂ ಪುರಸಭೆಯ ಮುಖ್ಯ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಕಳೆದ ಮೂರು ತಿಂಗಳಿಂದ ನಮ್ಮ ಬಡಾವಣೆಗೆ ನೀರಿನ ಸರಬರಾಜು ಮಾಡುವಲ್ಲಿ ತೊಂದರೆಯಾಗುತ್ತಿದ್ದು ಒಂದನೇ ಮತ್ತು ಎರಡನೇ ಮಹಡಿಗೆ ಬಹಳ ಸಮಸ್ಯೆ ಉಂಟಾಗಿದ್ದು ತಕ್ಷಣವೇ ನೀರು ಹರಿಸುವ ಕಾರ್ಯಕ್ಕೆ ತಾವು ಮುಂದಾಗಿ ನಮ್ಮ ತೊಂದರೆಗೆ ಸ್ಪಂದಿಸಬೇಕೆಂದು ಮನವಿ ಸಲ್ಲಿಸುತ್ತಾ ಅದೇ ರೀತಿ ಮಳೆಗಾಲ ಸಮಯ ಇರುವುದರಿಂದ ಕೆಳ ಮಹಡಿಯ ಸುತ್ತಮುತ್ತ ನಿರ್ಮಾಣ ಮಾಡಿರುವ ಒಳಚರಂಡಿಯ ನಿಂತು ಸೊಳ್ಳೆಗಳ ಉದ್ಭವದಿಂದ ಮಲೇರಿಯಾ ಡೆಂಗ್ಯೂ ಹರಡದಂತೆ ನಮಗೆ ಒಳ್ಳೆಯ ವಾತಾವರಣ ಕಲ್ಪಿಸಿ ಕೊಡುವಂತೆ ಮನವಿ ಸಲ್ಲಿಸಲಾಯಿತು.

ಮಂಗೇಶ್, ಸುನಿಲ್ ಜೈಕಾರ್, ಹನುಮಂತ, ಸೋನಿಯಾ, ಸಂಗೀತ, ವಿನೋದ್, ರಾಕೇಶ್, ಮುಂತಾದವರು ಉಪಸ್ಥಿತರಿದ್ದರು.

# ಹಸಿರು ಸೇನೆಯಿಂದ ಬೃಹತ್ ಪ್ರತಿಭಟನೆ ನಡೆಸಿ ಮನವಿ




**ವಿಜಯಪುರ:** ವಿದ್ಯುತ್ ಇಲಾಖೆಯನ್ನು ಟಾಟಾ ಪವರ್ ಕಂಪನಿ ಲಿಮಿಟೆಡ್ ಸೇರಿದಂತೆ ಇತರೆ ಖಾಸಗಿ ಸಂಸ್ಥೆಗಳಿಗೆ ವಿದ್ಯುತ್ ವಿತರಣಾ ಪರವಾನಗಿ ನೀಡ ಕೂಡದು ಎಂಬ ಆಕ್ಷಪಣೆ ಮಾಡುವ ಕುರಿತು ಮಾನ್ಯ ಕಾರ್ಯದರ್ಶಿಗಳು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ಬೆಂಗಳೂರುರವರಿಗೆ ದೇವರ ಹಿಪ್ಪರಗಿ ಕೆಇಬಿ ಅಧಿಕಾರಿಗಳಾದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರು ಸಂಗಮೇಶ ಸಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮನಗೌಡ ಪಾಟೀಲ, ಜಿಲ್ಲಾ ಉಪಾಧ್ಯಕ್ಷ ಸಂಪತ್ ಕುಮಾರ್ ಜಮಾದಾರ, ತಾಲೂಕ ಗೌರವಾಧ್ಯಕ್ಷರು ಶಿವಾನಂದಯ್ಯ ಹೀರೆಮಠ, ತಾಲೂಕ ಅಧ್ಯಕ್ಷರು ಈರಪ್ಪ ಕುಳೆಕುಮಟಗಿ, ಉಪಾಧ್ಯಕ್ಷರಾದ ಸಿ ಎಸ್ ಪ್ಯಾಟಿ, ಅಶೋಕ ನಾಯ್ಕೋಡಿ, ಮಹಿಳಾ ಅಧ್ಯಕ್ಷೆ ಚನ್ನಮ್ಮ ಮೇತ್ರಿ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

# ಉಚಿತ ಯೋಗ ತರಬೇತಿ



**ವಿಜಯಪುರ:** ನಗರದ ಸ್ವಚ್ಛತೆ ಹಾಗೂ ಆಡಳಿತದಲ್ಲಿ ನಿರಂತರವಾಗಿ ಶ್ರಮಿಸುತ್ತಿರುವ ಮಹಾನಗರ ಪಾಲಿಕೆಯ ಪೌರಕಾರ್ಮಿಕರು ಹಾಗೂ ಕಚೇರಿ ಸಿಬ್ಬಂದಿಗಳ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಗಾಗಿ ಉಚಿತ ಯೋಗ ಸೆಷನ್‌ಗಳನ್ನು ಆಯೋಜಿಸಲು ವಿನಂತಿಸಲಾಗಿದೆ. ಇಂದು ವಾರ್ಡ್ ನಂ. 22 ರ ಮಹಾನಗರ ಸದಸ್ಯರಾದ ಪ್ರೇಮಾನಂದ ಬಿರಾದಾರ ಅವರ ನೇತೃತ್ವದಲ್ಲಿ, ವಿಜಯಪುರ ಮಹಾನಗರ ಪಾಲಿಕೆಯ ಮಾನ್ಯ ಆಯುಕ್ತರಾದ ವಿಜಯಕುಮಾರ್ ಮೆಕ್ಕಳಕಿ ಅವರನ್ನು ಭೇಟಿ ಮಾಡಿ ಈಶ ಫೌಂಡೇಶನ್ (ಸದ್ಗುರು) ವತಿಯಿಂದ ಪಾಲಿಕೆಯ ಪೌರ ಕಾರ್ಮಿಕರು, ಕಚೇರಿ ಸಿಬ್ಬಂದಿ ಹಾಗೂ ಇತರ ಸಿಬ್ಬಂದಿ ವರ್ಗದವರಿಗಾಗಿ ವಿಶೇಷ ಮತ್ತು ಉಚಿತ ಯೋಗ ಶಿಬಿರಗಳನ್ನು ಹಮ್ಮಿಕೊಳ್ಳುವ ಕುರಿತು ಮಾನ್ಯ ಆಯುಕ್ತರಿಗೆ ವಿನಂತಿ ಪತ್ರವನ್ನು ಸಲ್ಲಿಸಿದರು.




**ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಸಚಿವರಾದ ಕೆ ಎಚ್ ಮುನಿಯಪ್ಪ, ಕೆ ಜೆ ಜಾರ್ಜ್, ಪ್ರಿಯಾಂಕ್ ಖರ್ಗೆ, ಸಿಎಂ ಮುಖ್ಯ ಸಲಹೆಗಾರ ಸುನಿಲ್ ಕನಗೋಳ್, ಸರಕಾರದ ಮುಖ್ಯ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್, ಸಿಎಂ ಆರ್ಥಿಕ ಸಲಹೆಗಾರ ಎಲ್ ಕೆ ಅತೀಕ್, ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ದಿನೇಶ್ ಗೂಳಿಗೌಡ, ಎಸ್ ಆರ್ ಪಾಟೀಲ್, ಪುಷ್ಪಾ ಅಮರನಾಥ್, ಮೆಹರುಸ್ ಖಾನ್, ಬೆಂಗಳೂರು ಜಿಲ್ಲೆ ಅಧ್ಯಕ್ಷ ಕೃಷ್ಣಪ್ಪ ಮತ್ತಿತರರು ಉಪಸ್ಥಿತರಿದ್ದರು.**

# ಯೋಗ ದಿನಾಚರಣೆ ಮುನ್ನೋಟ: ಬೃಹತ್ ಜಾಥಾ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

12 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಇಂದು ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಹಾಗೂ ಆಯುಷ್ ಇಲಾಖೆ ಕಲಬುರಗಿ ಹಾಗೂ ಜಿಲ್ಲಾಮಟ್ಟದ ವಿವಿಧ ಇಲಾಖೆ, ಯೋಗ ಸಂಘ ಸಂಸ್ಥೆಗಳ ಮತ್ತು ಆಯುಷ್ ಕಾಲೇಜಗಳ್ ವತಿಯಿಂದ ಓಗ ಜಾಥಾ ಯೋಗ ನಡಿಗೆ ಕಾರ್ಯಕ್ರಮವನ್ನು ಇಂದು ಹಮ್ಮಿಕೊಳ್ಳಲಾಯಿತು.

ಜೂನ್ 21ರ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಮುನ್ನೋಟವಾಗಿ ನಗರದಲ್ಲಿ ಶುಕ್ರವಾರ ವಿವಿಧ ಯೋಗ ಸಂಸ್ಥೆಗಳು ಹಾಗೂ ಯೋಗ ಅಭ್ಯಾಸಕರಿಂದ ಬೃಹತ್ ಯೋಗ ಜಾಗೃತಿ ಜಾಥಾ ನಡೆಯಿತು.

ನಗರದ ಜಗತ್ ವೃತ್ತದಲ್ಲಿ ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರು 'ಯೋಗ ನಡಿಗೆ'ಗೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಆರೋಗ್ಯಕರ ಜೀವನ ಶೈಲಿಗೆ ಯೋಗ ಪ್ರತಿಯೊಬ್ಬರ ನಿತ್ಯದ ಬದುಕಿನ ಭಾಗವಾಗಬೇಕು ಎಂದರು.




ಜಗತ್ ವೃತ್ತದಿಂದ ಆರಂಭವಾದ ಯೋಗ ನಡಿಗೆಯು ಅನ್ನಪೂರ್ಣ ಕ್ರಾಸ್, ಜಿಲ್ಲಾಧಿಕಾರಿ ಕಚೇರಿ ಎದುರಿನಿಂದ ಸರ್ದಾರ್ ವಲ್ಲಭಾಯಿ ಪಟೇಲ್ ವೃತ್ತದ ಮುಖಾಂತರ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಸಾಗಿತು. ಜಾಥಾದುದ್ದಕ್ಕೂ ಪಾಲ್ಗೊಂಡಿದ್ದ ನೂರಾರು ಯೋಗಾಸಕ್ತರು ಯೋಗದ ಮಹತ್ವ ಸಾರುವ ಘೋಷಣೆಗಳನ್ನು ಕೂಗಿದರು.

**ಗಮನ ಸೆಳೆದ ಘೋಷಣಾ ಫಲಕಗಳು**

ಜಾಥಾದಲ್ಲಿ ಪಾಲ್ಗೊಂಡಿದ್ದ ವಿದ್ಯಾರ್ಥಿಗಳು ಹಾಗೂ ಯೋಗಪಟುಗಳು ಕಾಯಕಲ್ಪಕ್ಕೆ ಯೋಗ, ರೋಗ ಮುಕ್ತಿಗೆ ಯೋಗ, ಮನಸ್ಸಿನ ನಿಯಂತ್ರಣಕ್ಕೆ ಯೋಗವೇ ಮದ್ದು, ಆರೋಗ್ಯವೇ ಭಾಗ್ಯ, ಯೋಗವೇ ಸೌಭಾಗ್ಯ ಹಾಗೂ ನಿತ್ಯವಾದರೆ ಯೋಗಾಭ್ಯಾಸ ದೂರವಾಗಬಹುದು ಎಲ್ಲ ದುರಭ್ಯಾಸ ಎಂಬಿತ್ಯಾದಿ ಭಿತ್ತಿಪತ್ರಗಳನ್ನು ಹಿಡಿದು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಖ್ಯಾತನಾಳ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಪ್ರಭಾರ ಅಧಿಕಾರಿಗಳಾದ ಸಂಗಮೇಶ, ಶಿಕ್ಷಣ ಇಲಾಖೆಯ ಶಂಕ್ರಮ್ಮ ಢವಳಗಿ, ರಾಜು ನಾಯಕ, ಆಯುಷ್ ವೈದ್ಯಾಧಿಕಾರಿಗಳ ಸಂಘದ ರಾಜ್ಯಾಧ್ಯಕ್ಷ ಡಾ. ಶ್ರೀಶೈಲ ಪಾಟೀಲ್, ಜಿಲ್ಲೆಯ ಯೋಗ ಸಂಸ್ಥೆಗಳಾದ ಪತಂಜಲಿ ಯೋಗ ಸಮಿತಿ ಸಂಸ್ಥೆಯಿಂದ ವಿಜಯಕುಮಾರ ಸಾಲಿಮಠ, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ರಾಗಿಣಿ ಅಕ್ಕ ಹಾಗೂ ಶರಣಬಸಪ್ಪ ಹೀರಾ, ಗುಲಬರ್ಗಾ ವಿಶ್ವವಿದ್ಯಾಲಯ ಯೋಗತರಬೇತಿದಾರರು ಚಂದ್ರಕಾಂತ ಬಿರಾದಾರ, ಜಾಥಾದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಆಯುಷ ಇಲಾಖೆಯ ಅಧಿಕಾರಿಗಳು, ವಿವಿಧ ಆಯುಷ ಕಾಲೇಜುಗಳ ವಿದ್ಯಾರ್ಥಿಗಳು, ಡಾ.ಎ.ಬಿ.ಮಾಲಕರಡ್ಡಿ ಹೋಮಿಯೋಪಥಿಕ್ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಮತ್ತು ನೂರಾರು ಜನ ಉತ್ಸಾಹದಿಂದ ಪಾಲ್ಗೊಂಡಿದ್ದರು.

# ಮೂರು ಕೋಟಿ ರೂಪಾಯಿ ವೆಚ್ಚದಲ್ಲಿ ಚೆಕ್ ಡ್ಯಾಮ್: ಗುದ್ದಲಿ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಬಂಗಾರಪೇಟೆ

ಮೂರು ಕೋಟಿ ರೂಪಾಯಿ ವೆಚ್ಚದಲ್ಲಿ ಚೆಕ್ ಡ್ಯಾಮ್ ನಿರ್ಮಾಣ ಮಾಡಲು ಇಂದು ಗುದ್ದಲಿ ಪೂಜೆಯನ್ನು ನೆರವೇರಿಸಿದ್ದೇವೆ ಗುತ್ತಿಗೆದಾರರು ಇನ್ನು ಎರಡು ತಿಂಗಳ ಒಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸುತ್ತೇವೆಂದು ತಿಳಿಸಿದ್ದಾರೆ ಎಂದು ಶಾಸಕ ಎಸ್.ಎನ್ ನಾರಾಯಣಸ್ವಾಮಿ ತಿಳಿಸಿದರು.

ತಾಲೂಕಿನ ಸಣ್ಣನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಕಸಬಾ ಹೋಬಳಿಯ ಹೊಸಕೋಟೆ ಮತ್ತು ಬೆಂಡಿಗಾನಹಳ್ಳಿ ಮಧ್ಯ ವೃಷಬಾವತಿ ನದಿಗೆ ಅಡ್ಡಲಾಗಿ ಚೇಕ್ ಡ್ಯಾಂ ಹಾಗೂ ಕಾಲುವೆ ಕಾಮಗಾರಿಗೆ ಗುದ್ದಲಿ ಪೂಜೆಯನ್ನು ನೆರವೇರಿಸಿ ಮಾತನಾಡಿದ ಅವರು ಬೆಂಡಿಗಾನಹಳ್ಳಿ ಚೆಕ್ ಡ್ಯಾಂಗೆ 2ಕೋಟಿ ಹಾಗೂ ಕುಪ್ಪನಹಳ್ಳಿ ಭಾಗದ ಕೃಷ್ಣೆಗೌಡ ಕುಂಟೆ ಚೆಕ್ ಡ್ಯಾಮ್ ಮತ್ತು ಕಾಲುವೆಗೆ ಒಂದು ಕೋಟಿ ಒಟ್ಟು 3ಕೋಟಿ ರೂಪಾಯಿ ವೆಚ್ಚದಲ್ಲಿ ಚೆಕ್ ಡ್ಯಾಮ್ ಗಳನ್ನು ನಿರ್ಮಿಸಲಾಗುತ್ತಿದೆ ಎಂದರು.

ರೈತರಿಗೆ ಅನುಕೂಲವಾಗಲು ಈ ಒಂದು ಚೆಕ್ ಡ್ಯಾಂ ಗಳನ್ನು ನಿರ್ಮಿಸಲಾಗುತ್ತಿದೆ. ಈ



ನಿಟ್ಟಿನಲ್ಲಿ ತಾಲೂಕಿನ ಎಲ್ಲಾ ಗ್ರಾಮಗಳನ್ನು ಅಭಿವೃದ್ಧಿ ಮಾಡಲಾಗುತ್ತಿದೆ. ಈಗಾಗಲೇ ದೇಶಿಹಳ್ಳಿ ಗ್ರಾಮದಲ್ಲಿ ಡಬಲ್ ರಸ್ತೆಯನ್ನು ಸಹ ನಿರ್ಮಿಸಲಾಗಿದೆ. ಹಾಗೂ ಸರ್ವೆ ನಂಬರ್ 15ರಲ್ಲಿ ಅನಧಿಕೃತವಾಗಿ ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡ ನಿರ್ಮಿಸಿರುವ ಡಾಬಾ ಹಾಗೂ ಮನೆಗಳನ್ನು ಇನ್ನೂ ಕೇವಲ 15 ದಿನಗಳಲ್ಲಿ ತೆರವುಗೊಳಿಸಲಾಗುತ್ತದೆ ಎಂದು ಹೇಳಿದರು. ಹಾಗೂ ಹೊಸಕೋಟೆ ಮರವಳ್ಳಿ ಗ್ರಾಮವನ್ನು ಬಂಗಾರಪೇಟೆ ರೀತಿ ಅಭಿವೃದ್ಧಿ ಮಾಡಬೇಕು ಎಂಬ ಆಸೆ ಇದೆ. ಆ ನಿಟ್ಟಿನಲ್ಲಿ ರಸ್ತೆಯನ್ನು ಅಗಲೀಕರಣ ಮಾಡಿ ಗ್ರಾಮಕ್ಕೆ ಬಸ್ ಬರುವ ರೀತಿ ಅನುಕೂಲ ಮಾಡಿಕೊಡಲಾಗುವುದು. ಈಗ ಗ್ರಾಮಕ್ಕೆ ಬಸ್ಸುಗಳು ಬರಲು ರೈಲ್ವೆ ಬ್ರಿಜ್ ಬಳಿ ಆಗುತ್ತಿಲ್ಲ, ಅದಕ್ಕಾಗಿ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗುತ್ತದೆ ಎಂದು ಹೇಳಿದರು.

ಅದಕ್ಕಾಗಿ ಗ್ರಾಮಸ್ಥರು 25 ಅಡಿ ಅಗಲ ರಸ್ತೆಯನ್ನು ತೆರವು ಮಾಡಿಕೊಟ್ಟರೆ.ಈ ಭಾಗ–ಕ್ಕೆ ಎರಡು ಕೋಟಿ ರೂಪಾಯಿ ವೆಚ್ಚದಲ್ಲಿ ಸಿಸಿ ರಸ್ತೆಯನ್ನು ಹಾಕಿಕೊಡುತ್ತೇನೆ ಆದರಿಂದ ಎಲ್ಲಾ ರೈತರಿಗೂ ಅನುಕೂಲವಾಗುತ್ತದೆ ಹಾಗೂ ಈ ಭಾಗದಲ್ಲಿ ರೇಷ್ಮೆ ಬೆಳೆಗಾರರು ಹೆಚ್ಚಾಗಿರುವುದು ಕಾರಣ ಅನುಕುಲವಾಗುತ್ತದೆ ಆದ್ದರಿಂದ ಎಲ್ಲರೂ ದೊಡ್ಡ ಮನಸ್ಸು ಮಾಡಿ ನಮ್ಮಟ್ಟಿಗೆ ಕೈಜೋಡಿಸಿದರೆ ರಸ್ತೆಗಳು ಅಭಿವೃದ್ಧಿಯಾಗಲು ಸಹಕಾರಿಯಾಗುತ್ತದೆ ಎಂದು ಶಾಸಕರು ಗ್ರಾಮಸ್ಥರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಚಂಗಾರೆಡ್ಡಿ,ಮಂಜುನಾಥ್, ಮುನೆಂದ್ರ,ಕೆಸರನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಂಜುನಾಥ್, ಮುಖಂಡರಾದ ನಾರಾಯಣಸ್ವಾಮಿ, ಕೃಷ್ಣಾರೆಡ್ಡಿ, ರಾಮ್ ಮೂರ್ತಿ, ಮುನಿರಾಜು, ಶ್ರೀನಿವಾಸ್, ವೆಂಕಟೇಶ್ ರೆಡ್ಡಿ,ಗೋಪಿ ಮತ್ತು ಸಣ್ಣ ನೀರಾವರಿ ಅಧಿಕಾರಿ ಹರಿಕೃಷ್ಣ ಹಾಗೂ ಮೊದಲಾದವರು ಇದ್ದರು.

# ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ವರ್ಗಾವಣೆ: ಆತಂಕ

• ಮಲ್ಲಮ್ಮ ನುಡಿ ವಾರ್ತೆ ದಾಂಡೇಲಿ

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ಸೇವೆ ಸಲ್ಲಿಸುತ್ತಿರುವ ಮೂರು ವೈದ್ಯರನ್ನು ವರ್ಗಾವಣೆ ಮಾಡಿದ್ದರಿಂದ ಸಾರ್ವಜನಿಕರಿಗೆ ಅತಂಕ ಹಾಗೂ ದಾಂಡೇಲಿಯನ್ನು ತಾಲ್ಲೂಕು ಆಸ್ಪತ್ರೆಯಾಗಿ ಘೋಷಿಸುವಂತೆ ಒತ್ತಾಯಿಸಿ ದಾಂಡೇಲಿ ಸಮಗ್ರ ಅಭಿವೃದ್ಧಿ ಹೋರಾಟ ಸಮಿತಿಯ ವತಿಯಿಂದ ಪ್ರತಿಭಟನೆ ನಡೆಸಿ ಸಂಬಂಧಿತ ಅಧಿಕಾರಿಗಳಿಗೆ ಹಲವಾರು ಬಾರಿ ಲಿಖಿತ ಮನವಿ ಸಲ್ಲಿಸಲಾಯಿತು.

ಮನವಿಯಲ್ಲಿ, ದಾಂಡೇಲಿಯ 50 ಹಾಸಿಗೆಗಳ ಸಾರ್ವಜನಿಕ ಆಸ್ಪತ್ರೆ ಹಾಗೂ 60 ಹಾಸಿಗೆಗಳ ತಾಯಿ–ಮಗು ಆಸ್ಪತ್ರೆ ಕಾರ್ಯನಿ ರ್ವಹಿಸುತ್ತಿದ್ದರೂ, ಒಟ್ಟು ಒಂಬತ್ತು ವೈದ್ಯರ ಹುದ್ದೆಗಳ ಪೈಕಿ ಕೇವಲ ಮೂರು ವೈದ್ಯರು ಮಾತ್ರ ಕರ್ತವ್ಯ ನಿರ್ವ ಹಿಸುತ್ತಿದ್ದಾರೆ ಎಂದು ತಿಳಿಸಲಾಗಿದೆ. ಸಾರ್ವಜನಿಕ ಆಸ್ಪ ತ್ರೆಯಲ್ಲಿ ಒಬ್ಬ ವೈದ್ಯರು ಪ್ರತಿದಿನ 400ರಿಂದ 500ರೋಗಿಗಳನ್ನು



ಪರಿಶೀಲಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ರೋಗಿಗಳಿಗೆ ಸಾಕಷ್ಟು ತೊಂದರೆ ಯಾಗುತ್ತಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು

ಸರ್ಕಾರವು 201 8ರಲ್ಲಿ ದಾಂಡೇಲಿಯನ್ನು ಹೊಸ ತಾಲ್ಲೂಕಾಗಿ ಘೋಷಣೆ ಮಾಡಿದ್ದರೂ, ಇಲ್ಲಿಯವರೆಗೆ ತಾ ಲ್ಲೂಕು ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಗಿಲ್ಲ. ದಾಂಡೇಲಿ ನಗರದ ಜನಸಂಖ್ಯೆ 50 ಸಾವಿರಕ್ಕೂ ಅಧಿಕವಾಗಿದ್ದು, ಸುತ್ತಮುತ್ತಲಿನ ಗ್ರಾಮಗಳ ಜನರೂ ಇದೇ ಆಸ್ಪತ್ರೆಯ ಮೇಲೆ ಅವ ಲಂಬಿತರಾಗಿದ್ದಾರೆ. ಆದ್ದರಿಂದ ಖಾಲಿ ಇರುವ ಆರು ವೈದ್ಯರ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಿ, ದಾಂಡೇಲಿ ಸಾರ್ವಜನಿ ಕ ಆಸ್ಪತ್ರೆಯನ್ನು ತಾಲ್ಲೂಕು ಆಸ್ಪತ್ರೆಯಾಗಿ ಘೋಷಿಸಬೇಕೆಂದು ಒತ್ತಾಯಿಸಲಾಯಿತು.

ಈ ಕುರಿತು ಮನವಿ ಯು.ಟಿ. ಖಾದರ್, ಆರೋಗ್ಯ ಸಚಿವರು, ಶಾಸಕರಾದ ಆರ್.ವಿ.ದೇಶಪಾಂಡೆ, ಜಿಲ್ಲಾಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಸೇರಿದಂತೆ ಸಂಬಂಧಿತ ಅಧಿಕಾರಿಗಳಿಗೆ ಮನವಿ ರವಾನಿಸಲಾಯಿತು.

ಈ ಸಂದರ್ಭದಲ್ಲಿ ಹೋರಾಟ ಸಮಿತಿಯ ಅಧ್ಯಕ್ಷ ಅಕ್ರಂ ಖಾನ್ ಮಾತನಾಡಿ, "ನಮ್ಮ ಸಮಿತಿಯು ಅನೇಕ ಬಾರಿ ಮನವಿ ಸಲ್ಲಿಸಿದ್ದರೂ ತಾಲ್ಲೂಕು ಆಸ್ಪತ್ರೆ ಘೋಷಣೆ ಹಾಗೂ ವೈದ್ಯರ ನೇಮಕಾತಿ ಕುರಿತು ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಶೀಘ್ರದಲ್ಲೇ ಅಗತ್ಯ ಕ್ರಮ ಜರುಗಿಸದಿದ್ದಲ್ಲಿ ಸಾರ್ವಜನಿಕರೊಂದಿಗೆ ಹೋರಾಟವನ್ನು ತೀವ್ರಗೊಳಿಸಲಾಗುವುದು" ಎಂದು ಎಚ್ಚರಿಸಿದರು. ಚಂದ್ರಕಾಂತ್ ನಾಡಿಗೇರ ಮಾತನಾಡಿದರು.

ಈ ಸಂದರ್ಭದಲ್ಲಿ ದಾಂಡೇಲಿ ಸಮಗ್ರ ಅಭಿವೃದ್ಧಿ ಹೋರಾಟ ಸಮಿತಿಯ ಪ ದಾಧಿಕಾರಿಗಳಾದ ಗೌಸ್ ಬೆಟಗೇರಿ, ಫಾರೂಕ್ ಶೇಖ್, ಸಮೀರ್ ಶೇಖ್, ಇನಾಯತ್ ಶೇಖ್, ಮದಾರ್ ಸಾಬ್, ಲಕ್ಷ್ಮೀ ಉಪ್ಪಾರ್, ವಿ.ಕೆ. ಸಿಂಗ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಚಿವ ಸ್ಥಾನ: ಪ್ರಮುಖ ಸವಾಲುಗಳು ಮತ್ತು ನಿರೀಕ್ಷೆಗಳು



**ರಾಜಕೀಯ–ಸವಾಲು**

**● ಎಂ. ಜಂಬುನಾಥ**

**ವರದಿಗಾರ**

ನಾರಾ ಭರತ್ ರೆಡ್ಡಿ ಅವರು 2023ರಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಬಳ್ಳಾರಿ ನಗರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅವರು ಕಾಂಗ್ರೆಸ್ ಪಕ್ಷದ ಯುವ ನಾಯಕರಾಗಿ ಗುರುತಿಸಿಕೊಂಡಿದ್ದಾರೆ.

ಸಚಿವ ಸ್ಥಾನ ದೊರೆತರೆ, ಬಳ್ಳಾರಿ ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಮತ್ತು ಆಡಳಿತಾತ್ಮಕ ಪ್ರಭಾವ ತರುವ ಅವಕಾಶ ಅವರಿಗೆ ಸಿಗಬಹುದು. ಆದರೆ ಜಿಲ್ಲೆಯ ಜನರು ಎದುರಿಸುತ್ತಿರುವ ಹಲವಾರು ಗಂಭೀರ ಸಮಸ್ಯೆಗಳನ್ನು ಪರಿಹರಿಸುವುದು ದೊಡ್ಡ ಸವಾಲಾಗಿರುತ್ತದೆ. ಬಳ್ಳಾರಿ ಜಿಲ್ಲೆಯ ಪ್ರಮುಖ ಸಮಸ್ಯೆಗಳು ಕುಡಿಯುವ ನೀರಿನ ಸಮಸ್ಯೆ ಬೇಸಿಗೆ ಕಾಲದಲ್ಲಿ ಅನೇಕ ಗ್ರಾಮಗಳು ಮತ್ತು ನಗರದ ಕೆಲವು ಪ್ರದೇಶಗಳಲ್ಲಿ ನೀರಿನ ಕೊರತೆ ಉಂಟಾಗುತ್ತದೆ.

ಭೂಗರ್ಭ ಜಲಮಟ್ಟ ಕುಸಿತದಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ.

- **ಶಾಶ್ವತ ನೀರಾವರಿ ಯೋಜನೆಗಳ ಅಗತ್ಯವಿದೆ.**
- **ಉದ್ಯೋಗ ಕೊರತೆ**

ಗಣಿಗಾರಿಕೆ ಮತ್ತು ಉಕ್ಕು ಉದ್ಯಮಗಳಿದ್ದರೂ ಸ್ಥಳೀಯ ಯುವಕರಿಗೆ ಸಮರ್ಪಕ ಉದ್ಯೋಗ



ಸಿಗುತ್ತಿಲ್ಲ. ಕೌಶಲ್ಯಾಭಿವೃದ್ಧಿ ಕೇಂದ್ರಗಳು ಮತ್ತು ಹೊಸ ಕೈಗಾರಿಕೆಗಳ ಅವಶ್ಯಕತೆ ಇದೆ.ಪದವಿ ಪಡೆದ ಯುವಕರು ಬೆಂಗಳೂರು, ಹೈದರಾಬಾದ್ ಮುಂತಾದ ನಗರಗಳಿಗೆ ವಲಸೆ ಹೋಗುತ್ತಿದ್ದಾರೆ. ಗಣಿಗಾರಿಕೆಯ ಪರಿಸರ ಪರಿಣಾಮ ಕಬ್ಬಿಣದ ಅದಿರು ಗಣಿಗಾರಿಕೆಯಿಂದ ಪರಿಸರ ಮಾಲಿನ್ಯ ಹೆಚ್ಚಾಗಿದೆ.

ಧೂಳು, ರಸ್ತೆ ಹಾನಿ ಮತ್ತು ಆರೋಗ್ಯ ಸಮಸ್ಯೆಗಳು ಜನರನ್ನು ಕಾಡುತ್ತಿವೆ.

ಪರಿಸರ ಸಂರಕ್ಷಣೆ ಮತ್ತು ನಿಯಂತ್ರಿತ ಗಣಿಗಾರಿಕೆ ಬಗ್ಗೆ ಜನರು ಒತ್ತಾಯಿಸುತ್ತಿದ್ದಾರೆ.

- **ರಸ್ತೆ ಮತ್ತು ಸಂಚಾರ ಸಮಸ್ಯೆ**

ನಗರದಲ್ಲಿ ಟ್ರಾಫಿಕ್ ದಟ್ಟಣೆ ಹೆಚ್ಚುತ್ತಿದೆ.ಒಳರಸ್ತೆಗಳು ಮತ್ತು ಗ್ರಾಮೀಣ ಸಂಪರ್ಕ ರಸ್ತೆಗಳ ಅಭಿವೃದ್ಧಿ ಅಗತ್ಯವಿದೆ.ಭಾರೀ ವಾಹನಗಳ ಸಂಚಾರದಿಂದ ರಸ್ತೆ ಹಾನಿಯಾಗುತ್ತಿದೆ.ಆರೋಗ್ಯ ಸೇವೆಗಳ ಕೊರತೆಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆಕಂಡುಬರುತ್ತಿದೆ.ಗ್ರಾಮೀಣ ಪ್ರದೇಶಗಳಲ್ಲಿ ಉತ್ತಮ ಆರೋಗ್ಯ ಮೂಲಸೌಕರ್ಯ ಬೇಕಿದೆ. ತಾಯಿ–ಮಗು ಆರೋಗ್ಯ ಸೇವೆಗಳನ್ನು ಇನ್ನಷ್ಟು ಬಲಪಡಿಸಬೇಕಾಗಿದೆ. ಶಿಕ್ಷಣ ಕ್ಷೇತ್ರದ ಸವಾಲುಗಳು

ಸರ್ಕಾರಿ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿ ಅಗತ್ಯ.ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಅವಕಾಶಗಳು ಇನ್ನಷ್ಟು ಬೇಕಾಗಿವೆ.ಗ್ರಾಮೀಣ ವಿದ್ಯಾರ್ಥಿಗಳಿಗೆ ವಸತಿ ಮತ್ತು ಡಿಜಿಟಲ್ ಸೌಲಭ್ಯಗಳ ಕೊರತೆ ಇದೆ.ಕೃಷಿ ಸಂಕಷ್ಟ ಮಳೆ ಅವಲಂಬಿತ ಕೃಷಿ ಇನ್ನೂ ಹೆಚ್ಚಾಗಿದೆ.ಬೆಳೆ ವಿಮೆ,ಬೆಂಬಲ ಬೆಲೆಮತ್ತುನೀರಾವರಿಯೋಜನೆಗಳ ಬೇಡಿಕೆ ಹೆಚ್ಚಿದೆ.ರೈತರಿಗೆ ಮಾರುಕಟ್ಟೆ ಸಂಪರ್ಕ ಮತ್ತು ಸಂಗ್ರಹಣಾ ಸೌಲಭ್ಯಗಳ ಕೊರತೆ ಇದೆ.ಬಳ್ಳಾರಿ ನಗರದ ವಿಶೇಷ ಸಮಸ್ಯೆಗಳು

ಒಳಚರಂಡಿ ವ್ಯವಸ್ಥೆಯ ಸುಧಾರಣೆ.ಘನ ತ್ಯಾಜ್ಯ ನಿರ್ವಹಣೆ.ನಗರವಿಸ್ತರಣೆಗೆಅನುಗುಣವಾಗಿಮೂಲಸೌಕರ್ಯ ಅಭಿವೃದ್ಧಿ.ಕುಡಿಯುವ ನೀರಿನ ವಿತರಣಾ ಜಾಲದ ಆಧುನೀಕರಣ.ಟ್ರಾಫಿಕ್ ನಿರ್ವಹಣೆಮತ್ತುಪಾರ್ಕಿಂಗ್ ವ್ಯವಸ್ಥೆ.ನಾರಾ ಭರತ್ ರೆಡ್ಡಿ ಸಚಿವರಾದರೆ ಜನರು ಮುಖ್ಯವಾಗಿ ಈ ನಿರೀಕ್ಷೆಗಳನ್ನು ಬಳ್ಳಾರಿಗೆ ವಿಶೇಷ ಅಭಿವೃದ್ಧಿ ಪ್ಯಾಕೇಜ್.ಹೊಸಕೈಗಾರಿಕೆಗಳ ಸ್ಥಾಪನೆ.ಶಾಶ್ವತ ನೀರಾವರಿ ಯೋಜನೆಗಳು.ಉತ್ತಮ ರಸ್ತೆ ಮತ್ತುನಗರ ಮೂಲಸೌಕರ್ಯ.ವೈದ್ಯಕೀಯ ಕಾಲೇಜು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಅಭಿವೃದ್ಧಿ.

- **ಯುವಕರಿಗೆ ಉದ್ಯೋಗ ಸೃಷ್ಟಿ.**

ಗಣಿಗಾರಿಕೆ ಆದಾಯದ ಹೆಚ್ಚಿನ ಭಾಗವನ್ನು ಜಿಲ್ಲೆಯ ಅಭಿವೃದ್ಧಿಗೆ ಬಳಸುವುದು.

- **ರಾಜಕೀಯ ಸವಾಲುಗಳು**

ಬಳ್ಳಾರಿಜಿಲ್ಲೆದೀರ್ಘಕಾಲದಿಂದ ರಾಜಕೀಯವಾಗಿ ಅತ್ಯಂತ ಪ್ರಭಾವಿ ಪ್ರದೇಶವಾಗಿದೆ.ವಿವಿಧ ರಾಜಕೀಯ ಗುಂಪುಗಳ ಸ್ಪರ್ಧೆ, ಸ್ಥಳೀಯ ನಾಯಕತ್ವದ ಪೈಪೋಟಿ ಮತ್ತು ಅಭಿವೃದ್ಧಿ ನಿರೀಕ್ಷೆಗಳ ನಡುವೆ ಸಚಿವ ಸ್ಥಾನ ಸಿಕ್ಕರೆ ಭರತ್ ರೆಡ್ಡಿ ಅವರಿಗೆ ಜನರ ವಿಶ್ವಾಸ ಉಳಿಸಿಕೊಂಡು ಸ್ಪಷ್ಟ ಅಭಿವೃದ್ಧಿ ಫಲಿತಾಂಶ ನೀಡುವುದು ದೊಡ್ಡ ಸವಾಲಾಗಲಿದೆ. ಇತ್ತೀಚಿನ ವರ್ಷಗಳಲ್ಲಿ ಜಿಲ್ಲೆಯ ರಾಜಕೀಯ ಬೆಳವಣಿಗೆಗಳು ಮತ್ತು ವಿವಾದಗಳ ಕಾರಣವೂ ಆಡಳಿತಾತ್ಮಕ ಪಾರದರ್ಶಕತೆಯ ಮೇಲೆ ಹೆಚ್ಚಿನ ಗಮನವಿದೆ.

ನಾರಾ ಭರತ್ ರೆಡ್ಡಿಗೆ ಸಚಿವ ಸ್ಥಾನ ದೊ–ರೆತರೆ, ಬಳ್ಳಾರಿ ಜಿಲ್ಲೆಯ ನೀರು, ಉದ್ಯೋಗ, ರಸ್ತೆ, ಆರೋಗ್ಯ, ಶಿಕ್ಷಣ ಮತ್ತು ಕೃಷಿ ಕ್ಷೇತ್ರಗಳ ಸಮಸ್ಯೆಗಳನ್ನು ಪರಿಹರಿಸುವತ್ತ ಜನರು ಹೆಚ್ಚಿನ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಬಳ್ಳಾರಿಯ ಸಮಗ್ರ ಅಭಿವೃದ್ಧಿ ಮತ್ತು ಕೈಗಾರಿಕಾ ಪ್ರಗತಿಯನ್ನು ವೇಗಗೊಳಿಸುವುದು ಅವರ ಮುಂದೆ ಇರುವ ಪ್ರಮುಖ ಪರೀಕ್ಷೆಯಾಗಿರುತ್ತದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number: 08483200222

PRGI NO. 120927
(RNINO:KARKAN/2011/48371)